# ನೆಹೆಮೀಯ

## ಮುನ್ನುಡಿ

ನೆಹೆಮೀಯನ ಈ ಗ್ರಂಥವನ್ನು ನಾಲ್ಕು ಭಾಗಗಳಾಗಿ ವಿಂಗಡಿಸಬಹುದು:

1. ಬಾಬಿಲೋನಿನಿಂದ ಹಾಗೂ ಪರ್ಷಿಯಾದ ರಾಜ ಸೈರಸಿನ ಅಪ್ಪಣೆ ಮೇರೆಗೆ, ಜೆರುಸಲೇಮಿಗೆ ಹಿಂತಿರುಗಿದ ನೆಹೆಮೀಯನು ಜುದೇಯದ ರಾಜ್ಯಪಾಲನಾಗುತ್ತಾನೆ;
2. ಜೆರುಸಲೇಮಿನ ಕೋಟೆಗೋಡೆಗಳನ್ನು ಪುನಃ ಕಟ್ಟಿಸಲು ನಡುಕಟ್ಟಿ ನಿಲ್ಲುತ್ತಾನೆ;
3. ಯಾಜಕ ಎಜ್ರನಿಂದ ಧರ್ಮಶಾಸ್ತ್ರದ ಪಠನ ಮತ್ತು ಸಭಿಕರಿಂದ ಪಾಪನಿವೇದನೆ ನಡೆಯುತ್ತದೆ;
4. ಜುದೇಯ ಪ್ರಾಂತ್ಯದಲ್ಲಿ ತಾನು ರಾಜ್ಯಪಾಲನಾಗಿ ಸಾಧಿಸಿದ ಮತ್ತಿತರ ಧಾರ್ಮಿಕ ಸುಧಾರಣೆಗಳನ್ನು ನೆಹೆಮೀಯನೇ ವಿವರಿಸುತ್ತಾನೆ.

## ಪರಿವಿಡಿ


| | | | | |
|---|---|---|---|---|
| 1. ಜೆರುಸಲೇಮಿಗೆ ಹಿಂದಿರುಗಿಬಂದ ನೆಹೆಮೀಯ | – | 1.1 | – | 2.20 |
| 2. ಕೋಟೆಗೋಡೆಯ ದುರಸ್ತಿ | – | 3.1 | – | 7.73 |
| 3. ಧರ್ಮಶಾಸ್ತ್ರದ ಪಠನ ಹಾಗು ಒಡಂಬಡಿಕೆಯ ಬಗ್ಗೆ ಪ್ರಮಾಣವಚನ | – | 8.1 | – | 10.39 |
| 4. ನೆಹೆಮೀಯನ ಇತರ ಧಾರ್ಮಿಕ ಸುಧಾರಣೆಗಳು | – | 11.1 | – | 13.31 |


## ನೆಹೆಮೀಯನು ಬರೆದ ಚರಿತ್ರೆ
### ಜೆರುಸಲೇಮಿನ ಮೇಲೆ ನೆಹೆಮೀಯನಿಗಿದ್ದ ಅಭಿಮಾನ

**1** ಹಕಲ್ಯನ ಮಗ ನೆಹೆಮೀಯನ ಮಾತುಗಳು: ಇಪ್ಪತ್ತನೆಯ ವರ್ಷದ ಮಾರ್ಗಶಿರಮಾಸದಲ್ಲಿ ನಾನು
ಶೂಷನ್ ಪಟ್ಟಣದ ಅರಮನೆಯಲ್ಲಿದ್ದೆ. 2ಆಗ ನನ್ನ ಸಹೋದರರಲ್ಲಿ ಒಬ್ಬನಾದ ಹನಾನೀಯನು ಹಾಗೂ
ಬೇರೆ ಕೆಲವು ಜನರು ಜುದೇಯದಿಂದ ನನ್ನ ಬಳಿಗೆ ಬಂದರು. ಸೆರೆಹೋದವರಿಂದ ತಪ್ಪಿಸಿಕೊಂಡ
ಯೆಹೂದ್ಯರ ಮತ್ತು ಜೆರುಸಲೇಮಿನ ಸಮಾಚಾರವನ್ನು ನಾನು ಅವರಲ್ಲಿ ವಿಚಾರಿಸಿದೆ. 3ಅವರು ನನಗೆ,
"ಸೆರೆಯಿಂದ ತಪ್ಪಿಸಿಕೊಂಡು ಈಗ ಆ ನಾಡಿನಲ್ಲಿ ವಾಸಿಸುತ್ತಿರುವವರು ಮಹಾಕಷ್ಟ ನಿಂದೆಗಳಿಗೆ
ಒಳಗಾಗಿದ್ದಾರೆ. ಜೆರುಸಲೇಮಿನ ಪೌಳಿಗೋಡೆಯನ್ನು ಕೆಡವಲಾಗಿದೆ. ಅದರ ಬಾಗಿಲುಗಳು ಬೆಂಕಿಯಿಂದ
ಸುಟ್ಟುಹೋಗಿವೆ," ಎಂದು ಹೇಳಿದರು. 4ನಾನು ಈ ಸಮಾಚಾರವನ್ನು ಕೇಳಿದಾಗ ನೆಲಕಚ್ಚಿ ಕುಳಿತು ಅತ್ತೆ;
ಹಲವಾರು ದಿನಗಳವರೆಗೆ ಶೋಕಿಸಿದೆ, ಉಪವಾಸವಿದ್ದೆ, ಪರಲೋಕದೇವರ ಮುಂದೆ ಪ್ರಾರ್ಥನೆ ಮಾಡುತ್ತಾ
ಇದ್ದೆ.

### ನೆಹೆಮೀಯನ ಪ್ರಾರ್ಥನೆ

5 ನನ್ನ ಪ್ರಾರ್ಥನೆಯಲ್ಲಿ, "ಹೇ ಸರ್ವೇಶ್ವರಾ, ಮಹೋನ್ನತರೂ ಭಯಭಕ್ತಿಗೆ ಪಾತ್ರರೂ ಆಗಿರುವ
ಪರಲೋಕದೇವರೇ, ನಿಮ್ಮನ್ನು ಪ್ರೀತಿಸಿ, ನಿಮ್ಮ ಆಜ್ಞೆಗಳನ್ನು ಅನುಸರಿಸುವವರಿಗೆ ನೀವು ಮಾಡಿದ
ಕೃಪಾವಾಗ್ದಾನಗಳನ್ನು ನೆರವೇರಿಸುವವರೇ, 6ಕೃಪೆಮಾಡಿ ನನಗೆ ಕಿವಿಗೊಡಿ, ಕಟಾಕ್ಷಿಸಿ ನೋಡಿ; ನಿಮ್ಮ
ದಾಸನ ಪ್ರಾರ್ಥನೆಯನ್ನು ಆಲಿಸಿ. ನಾನು ಈಗ ಹಗಲಿರುಳೂ ನಿಮ್ಮ ಸನ್ನಿಧಿಯಲ್ಲಿ ನಿಮ್ಮ ದಾಸರಾದ

ಇಸ್ರಯೇಲರ ಪರವಾಗಿ ಪ್ರಾರ್ಥಿಸುತ್ತಾ ಇದ್ದೇನೆ; ಅವರು ನಿಮಗೆ ವಿರುದ್ಧ ಮಾಡಿದ ಪಾಪಗಳನ್ನು ಅರಿಕೆಮಾಡುತ್ತ ಇದ್ದೇನೆ; ನಾನೂ ನನ್ನ ಪೂರ್ವಜರೂ ಆ ಪಾಪಗಳಲ್ಲಿ ಪಾಲುಗಾರರು. 7ನಾವು ನಿಮಗೆ ದ್ರೋಹಿಗಳಾಗಿ ನಡೆಯುತ್ತಾ ಬಂದೆವು; ನೀವು ನಿಮ್ಮ ದಾಸ ಮೋಶೆಯ ಮುಖಾಂತರ ಕೊಟ್ಟ ಆಜ್ಞಾವಿಧಿನ್ಯಾಯಗಳನ್ನು ನಾವು ಕೈಗೊಳ್ಳಲಿಲ್ಲ. 8ನೀವು ಅವನ ಮುಖಾಂತರ, 'ನೀವು ಅವಿಧೇಯರಾದರೆ ನಿಮ್ಮನ್ನು ಜನಾಂಗಗಳೊಳಗೆ ಚದರಿಸಿ ಬಿಡುವೆನು; 9ನನಗೆ ಅಭಿಮುಖರಾಗಿ ನನ್ನ ಆಜ್ಞೆಗಳನ್ನು ಅನುಸರಿಸಿ ನಡೆದರೆ, ನಿಮ್ಮವರು ಆಕಾಶದ ಕೊನೆಯವರೆಗೆ ಒಯ್ಯಲ್ಪಟ್ಟರೂ ನಾನು ಅವರನ್ನು ಅಲ್ಲಿಂದ ಕೂಡಿಸಿ ನನ್ನ ನಾಮಸ್ಥಾಪನೆಗಾಗಿ ಆರಿಸಿದ ಸ್ಥಳಕ್ಕೆ ಮತ್ತೆ ಬರಮಾಡುವೆನು; ಎಂದು ಹೇಳಿದಿರಲ್ಲವೆ? ಆ ಮಾತನ್ನು ನೆನಪುಮಾಡಿಕೊಳ್ಳಿ, ಸ್ವಾಮೀ. 10ಅವರು ನಿಮ್ಮ ದಾಸರು ಹಾಗೂ ನೀವು ನಿಮ್ಮ ಮಹಾಶಕ್ತಿ, ಭುಜಪರಾಕ್ರಮಗಳಿಂದ ವಿಮೋಚಿಸಿದ ನಿಮ್ಮ ಪ್ರಜೆಗಳೂ ಆಗಿರುತ್ತಾರಲ್ಲವೆ? 11ಸ್ವಾಮೀ, ಕೃಪೆಮಾಡಿ; ನಿಮ್ಮ ದಾಸನಾದ ನನ್ನ ಪ್ರಾರ್ಥನೆಗೂ ನಿಮ್ಮ ನಾಮಸರಣೆಯಲ್ಲಿ ಆನಂದಿಸುವ ನಿಮ್ಮ ಭಕ್ತರ ಪ್ರಾರ್ಥನೆಗೂ ಕಿವಿಗೊಡಿ. ನಿಮ್ಮ ದಾಸನಾದ ನಾನು ಈ ದಿನ ಈ ಮನುಷ್ಯನ ದಯೆಗೆ ಪಾತ್ರನಾಗಿ ಕೃತಾರ್ಥನಾಗುವಂತೆ ಅನುಗ್ರಹಿಸಿ," ಎಂದು ಬೇಡಿಕೊಂಡೆನು.

### ಜೆರುಸಲೇಮಿಗೆ ಹೋಗಲು ನೆಹೆಮೀಯನಿಗೆ ಅನುಮತಿ

**2** ನಾನು ರಾಜನ ಪಾನಸೇವಕನಾಗಿದ್ದೆ. ಅರ್ತಷಸ್ತರಾಜನ ಇಪ್ಪತ್ತನೆಯ ವರ್ಷದ ಚೈತ್ರಮಾಸದಲ್ಲಿ, ರಾಜನು ದ್ರಾಕ್ಷಾರಸ ಪಾನಮಾಡುವ ಹೊತ್ತಿನಲ್ಲಿ, ದ್ರಾಕ್ಷಾರಸವನ್ನು ತಂದುಕೊಟ್ಟೆ. ನಾನು ಅವನ ಸನ್ನಿಧಿಯಲ್ಲಿ ಹಿಂದೆ ಎಂದೂ ಖಿನ್ನನಾಗಿರಲಿಲ್ಲ. 2ರಾಜ ನನಗೆ, "ನೀನು ಕಳೆಗುಂದಿದವನಾಗಿರುವೆ, ಏಕೆ? ನಿನ್ನ ದೇಹಾರೋಗ್ಯ ಚೆನ್ನಾಗಿದೆಯಲ್ಲವೆ? ಇದಕ್ಕೆ ಮನೋವೇದನೆಯೇ ಹೊರತು ಬೇರೇನೂ ಕಾರಣ ಇರಲಾರದು," ಎಂದು ಹೇಳಿದ. ನನಗೆ ಮಹಾಭೀತಿಯುಂಟಾಯಿತು. 3ನಾನು ರಾಜನಿಗೆ, "ರಾಜಾಧಿರಾಜರು ಚಿರಂಜೀವಿಯಾಗಿರಲಿ! ನನ್ನ ಪೂರ್ವಿಕರ ಸಮಾಧಿಗಳಿರುವ ಪಟ್ಟಣವು ಹಾಳಾಗಿ ಅದರ ಬಾಗಿಲುಗಳು ಬೆಂಕಿಯಿಂದ ಸುಟ್ಟುಹೋಗಿವೆ; ಹೀಗಿರುವಲ್ಲಿ, ನನ್ನ ಮುಖ ಕಳೆಗುಂದದೆ ಇರಲು ಸಾಧ್ಯವೆ?," ಎಂದು ಹೇಳಿದೆ.

4 ಆಗ ರಾಜ, :ನಿನ್ನ ಆಶೆಯೇನು?," ಎಂದು ಕೇಳಿದನು. ನಾನು ಪರಲೋಕದ ದೇವರನ್ನು ಪ್ರಾರ್ಥಿಸಿ, ಅವನಿಗೆ, "ರಾಜರ ಚಿತ್ತವಿರುವುದಾದರೆ, 5ಮತ್ತು ತಮ್ಮ ಸೇವಕನು ತಮ್ಮ ದೃಷ್ಟಿಯಲ್ಲಿ ದಯೆಗೆ ಪಾತ್ರನಾಗಿದ್ದರೆ, ನನ್ನ ಪಿತೃಗಳ ಸಮಾಧಿಗಳಿರುವ ಪಟ್ಟಣವನ್ನು ಮರಳಿ ಕಟ್ಟುವುದಕ್ಕೆ ಜುದೇಯ ನಾಡಿಗೆ ಹೋಗಲು ನನಗೆ ಅಪ್ಪಣೆಯಾಗಬೇಕು," ಎಂದು ಹೇಳಿದೆ. 6ರಾಜರ ಹತ್ತಿರದಲ್ಲೇ ಕುಳಿತು ಕೊಂಡಿದ್ದಳು ರಾಣಿ. ರಾಜ, "ಪ್ರಯಾಣಕ್ಕೆ ನಿನಗೆ ಎಷ್ಟು ಕಾಲಬೇಕು? ಯಾವಾಗ ಹಿಂದಿರುಗುವೆ," ಎಂದು ವಿಚಾರಿಸಿದ. ನಾನು ಕಾಲವನ್ನು ಸೂಚಿಸಿದೆ. ಅವನು ಒಪ್ಪಿಕೊಂಡು ಹೋಗಿಬರಲು ಅಪ್ಪಣೆಕೊಟ್ಟ.

7 ತರುವಾಯ ನಾನು ರಾಜನಿಗೆ, "ನದಿ ಆಚೆಯ ದೇಶಾಧಿಪತಿಗಳು ತಮ್ಮ ಪ್ರಾಂತ್ಯಗಳಲ್ಲಿ ಹಾದು ಜುದೇಯ ನಾಡಿಗೆ ಹೋಗುವುದಕ್ಕೆ ನನಗೆ ಅಪ್ಪಣೆಕೊಡಬೇಕಾಗುತ್ತದೆ. 8ರಾಜವನಪಾಲಕನಾದ ಆಸಾಫನು ದೇವಾಲಯದ ಕೋಟೆಯ ಬಾಗಿಲುಗಳನ್ನೂ ಪಟ್ಟಣದ ಪೌಳಿ ಗೋಡೆಯನ್ನೂ ನಾನು ಸೇರುವ ಮನೆಯನ್ನೂ, ಕಟ್ಟಲು ಬೇಕಾಗುವ ತೊಲೆಗಳಿಗಾಗಿ ಮರಗಳನ್ನು ಕೊಡಬೇಕಾಗುತ್ತದೆ; ಇದನ್ನೆಲ್ಲಾ ಕೊಡುವಂತೆ ರಾಜರು ನನ್ನ ಕೈಯಲ್ಲಿ ಪತ್ರಗಳನ್ನು ದಯಮಾಡಿ ನೀಡಬೇಕು," ಎಂದು ಬಿನ್ನವಿಸಿದೆ. ನನ್ನ ದೇವರ ಕೃಪಾಹಸ್ತ ನನ್ನ ಮೇಲೆ ಇದ್ದುದರಿಂದ ರಾಜನು ಅವುಗಳನ್ನು ನನಗೆ ಕೊಟ್ಟನು. 9ಅದೂ ಅಲ್ಲದೆ ನನ್ನನ್ನು ಸಾಗಕಳುಹಿಸುವುದಕ್ಕೆ ಸೇನಾಧಿಪತಿಗಳನ್ನೂ ರಾಹುತರನ್ನೂ ಕಳುಹಿಸಿದನು.

### ಜೆರುಸಲೇಮಿನ ಗೋಡೆ ಕಟ್ಟುವ ನಿರ್ಧಾರ

ಹೀಗೆ ನಾನು ನದಿಯಾಚೆಯ ದೇಶಾಧಿಪತಿಗಳ ಬಳಿಗೆ ಬಂದು ರಾಜನ ಪತ್ರಗಳನ್ನು ಅವರಿಗೆ ತೋರಿಸಿದೆ. 10ಇಸ್ರಯೇಲರ ಹಿತಚಿಂತಕನು ಒಬ್ಬನು ಬಂದನೆಂಬ ಸಮಾಚಾರ ಹೋರೋನಿನ

ಸನ್ಬಲ್ಲಟನಿಗೂ ಅಮ್ಮೋನ್ ದೇಶದವನಾದ ತೊಬೀಯ ಎಂಬ ಅಧಿಕಾರಿಗೂ ಮುಟ್ಟಿತು. ಅವರು ತುಂಬ ಹೊಟ್ಟೆಕಿಚ್ಚುಪಟ್ಟರು.

11 ಅನಂತರ ಜೆರುಸಲೇಮಿಗೆ ಬಂದೆ. ಅಲ್ಲಿ ಮೂರು ದಿನಗಳಿದ್ದೆ. 12ಆಮೇಲೆ ಜೆರುಸಲೇಮಿಗಾಗಿ ಮಾಡತಕ್ಕ ಕಾರ್ಯದ ಬಗ್ಗೆ ನನ್ನ ದೇವರು ನನ್ನಲ್ಲಿ ಯಾವ ಆಲೋಚನೆಯನ್ನು ಹುಟ್ಟಿಸಿದ್ದಾರೆಂದು ಯಾರಿಗೂ ತಿಳಿಸದೆ, ರಾತ್ರಿಯಲ್ಲೆದ್ದು ಕೆಲವು ಜನರನ್ನು ಮಾತ್ರ ಕರೆದುಕೊಂಡು ಹೊರಟೆ. ನನ್ನ ವಾಹನಪಶುವಿನ ಹೊರತು ಬೇರೆ ಯಾವ ಪಶುವೂ ನನ್ನೊಂದಿಗಿರಲಿಲ್ಲ. 13ನಾನು ರಾತ್ರಿ ವೇಳೆಯಲ್ಲಿ ಕಣಿವೆಯ ಬಾಗಿಲಿನಿಂದ ಹೊರಟು, ಹಾಳುಬಿದ್ದ ಜೆರುಸಲೇಮಿನ ಗೋಡೆಗಳನ್ನೂ ಬೆಂಕಿಯಿಂದ ಸುಡಲಾಗಿದ್ದ ಅದರ ಬಾಗಿಲುಗಳನ್ನೂ ನೋಡುತ್ತಾ ಹೆಬ್ಬಾವು ಬುಗ್ಗೆಯ ಮಾರ್ಗವಾಗಿ ತಿಪ್ಪೆಬಾಗಿಲಿಗೆ ಹೋದೆ. 14ಅಲ್ಲಿಂದ ಬುಗ್ಗೆಬಾಗಿಲನ್ನು ಹಾದು ಅರಸನ ಕೊಳಕ್ಕೆ ಹೋದೆ. 15ನನ್ನ ವಾಹನಪಶುವಿಗೆ ಅಲ್ಲಿಂದ ಮುಂದೆ ಹೋಗುವುದಕ್ಕೆ ಮಾರ್ಗವಿಲ್ಲದ್ದರಿಂದ ನಾನು ರಾತ್ರಿಯಲ್ಲಿ ಹಳ್ಳದ ಮಾರ್ಗದಿಂದ ಹತ್ತುತ್ತಾ ಗೋಡೆಯನ್ನು ಪರೀಕ್ಷಿಸಿದೆ. ಆಮೇಲೆ ಪುನಃ ಕಣಿವೆಯ ಬಾಗಿಲಿನಿಂದ ಮನೆಗೆ ಬಂದೆ.

16 ನಾನು ಆವರೆಗೆ ಯೆಹೂದ್ಯರಿಗೂ ಯಾಜಕರಿಗೂ ಶ್ರೀಮಂತರಿಗೂ ಅಧಿಕಾರಿಗಳಿಗೂ ಹಾಗು ಕೆಲಸ ನಡೆಸತಕ್ಕ ಇತರರಿಗೂ ಏನೂ ತಿಳಿಸದೆ ಇದ್ದುದರಿಂದ, ನಾನು ಎಲ್ಲಿ ಹೋಗಿದ್ದೆ, ಏನು ಮಾಡಿದೆ ಎಂಬುದು ಅಧಿಕಾರಿಗಳಿಗೆ ಗೊತ್ತಿರಲಿಲ್ಲ. 17ಬಳಿಕ ನಾನು ಅವರಿಗೆ, “ನಮ್ಮ ದುರವಸ್ಥೆ ನಿಮ್ಮ ಕಣ್ಣ ಮುಂದಿರುತ್ತದಲ್ಲವೇ? ಜೆರುಸಲೇಮ್ ಪಟ್ಟಣ ಹಾಳು ಬಿದ್ದಿದೆ; ಅದರ ಬಾಗಿಲುಗಳು ಬೆಂಕಿಯಿಂದ ಸುಟ್ಟುಹೋಗಿವೆ; ಬನ್ನಿ, ಜೆರುಸಲೇಮಿನ ಗೋಡೆಯನ್ನು ಕಟ್ಟೋಣ, ಹೀಗೆ ಮಾಡಿದರೆ ನಮ್ಮ ಮೇಲಿನ ನಿಂದೆ ನೀಗುವುದು,” ಎಂದು ಹೇಳಿದೆ. 18ಇದಲ್ಲದೆ, ನನ್ನ ದೇವರ ಕೃಪಾಹಸ್ತ ನನ್ನನ್ನು ಹೇಗೆ ನಡೆಸಿತೆಂಬುದನ್ನೂ ರಾಜನು ನನಗೆ ಹೇಳಿದ್ದನ್ನೂ ಅವರಿಗೆ ವಿವರಿಸಿದೆ. ಆಗ ಅವರು, “ಬನ್ನಿ, ಕಟ್ಟೋಣ” ಎಂದು ಹೇಳಿ ಆ ಒಳ್ಳೇ ಕೆಲಸಕ್ಕೆ ಕೈಹಾಕಲು ಧೈರ್ಯಗೊಂಡರು.

19 ಹೋರೋನಿನವನಾದ ಸನ್ಬಲ್ಲಟನೂ ಅಮ್ಮೋನ್ ದೇಶದವನಾದ ಟೋಬೀಯ ಎಂಬ ಅಧಿಕಾರಿಯೂ ಅರೇಬಿಯನಾದ ಗೆಷೆಮನೂ ಈ ಸಮಾಚಾರವನ್ನು ಕೇಳಿದಾಗ ನಮ್ಮನ್ನು ತಿರಸ್ಕರಿಸಿ ಗೇಲಿಮಾಡಿದರು. “ನೀವು ಇಲ್ಲಿ ಮಾಡುವುದೇನು? ಅರಸನಿಗೆ ವಿರೋಧವಾಗಿ ದಂಗೆ ಏಳಬೇಕೆಂದಿದ್ದೀರೋ?” ಎಂದು ಕೇಳಿದರು. 20ನಾನು ಅವರಿಗೆ, “ಪರಲೋಕ ದೇವರು ನಮಗೆ ಸಫಲತೆಯನ್ನು ಅನುಗ್ರಹಿಸುವರು. ಆದುದರಿಂದ ಅವರ ದಾಸರಾದ ನಾವು ಕೋಟೆಯ ಗೋಡೆಯನ್ನು ಕಟ್ಟುವುದಕ್ಕೆ ಮನಸ್ಸು ಮಾಡಿದ್ದೇವೆ. ನಿಮಗಾದರೋ ಜೆರುಸಲೇಮಿನಲ್ಲಿ ಪಾಲಾಗಲಿ, ಹಕ್ಕಾಗಲಿ, ಸ್ಮಾರಕವಾಗಲಿ ಇರುವುದಿಲ್ಲ,” ಎಂದು ಉತ್ತರಕೊಟ್ಟೆ.

### ಪೌಳಿಗೋಡೆಯನ್ನು ಕಟ್ಟಿದವರ ಪಟ್ಟಿ

**3** ಮಹಾಯಾಜಕನಾದ ಎಲ್ಯಾಷೀಬನೂ ಅವನ ಕುಟುಂಬದ ಯಾಜಕರೂ ಕುರಿಬಾಗಿಲನ್ನು ಕಟ್ಟಿ ಅದನ್ನು ಪ್ರತಿಷ್ಠಿಸಿ ಅದಕ್ಕೆ ಕದಗಳನ್ನು ಇಟ್ಟರು. ಅಲ್ಲಿಂದ ಹಮ್ಮೆಯಾ ಬುರುಜಿನವರೆಗೆ ಗೋಡೆಕಟ್ಟಿ ಅದನ್ನೂ ಪ್ರತಿಷ್ಠಿಸಿದರು. ಅಲ್ಲಿಂದ ಹನನೇಲ್ ಬುರುಜಿನವರೆಗೂ ಕಟ್ಟಿದರು. 2ಅಲ್ಲಿಂದ ಆಚೆಗೆ ಕಟ್ಟುತ್ತಿದ್ದವರು ಜೆರಿಕೋವಿನವರು; ಆಚೆಗೆ ಇಮ್ರಿಯ ಮಗನಾದ ಜಕ್ಕೂರನು.

3 ಮೀನುಬಾಗಿಲನ್ನು ಕಟ್ಟಿದವರು ಹಸ್ಸೆನಾಹನ ಮನೆಯವರು. ಇವರು ಅದರ ಮೇಲೆ ತೊಲೆಗಳನ್ನಿಟ್ಟು ಅದಕ್ಕೆ ಕದ, ತಿರುಗಣಿ, ಅಗುಳಿಗಳನ್ನು ಹಚ್ಚಿದರು. 4ಅಲ್ಲಿಂದ ಮುಂದಕ್ಕೆ ಗೋಡೆಯನ್ನು ದುರಸ್ತಿಮಾಡಿಸಿದವನು ಊರೀಯನ ಮಗನೂ ಹಕ್ಕೋಚನ ಮೊಮ್ಮಗನೂ ಆಗಿರುವ ಮೆರೇಮೋತ್; ಆಮೇಲ್ ಬೆರೆಕ್ಕನ ಮಗನೂ ಮೆಷೇಜಬೇಲನ ಮೊಮ್ಮಗನೂ ಆಗಿರುವ ಮೆಷುಲ್ಲಾಮ್; ಆಚೆಗೆ ಬಾನನ ಮಗ ಚಾದೋಕ್; ಮುಂದಕ್ಕೆ ತೆಕೋವದವರು. 5ತೆಕೋವದ ಶ್ರೀಮಂತರಾದರೋ ತಮ್ಮ ಒಡೆಯರ ಸೇವೆಗಾಗಿ ಹೆಗಲನ್ನು ಕೊಡಲಿಲ್ಲ.

6 ಹಳೆಯದು ಎಂಬ ಬಾಗಿಲನ್ನು ದುರಸ್ತಿ ಮಾಡಿದವರು ಪಾಸೇಹನ ಮಗ ಯೋಯಾದನು ಹಾಗು ಬೆಸೋದ್ಯನ ಮಗ ಮೆಷುಲ್ಲಾಮನು. ಇವರು ಅದರ ಮೇಲೆ ತೊಲೆಗಳನ್ನಿಟ್ಟು ಅದಕ್ಕೆ ಕದ, ತಿರುಗಣಿ ಅಗುಳಿಗಳನ್ನು ಹಚ್ಚಿದರು. 7ಅಲ್ಲಿಂದ ನದಿಯಾಚೆಯ ರಾಜ್ಯಪಾಲನ ನ್ಯಾಯಸ್ಥಾನದವರೆಗೆ ಗಿಬ್ಯೋನಿನವನಾದ ಮೆಲೆಟ್ಯ, ಮೇರೋನೋತಿನವನಾದ ಯಾದೋನ್ ಇವರೂ ಗಿಬ್ಯೋನ್ ಮತ್ತು ಮಿಚ್ಪ ಊರುಗಳವರು ದುರಸ್ತಿ ಮಾಡಿದರು. 8ಇವರ ಆಚೆಗೆ ಹರ್ಹಯನ ಮಗನಾದ ಅಕ್ಕಸಾಲಿಗರ ಉಜ್ಜೀಯೇಲ್; ಆಮೇಲೆ ಬುಕ್ಕಿಟ್ಟುಗಾರರ ಹನನ್ಯ; ಇವರು ಅಗಲ ಗೋಡೆಯೆನಿಸಿಕೊಳ್ಳುವ ಗೋಡೆಯ ಈಚೆಗಿರುವ ಜೆರುಸಲೇಮಿನ ಭಾಗವನ್ನು ಗೋಡೆಯೊಳಗೆ ಸೇರಿಸಲಿಲ್ಲ. 9ಇದರ ಆಚೆಗೆ ಜೆರುಸಲೇಮಿನ ಅರೆನಾಡೊಡೆಯನೂ ಹೂರನ ಮಗನೂ ಆದ ರೆಫಾಯ. 10ಇವನ ಮುಂದಕ್ಕೆ ಹರೂಮಫನ ಮಗ ಯೆದಾಯ; ಇವನು ತನ್ನ ಮನೆಯ ಎದುರಿಗಿರುವ ಗೋಡೆಯನ್ನು ದುರಸ್ತಿಮಾಡಿದನು. ಇವನ ಆಚೆಗೆ ಹಷಬ್ನೇಯನ ಮಗ ಹಟ್ಟೂಷ್, 11ಗೋಡೆಯ ಇನ್ನೊಂದು ಬಾಗವನ್ನೂ ಒಲೆ ಬುರುಜನ್ನೂ ಸರಿಪಡಿಸಿದವರು ಹಾರೀಮನ ಮಗ ಮಲ್ಕೀಯನು ಹಾಗು ಪಹತ್ ಮೋವಾಬ್ಯನಾದ ಹಷೂಬನು. 12ಇವನ ಸಮೀಪದಲ್ಲಿ ಗೋಡೆಯನ್ನು ದುರಸ್ತುಮಾಡಿದವರು ಜೆರುಸಲೇಮಿನ ಅರೆನಾಡೊಡೆಯನೂ ಹಲ್ಲೊ ಹೇಷನ ಮಗನೂ ಆದ ಶಲ್ಲೂಮನು ಹಾಗು ಅವನ ಕುಮಾರಿಯರು.

13 ಕಣಿವೆಯ ಬಾಗಿಲನ್ನು ಸರಿಪಡಿಸಿದವರು ಹಾನೂನನು ಹಾಗು ಜಾನೋಹ ಊರಿನವರು. ಇವರು ಅದರ ಗೋಡೆಯನ್ನು ಕಟ್ಟಿ ಅದಕ್ಕೆ ಕದ, ತಿರುಗಣಿ, ಅಗುಳಿಗಳನ್ನು ಹಚ್ಚಿ ಅಲ್ಲಿಂದ ತಿಪ್ಪೆ ಬಾಗಿಲಿನವರೆಗೂ ಸಾವಿರ ಮೊಳದ ಗೋಡೆಯನ್ನು ಕಟ್ಟಿದರು.

14 ತಿಪ್ಪೆಬಾಗಿಲನ್ನು ಸರಿಪಡಿಸಿದವನು ಬೇತ ಹಕ್ಕೆರೆಮಿನ ನಾಡೊಡೆಯನೂ ರೇಕಾಬನ ಮಗನೂ ಆದ ಮಲ್ಕೀಯನು; ಇವನು ಅದರ ಗೋಡೆಯನ್ನು ಕಟ್ಟಿ ಅದಕ್ಕೆ ಕದ, ತಿರುಗಣಿ, ಅಗುಳಿಗಳನ್ನು ಹಚ್ಚಿದನು.

15 ಬುಗ್ಗೆಬಾಗಿಲನ್ನು ದುರಸ್ತಿಪಡಿಸಿದವನು ಮಿಚ್ಪದ ನಾಡೊಡೆಯನೂ ಕೊಲ್ಹೋಜೆಯ ಮಗನೂ ಆದ ಶಲ್ಲೂನ್; ಇವನು ಅದರ ಗೋಡೆಯನ್ನು ಕಟ್ಟಿ ಅದಕ್ಕೆ ಮಾಳಿಗೆಯನ್ನು ಹಾಕಿ, ಕದ, ತಿರುಗಣಿ, ಅಗುಳಿಗಳನ್ನು ಹಚ್ಚಿ ದಾವೀದನಗರದಿಂದಿಳಿದು ಬರುವ ಸೋಪಾನಗಳ ಈಚೆ, ಅರಸನ ತೋಟದ ಬಳಿಯಲ್ಲಿರುವ ಶಿಲೋವ ಕೊಳದ ಗೋಡೆಯನ್ನು ಕಟ್ಟಿದನು. 16ಇವನ ಆಚೆ ಅಂದರೆ, ದಾವೀದನ ಸಮಾಧಿಯ ಎದುರಿನಲ್ಲಿರುವ ಕೊಳ, ಸಿಪಾಯಿಗಳ ಠಾಣ, ಇವುಗಳವರೆಗೂ ದುರಸ್ತು ಮಾಡಿದವನು ಬೇತ್ಚೂರಿನ ಅರೆನಾಡೊಡೆಯನೂ ಅಜ್ಬೂಕನ ಮಗನೂ ಆದ ನೆಹೆಮೀಯನು.

**ಗೋಡೆ ಕಟ್ಟಡ ಕೆಲಸದಲ್ಲಿ ಲೇವಿಯರ ಪಾತ್ರ**

17 ಇವನ ಆಚೆ ದುರಸ್ತಿ ಕಾರ್ಯವನ್ನು ಕೈಗೊಂಡವರು ಲೇವಿಯರು. ಅವರಲ್ಲಿ ಮೊದಲು ಬಾನಿಯ ಮಗನಾದ ರೆಹೂಮ್, ಇವನ ಸಮೀಪದಲ್ಲಿ ತನ್ನ ನಾಡಿನವರೊಡನೆ ಕಟ್ಟುತ್ತಿದ್ದ ಕೆಯಿಲದ ಅರೆನಾಡೊಡೆಯನಾದ ಹಷಬ್ಯ ಇವರು. 18ಇವರ ಆಚೆ, ಇವರ ಬಂಧುಗಳಲ್ಲಿ ಕೆಯಿಲದ ಎರಡನೆಯ ಅರೆನಾಡೊಡೆಯನೂ ಹೇನಾದಾದನ ಮಗನೂ ಆದ ಬಲ್ವೈ. 19ಇವನ ಸಮೀಪದಲ್ಲಿ ಗೋಡೆಯ ಇನ್ನೊಂದು ಭಾಗವನ್ನು ಅಂದರೆ, ಗೋಡೆಯ ಮೂಲೆಯಲ್ಲಿರುವ ಆಯುಧಶಾಲೆಗೆ ಹೋಗುವ ಮೆಟ್ಟಲುಗಳ ಎದುರಿಗಿರುವ ಭಾಗವನ್ನು ಮಿಚ್ಪದ ಅಧಿಕಾರಿಯೂ ಯೇಷೂವನ ಮಗನೂ ಆದ ಏಜೆರನು ಸರಿಪಡಿಸಿದನು. 20ಇವನ ಆಚೆ, ಗೋಡೆಯ ಇನ್ನೊಂದು ಭಾಗವನ್ನು ಅಂದರೆ, ಮೂಲೆಯಿಂದ ಮಹಾಯಾಜಕನಾದ ಎಲ್ಯಾಷೀಬನ ಮನೆಯ ಬಾಗಿಲಿನವರೆಗೆ, ಜಕ್ಕೈಯ ಮಗನಾದ ಬಾರೂಕನು ಆಸಕ್ತಿ ಇಂದ ಭದ್ರಪಡಿಸಿದನು. 21ಇವನ ಆಚೆ, ಗೋಡೆಯ ಇನ್ನೊಂದು ಭಾಗವನ್ನು ಅಂದರೆ, ಎಲ್ಯಾಷೀಬನ ಮನೆಯ ಬಾಗಿಲಿನಿಂದ ಅದೇ ಮನೆಯ ಕೊನೆಯವರೆಗೆ, ಹಕ್ಕೋಚನ ಮೊಮ್ಮಗನೂ ಊರೀಯನ ಮಗನೂ ಆದ ಮೆರೇಮೋತನು ದುರಸ್ತಿಮಾಡಿಸಿದನು.

## ಗೋಡೆಕಟ್ಟುಡ ಕೆಲಸದಲ್ಲಿ ಯಾಜಕರ ಪಾತ್ರ

22 ಮುಂದಿನ ಭಾಗವನ್ನು ಕಟ್ಟಿದವರು ಜೋರ್ಡನ್ ನದಿಯ ಕಣಿವೆಯಲ್ಲಿ ವಾಸಿಸುತ್ತಿದ್ದ ಯಾಜಕರು. 23ಇವರ ಆಚೆ, ಬೆನ್ಯಾಮೀನ್ ಹಷೂಬರು; ಇವರು ತಮ್ಮ ತಮ್ಮ ಮನೆಗಳಿಗೆ ಎದುರಾಗಿರುವ ಗೋಡೆಯನ್ನು ದುರಸ್ತಿಮಾಡಿಸಿದರು. ಇವರ ಆಚೆ, ಅನನ್ಯನ ಮೊಮ್ಮಗನೂ ಮಾಸೇಯನ ಮಗನ ಆದ ಅಜರ್ಯ; ಇವನು ತನ್ನ ಮನೆಯ ಹತ್ತಿರದಲ್ಲಿರುವ ಗೋಡೆಯನ್ನು ಸರಿಪಡಿಸಿದನು. 24ಇವನ ಆಚೆ, ಅಜರ್ಯನ ಮನೆಯಿಂದ ಮೂಲೆಯವರೆಗಿರುವ ಗೋಡೆಯ ಇನ್ನೊಂದು ಭಾಗವನ್ನು ದುರಸ್ತಿಮಾಡಿದವನು ಹೇನಾದಾದನ ಮಗನಾದ ಬಿನ್ನೂಯ್. 25ಸೆರೆಮನೆಯ ಅಂಗಳದ ಹತ್ತಿರ ಮೇಲಣ ಅರಮನೆಯ ಗೋಡೆಯನ್ನು ಮೀರಿ ಬರುವ ಮೂಲೆ ಬುರುಜಿನ ಎದುರಿನ ಭಾಗವನ್ನು ಊಜೈಯ ಮಗ ಪಾಲಾಲನೂ ಇವನ ಆಚೆಯಲ್ಲಿ ಪರೋಷನ ಮಗ ಪೆದಾಯನೂ ಸರಿಪಡಿಸಿದರು. 26ಆ ಮೂಲೆ ಬುರುಜಿನ ಮತ್ತು ನೀರು ಬಾಗಿಲಿನ ಪೂರ್ವ ದಿಕ್ಕಿಗಿರುವ ಓಫೇಲ್ ಗುಡ್ಡವು ದೇವಸ್ಥಾನ ಪರಿಚಾರಕರ ನಿವಾಸಸ್ಥಾನ. 27ಆ ದೊಡ್ಡ ಮೂಲೆಬುರುಜಿನ ಎದುರಿನಿಂದ ಓಫೇಲ್ ಗೋಡೆಯವರೆಗಿರುವ ಗೋಡೆಯ ಇನ್ನೊಂದು ಭಾಗವನ್ನು ತೆಕೋವದವರು ದುರಸ್ತಿಮಾಡಿದರು.

## ಇತರ ದುರಸ್ತಿಗಾರರು

28 ಯಾಜಕರು ಕುದುರೆಬಾಗಿಲಿನ ಆಚೆ ದಿಣ್ಣೆಯ ಮೇಲಿರುವ ಗೋಡೆಯಲ್ಲಿ ತಮ್ಮ ತಮ್ಮ ಮನೆಗಳ ಎದುರಿನ ಭಾಗಗಳನ್ನು ಸರಿಮಾಡಿದರು. 29ಇವರ ಆಚೆ, ಇಮ್ಮೇರನ ಮಗ ಚಾದೋಕನು ತನ್ನ ಮನೆಯ ಎದುರಿಗಿರುವ ಗೋಡೆಯನ್ನು ದುರಸ್ತಿಮಾಡಿದನು. ಇವನ ಆಚೆ, ಪೂರ್ವದಿಕ್ಕಿನ ದ್ವಾರಪಾಲಕನಾದ ಶೆಕನ್ಯನ ಮಗ ಶೆಮಾಯನು. 30ಇವನ ಆಚೆ ಶೆಲೆಮ್ಯನ ಮಗನಾದ ಹನನ್ಯ; ಗೋಡೆಯ ಇನ್ನೊಂದು ಭಾಗವನ್ನು ಸರಿಮಾಡಿದವನು ಚಾಲಾಫನ ಆರನೆಯ ಮಗನಾದ ಹಾನೂನ್; ಇವನ ಆಚೆ, ಅಂದರೆ ತನ್ನ ಸ್ವಂತ ಕೊಠಡಿಯ ಮುಂದೆ ಬರೆಕ್ಯನ ಮಗನಾದ ಮೆಷುಲ್ಲಾಮ್.

31 ಇನ್ನೂ ಮುಂದಕ್ಕೆ ಅಕ್ಕಸಾಲಿಗರ ಮಲ್ಕೀಯ; ಇವನು ದಂಡುಕೂಡುವ ಬಾಗಿಲಿನ ಎದುರಿನಲ್ಲಿರುವ ದೇವಸ್ಥಾನ ಪರಿಚಾರಕರ ಮತ್ತು ವರ್ತಕರ ಕೇರಿಯವರೆಗೂ ಮೂಲೆ ಯುಪ್ಪರಿಗೆಯವರೆಗೂ ದುರಸ್ತಿಮಾಡಿದನು. 32ಈ ಮೂಲೆಯುಪ್ಪರಿಗೆಗೂ ಕುರಿಬಾಗಿಲಿಗೂ ನಡುವೆಯಿದ್ದ ಗೋಡೆಯನ್ನು ಸರಿಮಾಡಿದವರು ಅಕ್ಕಸಾಲಿಗರು ಹಾಗು ವರ್ತಕರು.

## ಕಟ್ಟಡಕೆಲಸಕ್ಕೆ ವಿರೋಧಿಗಳು ಒಡ್ಡಿದ್ದ ಅಡ್ಡಿ ಆತಂಕಗಳ ನಿವಾರಣೆ

**4** ನಾವು ಪೌಳಿಗೋಡೆಯನ್ನು ಕಟ್ಟುತ್ತಿದ್ದ ಸುದ್ದಿ ಸನ್ಬಲ್ಲಟನಿಗೆ ಮುಟ್ಟಿತು. ಅವನು ಬಹಳ ಹೊಟ್ಟೆಕಿಚ್ಚಿನ ಹಾಗು ಸಿಡುಕಿನ ವ್ಯಕ್ತಿ. 2"ನನ್ನ ಸಹೋದರರ ಮುಂದೆ ಹಾಗು ಸಮಾರಿಯದ ದಂಡಿನವರ ಮುಂದೆ ಅಶಕ್ತರಾದ ಈ ಯೆಹೂದ್ಯರು ಮಾಡುವುದಾದರೂ ಏನು? ಇವರು ತಮ್ಮನ್ನೇ ಬಲಪಡಿಸಿಕೊಳ್ಳಬೇಕೆಂದು ಇರುವರೋ? ಬಲಿಯರ್ಪಿಸುವರೋ? ಈ ದಿನವೇ ಈ ಕೆಲಸವನ್ನು ಮಾಡಿಮುಗಿಸುವರೋ? ಈ ದಿನವೇ ಈ ಕೆಲಸವನ್ನು ಮಾಡಿಮುಗಿಸುವರೋ? ಸುಟ್ಟುಹೋದ ಪಟ್ಟಣದ ಬೂದಿಯ ರಾಶಿಯೊಳಗೆ ಹುದುಗಿಹೋದ ಕಲ್ಲುಗಳನ್ನು ಬದುಕಿಸುವರೋ?" ಎಂದು ಹೇಳಿ ಯೆಹೂದ್ಯರನ್ನು ಪರಿಹಾಸ್ಯ ಮಾಡಿದನು. 3ಅವನ ಬಳಿಯಲ್ಲೇ ನಿಂತಿದ್ದ ಅಮ್ಮೋನಿಯನಾದ ಟೋಬೀಯನು, "ಅವರು ಕಟ್ಟುವ ಕಲ್ಲು ಗೋಡೆಯ ಮೇಲೆ ನರಿ ಹಾರಿದರೆ ಅದು ಬಿದ್ದು ಹೋಗುವುದು!" ಎಂದು ಅಣಕಿಸಿದನು.

4 "ನಮ್ಮ ದೇವರೇ ಆಲಿಸಿ: ಅವರು ನಮ್ಮನ್ನು ಎಷ್ಟು ಹೀಯಾಳಿಸುತ್ತಾರೆ! ಈ ನಿಂದೆಯನ್ನು ಅವರ ತಲೆಯ ಮೇಲೆಯೇ ಬರಮಾಡಿ. ಅವರು ದೇಶಭ್ರಷ್ಟರಾಗಿ ಸೂರೆ ಹೋಗುವಂತೆ ಮಾಡಿ. 5ಅವರ ಅಪರಾಧವನ್ನು ಕ್ಷಮಿಸಬೇಡಿ. ನಿಮ್ಮೆದುರಿಗಿರುವ ಅವರ ಪಾಪವನ್ನು ಅಳಿಸಿಬಿಡಬೇಡಿ. ಏಕೆಂದರೆ ಕಟ್ಟುವವರ ಮುಂದೆಯೇ ಅವರು ನಿಮ್ಮನ್ನು ಕೆಣಕಿದ್ದಾರೆ," ಎಂದು ನಾನು ಪ್ರಾರ್ಥಿಸಿದೆ.

6 ಇದಾದ ಮೇಲೆ ನಾವು ಕಟ್ಟುವ ಕೆಲಸವನ್ನು ಮುಂದುವರಿಸಿದೆವು. ಜನರು ಮನಸ್ಸುಮಾಡಿ ಅರ್ಧಗೋಡೆಯನ್ನು ಕಟ್ಟಿದರು. 7ಸನ್ಬಲ್ಲಟನು, ಟೋಬೀಯನು, ಅರೇಬಿಯರು, ಅಮ್ಮೋನಿಯರು ಹಾಗು ಅಷ್ಡೋದಿನವರು ಜೆರುಸಲೇಮಿನ ಗೋಡೆಯ ದುರಸ್ತಿಕಾರ್ಯ ಮುಂದುವರಿದಿದೆ ಹಾಗು ಅದರ ಸಂದುಗಳು ಮತ್ತೆ ಮುಚ್ಚಿಕೊಳ್ಳುತ್ತಿವೆ ಎಂಬುದನ್ನು ಕೇಳಿದರು. 8ಅವರಿಗೆ ಬಹು ಕೋಪ ಬಂದಿತು. "ನಾವು ಒಟ್ಟಾಗಿ ಜೆರುಸಲೇಮಿನವರ ವಿರುದ್ಧ ಯುದ್ಧಕ್ಕೆ ಹೋಗಿ ಅವರನ್ನು ತಳಮಳಗೊಳಿಸೋಣ," ಎಂದು ಒಳಸಂಚು ಮಾಡಿಕೊಂಡರು. 9ನಾವಾದರೋ ನಮ್ಮ ದೇವರಿಗೆ ಮೊರೆಯಿಟ್ಟು ಆ ಜನರು ಬರುವ ದಾರಿಯಲ್ಲಿ ಹಗಲಿರುಳು ಕಾವಲಿಟ್ಟೆವು. 10ಇತ್ತ ಯೆಹೂದ್ಯರೇ, "ಹೊರೆಹೊರುವವರ ಬಲ ಕುಂದಿಹೋಯಿತು. ಧೂಳಿನ ರಾಶಿ ವಿಪರೀತ ಆಗಿದೆ; ಈ ಗೋಡೆಯನ್ನು ಕಟ್ಟುವುದು ನಮ್ಮಿಂದಾಗದು," ಎಂದರು.

11 ಅತ್ತ ನಮ್ಮ ವಿರೋಧಿಗಳು, "ಅವರಿಗೆ ತಿಳಿಯದೆ, ಗೋಚರವಾಗದೆ, ಫಕ್ಕನೆ ಅವರೊಳಗೆ ನುಗ್ಗಿ ಅವರನ್ನು ಕೊಂದು ಕೆಲಸವನ್ನು ನಿಲ್ಲಿಸಿಬಿಡೋಣ," ಎಂದುಕೊಳ್ಳುತ್ತಿದ್ದರು. 12ಅವರ ನೆರೆಯೂರುಗಳಲ್ಲಿ ವಾಸಿಸುತ್ತಿದ್ದ ಯೆಹೂದ್ಯರು ಬಂದು, "ನೀವು ಯಾವ ಕಡೆಗೆ ತಿರುಗಿಕೊಂಡರೂ ಆ ಎಲ್ಲಾ ಕಡೆಗಳಿಂದ ನಮಗೆ ವಿರೋಧವಾಗಿ ಯುದ್ಧಕ್ಕೆ ಬರುತ್ತಾರೆ," ಎಂದು ಪದೇ ಪದೇ ತಿಳಿಸುತ್ತಿದ್ದರು. 13ಆಗ ನಾನು ಜನರಿಗೆ, "ಕತ್ತಿ, ಬಿಲ್ಲು, ಬರ್ಜಿಗಳನ್ನು ಹಿಡಿದುಕೊಂಡು ಗೋಡೆಯ ಹಿಂದಣ ತಗ್ಗಾದ ಬಯಲುಗಳಲ್ಲಿ ಗೋತ್ರಗೋತ್ರಗಳಾಗಿ ನಿಲ್ಲಿ," ಎಂದು ಆಜ್ಞಾಪಿಸಿದೆ.

14 ಅವರನ್ನು ಸಂದರ್ಶಿಸಿ, ಅವರ ಮುಂದೆ ನಿಂತು, ಶ್ರೀಮಂತರನ್ನೂ ಅಧಿಕಾರಗಳನ್ನೂ ಉಳಿದ ಜನರನ್ನೂ ಸಂಬೋಧಿಸಿ, "ನಿಮ್ಮ ಹಗೆಗಳಿಗೆ ಹೆದರಬೇಡಿ; ಮಹೋನ್ನತರೂ ಭಯಭಕ್ತಿಗೆ ಪಾತ್ರರೂ ಆದ ಸರ್ವೇಶ್ವರಸ್ವಾಮಿಯನ್ನು ಸ್ಮರಿಸಿಕೊಂಡು, ನಿಮ್ಮ ಸಹೋದರರಿಗಾಗಿ, ಮಡದಿ ಮಕ್ಕಳಿಗಾಗಿ ಹಾಗು ನಿಮ್ಮ ಮನೆಮಠಗಳಿಗಾಗಿ ಕಾದಾಡಿರಿ," ಎಂದು ಹುರಿದುಂಬಿಸಿದೆ. 15ನಮ್ಮ ಶತ್ರುಗಳು ತಮ್ಮ ಹಂಚಿಕೆ ನಮಗೆ ಗೊತ್ತಾಯಿತೆಂದೂ ದೇವರು ಅದನ್ನು ವ್ಯರ್ಥಮಾಡಿದರೆಂದೂ ತಿಳಿದುಕೊಂಡರು. ನಮ್ಮನ್ನು ಬಿಟ್ಟುಹೋದರು; ನಾವೆಲ್ಲರು ನಮ್ಮ ನಮ್ಮ ಗೋಡೆಯ ಕೆಲಸಕ್ಕೆ ಮತ್ತೆ ಕೈಹಾಕಿದೆವು.

16 ಅಂದಿನಿಂದ ನನ್ನ ಸ್ವಂತ ಆಳುಗಳಲ್ಲಿ ಅರ್ಧಮಂದಿ ಕಟ್ಟಡ ಕೆಲಸದಲ್ಲಿ ನಿರತರಾದರು. ಅರ್ಧ ಮಂದಿ ಕವಚವನ್ನು ಧರಿಸಿಕೊಂಡು ಬರ್ಜಿ, ಗುರಾಣಿ, ಬಿಲ್ಲುಗಳನ್ನು ಹಿಡಿದುಕೊಂಡು ನಿಂತರು. ಅದೇ ಪ್ರಕಾರ ಅಧಿಕಾರಿಗಳೂ ಗೋಡೆ ಕಟ್ಟುವ ಯೆಹೂದ್ಯರ ಹಿಂದೆ ನಿಂತರು. 17ಹೊರೆ ಹೊರುವವರೂ ಒಂದು ಕೈಯಿಂದ ಹೊರೆಹೊತ್ತು ಇನ್ನೊಂದು ಕೈಯಿಂದ ಈಟಿ ಹಿಡಿದುಕೊಳ್ಳುತ್ತ ಇದ್ದರು. 18ಕಟ್ಟುವವರಲ್ಲಿ ಪ್ರತಿಯೊಬ್ಬನೂ ತನ್ನ ತನ್ನ ಕತ್ತಿಯನ್ನು ಸೊಂಟಕ್ಕೆ ಬಿಗಿದುಕೊಳ್ಳುತ್ತ ಇದ್ದನು. ನಾನಂತೂ ಕಹಳೆ ಊದುವವನೊಬ್ಬನನ್ನು ನನ್ನ ಬಳಿಯಲ್ಲೇ ಇರಿಸಿಕೊಂಡಿದ್ದೆ, 19ಶ್ರೀಮಂತರಿಗು, ಅಧಿಕಾರಿಗಳು ಹಾಗು ಉಳಿದ ಜನರಿಗು, "ನಾವು ಮಾಡುವ ಕೆಲಸ ದೊಡ್ಡದು, ಹಲವಾರು ಎಡೆಗಳಲ್ಲಿ ನಡೆಯುವಂಥದ್ದು; ನಾವು ಗೋಡೆಯ ನಿಮಿತ್ತ ಒಬ್ಬರಿಂದ ಒಬ್ಬರು ದೂರವಾಗಿರುತ್ತೇವೆ. 20ನಿಮಗೆ ಕಹಳೆಯ ಧ್ವನಿ ಕೇಳಿದಕೂಡಲೆ, ನಮ್ಮ ಬಳಿಗೆ ಕೂಡಿಬನ್ನಿರಿ. ನಮ್ಮ ದೇವರು ನಮ್ಮ ಪರವಾಗಿ ಯುದ್ಧಮಾಡುವರು," ಎಂದು ಹೇಳಿದ್ದೆ. 21ಹೀಗೆ ನಾವು ಅರುಣೋದಯದಿಂದ ನಕ್ಷತ್ರಗಳು ಮೂಡುವವರೆಗೂ ಕೆಲಸ ಮಾಡುತ್ತಿದ್ದೆವು; ನನ್ನ ಸೇವಕರಲ್ಲಿ ಅರ್ಧ ಮಂದಿ ಬರ್ಜಿ ಹಿಡಿದುಕೊಂಡಿದ್ದರು.

22 ಇದಲ್ಲದೆ, ನಾನು ಮೇಸ್ತ್ರಿಗಳಿಗೆ, "ನಿಮ್ಮ ಆಳುಗಳು ರಾತ್ರಿಯಲ್ಲಿ ನಮಗೆ ಕಾವಾಲಾಗಿರಲು ಹಾಗು ಹಗಲಿನಲ್ಲಿ ಕೆಲಸ ಮಾಡಲು ಸಾಧ್ಯವಾಗುವಂತೆ, ನೀವು ನಿಮ್ಮ ನಿಮ್ಮ ಆಳುಗಳೊಡನೆ ಜೆರುಸಲೇಮಿನಲ್ಲೇ ವಾಸ ಮಾಡಬೇಕು," ಎಂದು ಅಪ್ಪಣೆಮಾಡಿದ್ದೆ. 23ನಾನು, ನನ್ನ ಸಹೋದರರು, ಸೇವಕರು ಹಾಗು ಮೈಗಾವಲಿನವರು ಸ್ನಾನ ಸಮಯದಲ್ಲಿ ಹೊರತು, ಬೇರೆ ಸಮಯದಲ್ಲಿ ನಮ್ಮ ಬಟ್ಟೆಗಳನ್ನು ತೆಗೆದು ಹಾಕುತ್ತಿರಲಿಲ್ಲ.

## ದೀನದಲಿತರ ಶೋಷಣೆಯೆಂಬ ದೂರು

**5** ಕೆಲವು ದಿನಗಳ ನಂತರ ಜನಸಾಮಾನ್ಯರು ಹಾಗು ಅವರ ಹೆಂಡತಿಯರು ತಮ್ಮ ಬಂಧುಗಳಾದ
ಯೆಹೂದ್ಯರಿಗೆ ವಿರುದ್ಧ ಕಟುವಾಗಿ ಗುಣುಗುಟ್ಟತೊಡಗಿದರು.
2ಕೆಲವರು, "ನಮಗೆ ಗಂಡುಹೆಣ್ಣು ಮಕ್ಕಳು ಬಹು ಮಂದಿ ಇದ್ದಾರೆ; ನಮ್ಮ ಜೀವನಕ್ಕಾಗಿ ಕಾಳುಕಡ್ಡಿಗಳನ್ನು ಹೇಗಾದರೂ ಸಂಪಾದಿಸಿ ಕೊಳ್ಳಬೇಕಾಗಿ ಇದೆ," ಎಂದರು.
3ಇನ್ನು ಕೆಲವರು, "ನಮ್ಮ ಹೊಲ, ತೋಟ, ಮನೆಗಳನ್ನು ಅಡವು ಇಟ್ಟಾಯಿತು; ಹಾಗೆ ಮಾಡಿಯಾದರೂ ಈ ಬರಗಾಲದಲ್ಲಿ ಧಾನ್ಯವನ್ನು ಸಂಪಾದಿಸಿಕೊಳ್ಳಬೇಕಾಗಿದೆ," ಎಂದರು.
4ಮತ್ತೆ ಕೆಲವರು, "ಸರಕಾರಕ್ಕೆ ಕಂದಾಯಕೊಡುವುದಕ್ಕಾಗಿ ನಮ್ಮ ಹೊಲ, ತೋಟಗಳ ಮೇಲೆ ಸಾಲ ತೆಗೆದುಕೊಳ್ಳಬೇಕಾಯಿತು;
5ಆ ನಮ್ಮ ಸಹೋದರರ ಕುಲಕ್ಕೂ ನಮ್ಮ ಕುಲಕ್ಕೂ ಅವರ ಮಕ್ಕಳಿಗೂ ನಮ್ಮ ಮಕ್ಕಳಿಗೂ ಏನು ಹೆಚ್ಚುಕಡಿಮೆ? ನೋಡಿ, ನಾವು ನಮ್ಮ ಗಂಡುಹೆಣ್ಣು ಮಕ್ಕಳನ್ನು ಪರರಿಗೆ ದಾಸರನ್ನಾಗಿ ಕೊಡಬೇಕಾಯಿತು; ನಮ್ಮ ಹೆಣ್ಣುಮಕ್ಕಳಲ್ಲಿ ಕೆಲವರನ್ನು ಈಗಾಗಲೇ ಅಪಹರಿಸಿದ್ದಾರೆ; ನಮ್ಮ ಪ್ರಯತ್ನವೇನೂ ಸಾಗುವುದಿಲ್ಲ; ನಮ್ಮ ಹೊಲತೋಟಗಳು ಪರಾಧೀನವಾಗಿವೆ," ಎಂದು ಎಲ್ಲಾ ಗೊಣಗಿದರು.

## ಬಡ್ಡಿ ತೆಗೆದುಕೊಳ್ಳುವ ಪದ್ಧತಿ ಬಿಡಿ

6 ಅವರ ಬೊಬ್ಬೆಯನ್ನೂ ಟೀಕೆಗಳನ್ನೂ ಕೇಳಿ ನನಗೆ ಬಹಳ ಸಿಟ್ಟು ಬಂದಿತು.
7ನಾನು ತುಸು ಆಲೋಚಿಸಿ ನೋಡಿದೆ. ಬಳಿಕ ಶ್ರೀಮಂತರನ್ನೂ ಅಧಿಕಾರಿಗಳನ್ನೂ ಖಂಡಿಸಿ, "ನೀವು ನಿಮ್ಮ ಸಹೋದರರಿಂದ ಬಡ್ಡಿ ತೆಗೆದುಕೊಳ್ಳುವುದು ಸರಿಯೆ?" ಎಂದು ಹೇಳಿ ಅವರೊಡನೆ ಬಹಳವಾಗಿ ವಾಗ್ವಾದಿಸಿ ಅವರಿಗೆ ವಿರೋಧವಾಗಿ ಮಹಾಸಭೆಯನ್ನು ಕೂಡಿಸಿದೆ.
8"ನಾವು ನಮ್ಮಿಂದ ಆಗುವಷ್ಟು ನಮ್ಮ ಸಹೋದರರಾದ ಯೆಹೂದ್ಯರಲ್ಲಿ ಅನ್ಯಜನರಿಗೆ ಮಾರಲಾದವರನ್ನು, ಹಣ ಕೊಟ್ಟು ಬಿಡಿಸುತ್ತಿದ್ದೆವು. ಈಗ ನೀವು ನಿಮ್ಮ ಸಹೋದರರನ್ನೇ ಮಾರಿಬಿಡುತ್ತಿದ್ದೀರಿ; ಆಮೇಲೆ ಅವರನ್ನು ನಾವು ಕೊಂಡುಕೊಳ್ಳಬೇಕೇನು?" ಎನ್ನಲು ಅವರು ಉತ್ತರಕೊಡದೆ ಸುಮ್ಮನೆ ಇದ್ದರು.

9 ಆಮೇಲೆ ನಾನು ಅವರಿಗೆ, "ನೀವು ಮಾಡಿದ್ದು ಸರಿಯಲ್ಲ; ನಾವು ನಮ್ಮ ವಿರೋಧಿಗಳಾದ ಅನ್ಯಜನರ ನಿಂದೆಗೆ ಗುರಿಯಾಗದಂತೆ ದೇವರಲ್ಲಿ ಭಯಭಕ್ತಿಯುಳ್ಳವರಾಗಿ ನಡೆದುಕೊಳ್ಳಬೇಕಲ್ಲವೇ?
10ನಾನು, ನನ್ನ ಸಹೋದರರು, ಸೇವಕರು ಸಹ, ಅವರಿಗೆ ಹಣವನ್ನೂ ಧಾನ್ಯವನ್ನೂ ಬಡ್ಡಿಗೆ ಕೊಟ್ಟಿದ್ದೇವೆ. ಬಡ್ಡಿ ತೆಗೆದುಕೊಳ್ಳುವ ಪದ್ಧತಿಯನ್ನು ಬಿಟ್ಟುಬಿಡೋಣ.
11ಅವರ ಹೊಲ, ದ್ರಾಕ್ಷೀತೋಟ, ಎಣ್ಣೆಮರಗಳ ತೋಪು, ಮನೆ ಇವುಗಳನ್ನು ಹಿಂದಕ್ಕೆ ಕೊಟ್ಟು ಬಿಡಿ. ನೀವು ಕೊಟ್ಟ ಹಣ, ಧಾನ್ಯ, ದ್ರಾಕ್ಷಾರಸ, ಎಣ್ಣೆ ಇವುಗಳಿಗೆ ಶೇಕಡಾ ಇಷ್ಟೆಂದು ವಸೂಲಿ ಮಾಡುವ ಹಕ್ಕನ್ನೂ ಕೂಡ ದಯವಿಟ್ಟು ಈ ದಿನವೇ ರದ್ದುಗೊಳಿಸಿ," ಎಂದು ಹೇಳಿದೆ.

12 ಅವರು, "ಹಿಂದಕ್ಕೆ ಕೊಡುತ್ತೇವೆ; ಅವರಿಂದ ಏನೂ ಕೇಳುವುದಿಲ್ಲ. ನೀವು ಹೇಳಿದಂತೆಯೇ ಮಾಡುತ್ತೇವೆ," ಎಂದು ಉತ್ತರ ಕೊಟ್ಟರು. ಆಗ ನಾನು ಯಾಜಕರನ್ನು ಕರೆಯಿಸಿದೆ; ಯಾಜಕರ ಮುಂದೆ, ತಾವು ಕೊಟ್ಟ ಮಾತಿನಂತೆ ನಡೆಯುವುದಾಗಿ ಪ್ರಮಾಣ ಮಾಡಿಸಿದೆ.
13ಇದಲ್ಲದೆ, ನನ್ನ ನಡುಪಟ್ಟಿಯನ್ನು ಝಾಡಿಸಿಬಿಟ್ಟು, "ಈಗ ಕೊಟ್ಟ ಮಾತನ್ನು ಕೈಕೊಳ್ಳದೆ ಪ್ರತಿಯೊಬ್ಬನನ್ನು ದೇವರು ಅವನ ಮನೆಯಿಂದಲೂ ಆಸ್ತಿಪಾಸ್ತಿಯಿಂದಲೂ ಈ ಪ್ರಕಾರವೇ ಝಾಡಿಸಿಬಿಡಲಿ; ಅವನು ನಡುಪಟ್ಟಿಯಂತೆಯೇ ಝಾಡಿಸಲ್ಪಟ್ಟು ಬರಿದಾಗಲಿ," ಎಂದೆ. ಕೂಡಲೆ ಸಭೆಯವರೆಲ್ಲರು 'ಹಾಗೆಯೇ ಆಗಲಿ' ಎಂದು ಹೇಳಿ ಸರ್ವೇಶ್ವರನನ್ನು ಕೊಂಡಾಡಿ, ಕೊಟ್ಟ ಮಾತನ್ನು ಕೈಗೊಂಡರು.

## ನಿಸ್ವಾರ್ಥಿಯಾದ ನೆಹೆಮೀಯ

14 ಅರಸ ಅರ್ತಷಸ್ತನು ನನ್ನನ್ನು ಜುದೇಯ ನಾಡಿನ ರಾಜ್ಯಪಾಲನನ್ನಾಗಿ ನೇಮಿಸಿದಂದಿನಿಂದ ಹನ್ನೆರಡು ವರ್ಷಗಳವರೆಗೆ ಅಂದರೆ, ಅವನ ಆಳ್ವಿಕೆಯ ಇಪ್ಪತ್ತನೆಯ ವರ್ಷದಿಂದ ಮೂವತ್ತೆರಡನೆಯ ವರ್ಷದವರೆಗೆ, ನಾನಾಗಲಿ, ನನ್ನ ಸಹೋದರರಾಗಲಿ ರಾಜ್ಯಪಾಲನೆಗೆ ಸಲ್ಲತಕ್ಕ ಭತ್ಯದಿಂದ ಜೀವನ

ಮಾಡಲಿಲ್ಲ. 15ನನಗಿಂತ ಮುಂಚೆಯಿದ್ದ ರಾಜ್ಯಪಾಲರು ಜನರ ಮೇಲೆ ಬಹಳ ತೆರಿಗೆ ಹೊರಿಸಿ, ಅವರಿಂದ
ದಿನಕ್ಕೆ ನಾಲ್ವತ್ತು ಬೆಳ್ಳಿನಾಣ್ಯದ ಆಹಾರವನ್ನೂ ದ್ರಾಕ್ಷಾರಸವನ್ನೂ ತೆಗೆದುಕೊಳ್ಳುತ್ತಿದ್ದರು; ಅವರ ಸೇವಕರೂ
ಜನರ ಮೇಲೆ ದೊರೆತನ ನಡೆಸುತ್ತ ಇದ್ದರು. ನಾನಾದರೋ ದೇವರಲ್ಲಿ ಭಯ ಭಕ್ತಿಯುಳ್ಳವನಾಗಿ ಹಾಗೆ
ಮಾಡಿದೆ. 16ಆ ಗೋಡೆ ಕಟ್ಟುವುದರಲ್ಲೇ ನಿರತನಾಗಿದ್ದೆ; ಮತ್ತು ನನ್ನ ಎಲ ಸೇವಕರು ಪ್ರತಿದಿನ ಆ ಕೆಲಸಕ್ಕೆ
ಬರುವಂತೆ ನೋಡುತ್ತಿದ್ದೆ. ನಾವು ಅಲ್ಲಿ ಭೂಮಿಯನ್ನು ಸಂಪಾದಿಸಿಕೊಂಡಿರಲಿಲ್ಲ. 17ಇದಲ್ಲದೆ,
ಯೆಹೂದ್ಯರಲ್ಲಿ ನೂರೈವತ್ತು ಮಂದಿ ಅಧಿಕಾರಿಗಳು ಹಾಗು ಸುತ್ತಣ ಜನಾಂಗಗಳ ಮಧ್ಯೆಯಿಂದ ನಮ್ಮ
ಬಳಿಗೆ ಬರುತ್ತಿದ್ದವರು ನನ್ನ ಪಂಕ್ತಿಯಲ್ಲೇ ಊಟಮಾಡುತ್ತಿದ್ದರು. 18ಪ್ರತಿದಿನ ಒಂದು ಹೋರಿ, ಆರು
ಕೊಬ್ಬಿದ ಕುರಿ, ಕೆಲವು ಕೋಳಿಗಳು ನಮ್ಮ ಭೋಜನಕ್ಕಾಗಿ ಸಿದ್ಧ ಆಗುತ್ತಿದ್ದವು. ಹತ್ತು ದಿವಸಕ್ಕೊಮ್ಮೆ ನಾನು
ಎಲ್ಲ ತರದ ದ್ರಾಕ್ಷಾರಸವನ್ನು ಬೇಕಾಗುವಷ್ಟು ಒದಗಿಸಿ ಕೊಡುತ್ತಿದ್ದೆ. ನನಗೆ ಇಷ್ಟೆಲ್ಲಾ ವೆಚ್ಚ ಆಗುತ್ತಿದ್ದರೂ, ಆ
ಜನರು ಮಾಡಬೇಕಾಗಿದ್ದ ಕೆಲಸ ಬಹುಕಷ್ಟಕರವಾಗಿದ್ದುದರಿಂದ, ನಾನು ರಾಜಪಾಲನೆಗೆ ಸಲ್ಲತಕ್ಕ ಭತ್ಯವನ್ನು
ವಸೂಲಿ ಮಾಡಲಿಲ್ಲ. 19'ನನ್ನ ದೇವರೇ, ನಾನು ಈ ಜನರಿಗೆ ಮಾಡಿದ ಉಪಕಾರವನ್ನು ನೆನೆಸಿಕೊಂಡು
ನನಗೆ ಒಳಿತನ್ನು ಅನುಗ್ರಹಿಸಿ!' ಎಂದು ಪ್ರಾರ್ಥಿಸಿದೆ.

### ವಿರೋಧಿಗಳ ಕುಯುಕ್ತಿ

**6** ನಾನು ಗೋಡೆಯನ್ನು ಕಟ್ಟಿಮುಗಿಸಿ ಬಾಗಿಲುಗಳಿಗೆ ಕದಗಳನ್ನು ಇನ್ನೂ ಹಚ್ಚಿಸಿರಲಿಲ್ಲ. ಗೋಡೆಯ
ಸಂದುಗೊಂದುಗಳನ್ನು ಕೂಡಿಸಿದ ಸಂಗತಿ ಸನ್ಬಲ್ಲಟ್, ಟೋಬಿಯ ಹಾಗು ಅರೇಬಿಯನಾದ ಗೆಷಮ್
ಇವರಿಗೂ 2ನಮ್ಮ ಬೇರೆ ವಿರೋಧಿಗಳಿಗೂ ಗೊತ್ತಾಯಿತು. ಅವರಲ್ಲಿ ಸನ್ಬಲ್ಲಟ್ ಮತ್ತು ಗೆಷನರು ನನಗೆ,
"ಓನೋ ಕಣಿವೆಯ ಹಕ್ಕೆ ಫಿರೀಮಿನಲ್ಲಿ ಒಬ್ಬರನೊಬ್ಬರು ಎದುರುಗೊಳ್ಳೋಣ ಬಾ," ಎಂದು ಹೇಳಿ
ಕಳುಹಿಸಿದರು. ಅವರು ನನಗೆ ಕೇಡುಬಗೆಯುವವರು ಎಂದು ತಿಳಿಯಿತು. 3ನಾನು ದೂತರ ಮುಖಾಂತರ
ಅವರಿಗೆ, "ನನಗೆ ಮುಖ್ಯವಾದ ಕಾರ್ಯವಿದೆ; ಅದನ್ನು ಬಿಟ್ಟು ಬಂದರೆ ಕೆಲಸ ನಿಂತುಹೋಗುತ್ತದೆ; ನಾನು
ಬರಲಾಗದು." ಎಂದು ಹೇಳಿಸಿದೆ. 4ಅವರು ನಾಲ್ಕುಸಾರಿ ಅದೇ ರೀತಿ ಹೇಳಿ ಕಳುಹಿಸಿದರೂ ನಾನು ಅದೇ
ಉತ್ತರಕೊಟ್ಟೆ.

5 ಐದನೆಯ ಸಾರಿ ಸನ್ಬಲ್ಲಟನು ಅದೇ ಉದ್ದೇಶದಿಂದ ತನ್ನ ಸ್ವಂತ ಸೇವಕನ ಮುಖಾಂತರ
ಮುಚ್ಚದಿದ್ದ ಒಂದು ಪತ್ರವನ್ನು ಕಳುಹಿಸಿದನು. 6ಅದರಲ್ಲಿ, "ಗೆಷೆಮ್ ಎಂಬವನು ನನಗೆ ತಿಳಿಸಿದ ಪ್ರಕಾರ
ನೀನೂ ಯೆಹೂದ್ಯರೂ ನನ್ನ ಮೇಲೆ ದಾಳಿಮಾಡಬೇಕೆಂದಿದ್ದೀರಿ; ಆದುದರಿಂದಲೇ, ನೀನು ಆ
ಗೋಡೆಯನ್ನು ಕಟ್ಟಿಸುತ್ತಿರುವೆ. ನೀನು ಅವರ ಅರಸನಾಗುವೆ ಎಂಬ ಸುದ್ದಿ ಜನರಲ್ಲಿ ಹಬ್ಬಿದೆ. 7ಇದಲ್ಲದೆ
ಜುದೇಯದಲ್ಲಿ ಒಬ್ಬ ಅರಸನಿದ್ದಾನೆಂದು ನಿನ್ನನ್ನು ಕುರಿತು ಜೆರುಸಲೇಮಿನಲ್ಲಿ ಪ್ರಕಟಿಸುವುದಕ್ಕಾಗಿ
ಪ್ರವಾದಿಗಳನ್ನು ನೇಮಿಸಿರುವೆ ಎಂಬುದಾಗಿ ಹೇಳುತ್ತಾರೆ. ಈ ಸುದ್ದಿ ರಾಜನಿಗೂ ಮುಟ್ಟಲಿದೆ; ಆದುದರಿಂದ
ಕೂಡಿ ಮಾತಾಡೋಣಬಾ," ಎಂದು ಬರೆದಿತ್ತು. 8ಅದಕ್ಕೆ ನಾನು, "ನೀನು ಬರೆದಂಥದ್ದು ಏನೂ ನಡೆದಿಲ್ಲ;
ಅದನ್ನು ನೀನೆ ನಿನ್ನ ಮನಸ್ಸಿನಲ್ಲಿ ಕಲ್ಪಿಸಿಕೊಂಡಿರುವೆ," ಎಂದು ಹೇಳಿಕಳುಹಿಸಿದೆ. 9ಹೀಗೆ ಎಲ್ಲರೂ, ನಮ್ಮ
ಕೈಗಳು ಜೋಲುಬಿದ್ದು ಕೆಲಸ ಮುಗಿಯದೆ ನಿಂತುಹೋಗಲಿ ಎಂದುಕೊಂಡು ನಮ್ಮನ್ನು ಹೆಸರಿಸುವುದಕ್ಕೆ
ಪ್ರಯತ್ನಿಸಿದರು. ನಾನೋ, "ನನ್ನ ದೇವರೇ, ನನ್ನ ಕೈಗಳನ್ನು ಬಲಪಡಿಸಿ," ಎಂದು ಪ್ರಾರ್ಥಿಸಿದೆ.

10 ಒಂದು ದಿನ ನಾನು ಮೆಹೇಟಬೇಲನ ಮೊಮ್ಮಗನೂ ದೆಲಾಯನ ಮಗನೂ ಆದ ಶೆಮಾಯನ
ಮನೆಗೆ ಹೋದೆ. ಅವನು ಅಲ್ಲಿ ಅವಿತುಕೊಂಡಿದ್ದನು. ಅವನು ನನಗೆ, "ನಿನ್ನನ್ನು ಕೊಲ್ಲುವುದಕ್ಕೆ ಬರುತ್ತಾರೆ;
ಈ ರಾತ್ರಿಯೇ ಬರುತ್ತಾರೆ! ಆದುದರಿಂದ ನಾವಿಬ್ಬರೂ ದೇವಾಲಯಕ್ಕೆ ಹೋಗಿ ಗರ್ಭಗುಡಿಯನ್ನು ಸೇರಿ
ಅದರ ಕದಗಳನ್ನು ಮುಚ್ಚಿಕೊಳ್ಳೋಣ ಬಾ." ಎಂದು ಹೇಳಿದನು.

11 ಅದಕ್ಕೆ ನಾನು, "ನನ್ನಂಥ ಗಂಡು ಓಡಿಹೋಗಿ ಅವಿತುಕೊಳ್ಳುವುದು ಸರಿಯೇ? ಇದಲ್ಲದೆ
ಪ್ರಾಣರಕ್ಷಣೆಗಾಗಿ ಗರ್ಭಗುಡಿಯನ್ನು ನಾನು ಪ್ರವೇಶಿಸಬಹುದೇ? ಇಲ್ಲ, ನಾನು ಬರುವುದಿಲ್ಲ," ಎಂದು
ಉತ್ತರಕೊಟ್ಟೆ. 12ನಾನು ಸೂಕ್ಷ್ಮವಾಗಿ ವಿಚಾರಮಾಡಿದಾಗ, ನನ್ನ ಬಗ್ಗೆ ಆ ಕಾಲಜ್ಞಾನ ವಚನವನ್ನು

ಉಚ್ಚರಿಸುವುದಕ್ಕೆ ಇವನನ್ನು ಪ್ರೇರಿಸಿದವರು ದೇವರಲ್ಲ; ಟೋಬೀಯನೂ ಸನ್ಬಲ್ಲಟನೂ ಇವನಿಗೆ ಲಂಚಕೊಟ್ಟು ಹಾಗೆ ಹೇಳಿಸಿದರೆಂದು ನನಗೆ ಗೊತ್ತು ಆಯಿತು. 13ನಾನು ಅಂಜಿಕೊಂಡು, ಇವನ ಮಾತಿನಂತೆ ನಡೆದು ದೋಷಿಯಾಗಿ, ತಮ್ಮ ನಿಂದೆಗೂ ಕೆಟ್ಟ ಹೆಸರಿಗೂ ಗುರಿಯಾಗಲಿ ಎಂದು ಅವರು ಈ ಶೆಮಾಯನಿಗೆ ಲಂಚಕೊಟ್ಟಿದ್ದರು. 14"ಓ ದೇವರೇ, ಟೋಬೀಯ–ಸನ್ಬಲ್ಲಟರು ಮಾಡಿದ ಈ ದುಷ್ಕೃತ್ಯಗಳು ನಿಮ್ಮ ನೆನಪಿನಲ್ಲಿರಲಿ; ನನ್ನನ್ನು ಹೆದರಿಸುವುದಕ್ಕೆ ಪ್ರಯತ್ನಿಸಿದ ಪ್ರವಾದಿನಿಯಾದ ನೋವದ್ಯ ಮುಂತಾದ ಪ್ರವಾದಿಗಳನ್ನು ಮರೆಯಬೇಡಿ," ಎಂದು ನಾನು ಪ್ರಾರ್ಥಿಸಿದೆ.

### ಗೋಡೆಕಟ್ಟಡ ಕೆಲಸದ ಮುಕ್ತಾಯ

15 ಗೋಡೆಯು ಭಾದ್ರಪದ ಮಾಸದ ಇಪ್ಪತ್ತೈದನೆಯ ದಿನದಲ್ಲಿ ಮುಗಿಯಿತು. ಅದನ್ನು ಕಟ್ಟುವುದಕ್ಕೆ ಒಟ್ಟು ಐವತ್ತೆರಡು ದಿನಗಳು ಹಿಡಿದವು. 16ಈ ಸುದ್ದಿ ಸುತ್ತ–ಮುತ್ತಲಿನ ನಮ್ಮ ವಿರೋಧಿಗಳಾದ ಜನಾಂಗಗಳಿಗೆ ಮುಟ್ಟಿತು. ಅವರು ಭಯಭೀತರಾದರು. ಸೊಕ್ಕು ಮುರಿದವರಾಗಿ ಹಾಗೇ ಕುಗ್ಗಿಹೋದರು. ಈ ಕಾರ್ಯ ನಮ್ಮ ದೇವರಿಂದಲೇ ಪೂರ್ಣಗೊಂಡಿತು ಎಂದು ಅವರಿಗೆ ಮನದಟ್ಟಾಯಿತು.

17 ಅದೇ ಸಮಯದಲ್ಲಿ, ಯೆಹೂದ್ಯ ಶ್ರೀಮಂತರಿಗೂ ಟೋಬೀಯನಿಗೂ ಬಹಳ ಪತ್ರ ವ್ಯವಹಾರ ನಡೆಯುತ್ತಿತ್ತು. 18ಏಕೆಂದರೆ ಅವನು ಆರಹನ ಮಗ ಶೆಕನ್ಯನ ಅಳಿಯನಾಗಿದ್ದ ಹಾಗು ಯೆಹೋಹಾನಾನನೆಂಬ ಅವನ ಮಗ ಬೆರೆಕ್ಯನ ಮಗನಾದ ಮೆಷುಲ್ಲಾಮನ ಮಗಳನ್ನು ಮದುವೆ ಮಾಡಿಕೊಂಡಿದ್ದ. ಆದ್ದರಿಂದ ಯೆಹೂದ್ಯರಲ್ಲಿ ಅನೇಕರು ಅವನಿಗೆ ಪ್ರಮಾಣಮಾಡಿ ಅವನ ಪಕ್ಷದವರಾಗಿದ್ದರು. 19ಅವರು ಅವನ ಒಳ್ಳೆತನವನ್ನೇ ನನ್ನ ಮುಂದೆ ವರ್ಣಿಸುತ್ತಾ ನನ್ನ ಮಾತುಗಳನ್ನು ಅವನಿಗೆ ತಿಳಿಸುತ್ತಾ ಇದ್ದರು. ಟೋಬೀಯನೂ ನನ್ನಲ್ಲಿ ಭಯಹುಟ್ಟಿಸುವುದಕ್ಕಾಗಿ ನನಗೆ ಪತ್ರಗಳನ್ನು ಕಳುಹಿಸುತ್ತಿದ್ದನು.

**7** ಗೋಡೆಯನ್ನು ಕಟ್ಟಿ ಮುಗಿಸಿದನಂತರ ನಾನು ಕದಗಳನ್ನು ಹಚ್ಚಿಸಿದೆ; ದ್ವಾರಪಾಲಕರನ್ನೂ ಗಾಯಕರನ್ನೂ ಲೇವಿಯರನ್ನೂ ನೇಮಿಸಲಾಯಿತು. 2ಆಮೇಲೆ ನನ್ನ ತಮ್ಮ ಹನಾನಿಗೆ ಹಾಗು ಬಹಳ ನಂಬಿಗಸ್ತನೂ ದೇವರಲ್ಲಿ ವಿಶೇಷ ಭಯಭಕ್ತಿಯುಳ್ಳವನೂ ದುರ್ಗಾ ಅಧಿಕಾರಿಯೂ ಆಗಿದ್ದ ಹನನ್ಯನಿಗೆ ಜೆರುಸಲೇಮಿನ ಮೇಲ್ವಿಚಾರಣೆಯನ್ನು ಒಪ್ಪಿಸಿದೆ. 3ಅವರಿಗೆ, "ಬಿಸಿಲೇರುವುದಕ್ಕಿಂತ ಮೊದಲೇ ಜೆರುಸಲೇಮಿನ ಬಾಗಿಲುಗಳನ್ನು ತೆರೆಯಬಾರದು; ಕಾವಲುಗಾರರು ಇನ್ನೂ ಇರುವಲ್ಲೇ ಕದಗಳನ್ನು ಮುಚ್ಚಿ ಭದ್ರಪಡಿಸಬೇಕು. ಇದಲ್ಲದೆ, ಜೆರುಸಲೇಮಿನ ನಿವಾಸಿಗಳಲ್ಲೇ ಕಾವಲುಗಾರರನ್ನು ಗೊತ್ತುಮಾಡಿರಿ. ಪ್ರತಿಯೊಬ್ಬನನ್ನು ಅವನವನ ಮನೆಯ ಎದುರಿನಲ್ಲೇ ಕಾವಲಿರುವಂತೆ ನೇಮಿಸಿರಿ," ಎಂದು ಆಜ್ಞಾಪಿಸಿದೆ.

### ಬಾಬಿಲೋನಿನ ಸೆರೆವಾಸದಿಂದ ಹಿಂದಿರುಗಿದವರ ಪಟ್ಟಿ

(ಎಜ್ರ 2.1–70)

4 ಪಟ್ಟಣವೇನೊ ಸವಿಸ್ತಾರವಾಗಿತ್ತು. ಆದರೆ ಅದರೊಳಗಿದ್ದ ಜನ ಬಹಳ ಸ್ವಲ್ಪ ಮಂದಿ. ಮನೆಗಳನ್ನು ಇನ್ನೂ ಕಟ್ಟಿರಲಿಲ್ಲ. 5ಹೀಗಿರಲು, ನಾನು ನನ್ನ ದೇವರ ಪ್ರೇರಣೆಯಿಂದ ಶ್ರೀಮಂತರನ್ನು, ಅಧಿಕಾರಿಗಳನ್ನು ಹಾಗು ಜನಸಾಮಾನ್ಯರನ್ನು ಜನಗಣತಿಗಾಗಿ ಸಭೆಸೇರಿಸಿದೆ. ಆಗ ಜೆರುಸಲೇಮಿಗೆ ಮೊದಲು ಹಿಂದಿರುಗಿ ಬಂದವರ ಹೆಸರುಗಳ ಪಟ್ಟಿ ನನಗೆ ಸಿಕ್ಕಿತು. ಅದರಲ್ಲಿ ಹೀಗೆ ಬರೆದಿತ್ತು:

6 ಸೆರೆಯಿಂದ ಹಿಂತಿರುಗಿ ಬಂದ ಯೆಹೂದ ಜನಾಂಗದವರ ಪಟ್ಟಿ:

ಬಾಬಿಲೋನಿನ ಅರಸ ನೆಬೂಕದ್ನೆಚ್ಚರನಿಂದ ಸೆರೆಗೆ ಒಯ್ಯಲ್ಪಟ್ಟವರಲ್ಲಿ ಜೆರುಸಲೇಮಿಗೂ ಜುದೇಯ ಪ್ರಾಂತ್ಯದ ಸ್ವಂತ ಪಟ್ಟಣಗಳಿಗೂ ಹಿಂದಿರುಗಿದವರು ಇವರು:

**ಅ.** ಇವರ ನಾಯಕರಲ್ಲಿ 7ಜೆರುಬ್ಬಾಬೆಲ್, ಯೇಷೂವ, ನೆಹೆಮೀಯ, ಅಜರ್ಯ, ರಗಮ್ಯ, ನಹಮಾನೀ, ಮೊರ್ದೆಕೈ, ಬಿಲ್ಷಾನ್, ಮಿಸ್ಪೆರತ್, ಬಿಗ್ವೈ, ನೆಹೂಮ್ ಹಾಗು ಬಾಣ ಎಂಬವರು:

ಆ. ಅವರ ಜನಸಾಮಾನ್ಯರಲ್ಲಿ :

| | |
|---|---|
| 8 ಪರೋಷಿನವರು | 2172 |
| 9 ಶೆಫಟ್ಯನವರು | 372 |
| 10 ಆರಹನವರು | 652 |
| 11 ಪಹತ್ ಮೋವಾಬಿನವರಾದ ಯೇಷೂವ ಮತ್ತು ಯೋವಾಬ್ ಸಂತಾನದವರು | 2818 |
| 12 ಏಲಾಮಿನವರು | 1254 |
| 13 ಜತ್ತೂವಿನವರು | 845 |
| 14 ಜಕ್ಕೈಯವರು | 760 |
| 15 ಬಿನ್ನೂಯವರು | 648 |
| 16 ಬೇಬೈಯವರು | 628 |
| 17 ಅಜ್ಗಾದಿನವರು | 2322 |
| 18 ಅದೋನೀಕಾಮಿನವರು | 667 |
| 19 ಬಿಗ್ವೈಯವರು | 2067 |
| 20 ಆದೀನನವರು | 665 |
| 21 ಅಟೇರಿನವರಾದ ಹಿಜ್ಕೀಯನ ಸಂತಾನದವರು | 98 |
| 22 ಹಾಷುಮಿನವರು | 328 |
| 23 ಬೇಷೈಯವರು | 324 |
| 24 ಹಾರಿಫಿನವರು | 112 |
| 25 ಗಿಬ್ಯೋನಿನವರು | 95 |
| 26 ಬೆತ್ಲೆಹೇಮ್ ನೆಟೋಫ ಊರುಗಳವರು | 188 |
| 27 ಅನಾತೋತ್ ಊರಿನವರು | 128 |
| 28 ಬೇತಜ್ಮಾವೇತಿನವರು | 42 |
| 29 ಕಿರ್ಯತ್ಯಾರೀಮ್ ಕೆಫೀರಾ ಬೇರೋತ್ ಊರುಗಳವರು | 743 |
| 30 ರಾಮಾ, ಗೆಬ ಊರುಗಳವರು | 621 |
| 31 ಮಿಕ್ಮಾಸಿನವರು | 122 |
| 32 ಬೇತೇಲ್, ಅಯಿ ಎಂಬ ಊರುಗಳವರು | 123 |
| 33 ಎರಡನೆಯ ನೆಬೋನಿನವರು | 52 |
| 34 ಎರಡನೆಯ ಏಲಾಮಿನವರು | 1254 |
| 35 ಹಾರಿಮನವರು | 320 |
| 36 ಜೆರಿಕೋವಿನವರು | 345 |
| 37 ಲೋದ್, ಹಾದೀದ್, ಓನೋ ಎಂಬ ಊರುಗಳವರು | 721 |
| 38 ಸೆನಾಹನವರು | 3930 |

ಇ 39 ಯಾಜಕರಲ್ಲಿ –

| | |
|---|---|
| ಯೆದಾಯನವರಾದ ಯೇಷೂವನ | |
| ಮನೆಯವರು | 973 |
| 40 ಇಮ್ಮೇರನವರು | 1052 |
| 41 ಪಷ್ಹೂರನವರು | 1247 |
| 42 ಹಾರಿಮನವರು | 1017 |
| **ಈ** 43 ಲೇವಿಯರಲ್ಲಿ – | |
| ಹೋದವ್ಯನವರಾದ ಯೇಷೂವ, | |
| ಕದ್ಮೀಯೇಲ್ ಇವರ | |
| ಸಂತಾನದವರು | 74 |
| **ಉ** 44 ಗಾಯಕರಲ್ಲಿ – ಆಸಾಫ್ಯರು | 148 |
| **ಊ** 45 ದ್ವಾರಪಾಲಕರಲ್ಲಿ – | |
| ಶಲ್ಲೂಮ್, ಆಟೇರ್, ಟಲ್ಮೋನ್, | |
| ಅಕ್ಕೂಬ್, ಹಟೀಟಾ, ಶೋಬೈ | |
| ಇವರ ಸಂತಾನದವರು ಒಟ್ಟು | 138 |

**ಎ** 46 ದೇವಸ್ಥಾನ ಪರಿಚಾರಕರಲ್ಲಿ –ಜೀಹ, ಹಸೂಫ, ಟಬ್ಬಾವೋತ್, ಕೇರೋಸ್, ಸೀಯ, 47ಪಾದೋನ್, ಲೆಬಾನ, ಹಗಾಬ, 48–49ಸಲ್ಮೈ, ಹಾನಾನ್, ಗಿದ್ದೇಲ್, ಗಹರ್, ರೆವಾಯ, ರೆಚೀನ್, 50–51ನೆಕೋದ, ಗಜ್ಜಾಮ್, ಉಜ್ಜ, ಪಾಸೇಹ, 52ಬೇಸೈ, ಮೆಯನೀಮ್, ನೆಫೀಷೆಸೀಮ್, 53ಬಕ್ಬೂಕ್, ಹಕ್ಕೂಫ, ಹರ್ಹೂರ್, ಬಚ್ಲೂತ್, ಮೆಹೀದ, 54–55ಹರ್ಷ, ಬರ್ಕೋಸ್, ಸೀಸೆರ, ತೆಮಹ, 56ನೆಚೀಹ, ಹಟೀಫ ಇವರ ಸಂತಾನದವರು.

**ಏ** 57 ಸೊಲೊಮೋನನ ದಾಸರಲ್ಲಿ –ಸೋಟೈ, ಸೋಫೆರೆತ್, ಪೆರೀದ, ಯಾಲ, 58ದರ್ಕೋನದ, ಗಿದೇಲ್, ಶೆಫಟ್ಯ, ಹಟ್ಟೀಲ್, 59ಪೋಕೆರೆತ್ ಹಚ್ಜೆಬಾಯೀಮ್, ಆಮೋನ್ ಇವರ ಸಂತಾನದವರು.

60 ಎಲ್ಲಾ ದೇವಸ್ಥಾನ ಪರಿಚಾರಕರು ಹಾಗು ಸೊಲೊಮೋನನ ಸೇವಕರು ಒಟ್ಟು – 392 ಮಂದಿ.

61 ತೇಲ್ಮೆಲಹ, ತೇಲ್ಹರ್ಷ, ಕೆರೂಬದ್ದೋನ್, ಇಮ್ಮೇರ್ ಎಂಬ ಊರುಗಳಿಂದ ಬಂದವರಾಗಿ ತಮ್ಮ ಗೋತ್ರವಂಶಾವಳಿಗಳನ್ನು ತೋರಿಸಿ ತಾವು ಇಸ್ರಯೇಲರೆಂಬುದನ್ನು ಸ್ಥಾಪಿಸಲಾರದವರಾದ 62ದೆಲಾಯ ಟೋಬೀಯ ನೆಕೋದ ಇವರ ಸಂತಾನದವರು 642 ಮಂದಿ.

63 ಯಾಜಕರಲ್ಲಿ ಹೋಬಾಯ, ಹಕ್ಕೋಚ್, ಬರ್ಜಿಲ್ಲೈ ಇವರ ಸಂತಾನದವರು ತಮ್ಮ ವಂಶಾವಳಿಯನ್ನು ತೋರಿಸಲಾರದೆ ಹೋದರು. (ಈ ಬರ್ಜಿಲ್ಲೈ ಎಂಬುವನು ಗಿಲ್ಯಾದ್ಯನಾದ ಬರ್ಜಿಲ್ಲೈಯ ಹೆಣ್ಣುಮಕ್ಕಳಲ್ಲಿ ಒಬ್ಬಳನ್ನು ಮದುವೆ ಮಾಡಿಕೊಂಡು ಅವನ ಹೆಸರನ್ನು ಇಟ್ಟುಕೊಂಡಿದ್ದನು.) 64ಇವರು ತಮ್ಮ ವಂಶಾವಳಿ ಪತ್ರಗಳನ್ನು ಹುಡುಕಿದರೂ ಅವು ಸಿಕ್ಕದ ಕಾರಣ ಅಶುದ್ಧರೆಂದು ಯಾಜಕಾ ಸೇವೆಯಿಂದ ಬಹಿಷ್ಕೃತರಾದರು. 65ಊರಿಮ್‌ತುಮ್ಮೀಮುಗಳ ಮೂಲಕ ದೈವನಿರ್ಣಯವನ್ನು ತಿಳಿಸಬಲ್ಲವನಾದ ಯಾಜಕನು ಬರುವ ತನಕ ಇವರು ಮಹಾಪರಿಶುದ್ಧ ಪದಾರ್ಥಗಳನ್ನು ಭೋಜನ ಮಾಡಬಾರದೆಂಬುದಾಗಿ ರಾಜ್ಯಪಾಲ ತೀರ್ಪು ಮಾಡಿದನು.

66 ಸರ್ವಸಮೂಹದವರ ಒಟ್ಟು ಸಂಖ್ಯೆ – ನಾಲ್ವತ್ತೆರಡು ಸಾವಿರದ ಮುನ್ನೂರರುವತ್ತು. 67ಈ ಸಂಖ್ಯೆಯಲ್ಲಿ ಎಣಿಕೆಯಾಗದ ಅವರ ದಾಸದಾಸಿಯರು ಏಳು ಸಾವಿರದ ಮುನ್ನೂರ ಮೂವತ್ತೇಳು ಮಂದಿ. ಅವರ ಗಾಯಕರೂ ಗಾಯಕಿಯರೂ ಇನ್ನೂರ ನಾಲ್ವತ್ತೈದು ಮಂದಿ. 68ಅವರಿಗೆ ಏಳುನೂರ ಮೂವತ್ತಾರು ಕುದುರೆಗಳೂ ಇನ್ನೂರ ನಾಲ್ವತ್ತೈದು ಹೇಸರಕತ್ತೆಗಳೂ 69ನಾನೂರ ಮೂವತ್ತೈದು ಒಂಟೆಗಳೂ ಆರು ಸಾವಿರದ ಏಳುನೂರಿಪ್ಪತ್ತು ಕತ್ತೆಗಳೂ ಇದ್ದವು.

70 ಗೋತ್ರಪ್ರಧಾನರಲ್ಲಿ ಕೆಲವರು ಕೆಲಸಕ್ಕೆ ಬೇಕಾದ ದ್ರವ್ಯಸಹಾಯ ನೀಡಿದರು. ತಿರ್ಷಾತಾ ಎನಿಸಿಕೊಳ್ಳುವ ರಾಜ್ಯಪಾಲ ಭಂಡಾರಕ್ಕೆ ಕೊಟ್ಟದ್ದು – ಎಂಟು ಕಿಲೋಗ್ರಾಂ ಬಂಗಾರ. ಐವತ್ತು ಬೋಗುಣಿಗಳು, ಐನೂರಮೂವತ್ತು ಯಾಜಕವಸ್ತ್ರಗಳು. 71ಬೇರೆ ಕೆಲವು ಮಂದಿ ಗೋತ್ರ ಪ್ರಧಾನರು

ಕಟ್ಟಡದ ಭಂಡಾರಕ್ಕೆ ಕೊಟ್ಟದ್ದು ನೂರ ಅರವತ್ತೆಂಟು ಕಿಲೋಗ್ರಾಂ ಬಂಗಾರ; ಸಾವಿರದ ಇನ್ನೂರ ಐವತ್ತು ಕಿಲೋಗ್ರಾಂ ಬೆಳ್ಳಿ 72ಉಳಿದ ಜನರು ಕೊಟ್ಟದ್ದು – ನೂರ ಅರವತ್ತೆಂಟು ಕಿಲೋಗ್ರಾಂ ಬಂಗಾರ; ನೂರ ನಲವತ್ತು ಕಿಲೋಗ್ರಾಂ ಬೆಳ್ಳಿ, ಅರವತ್ತೇಳು ಯಾಜಕವಸ್ತ್ರಗಳು.

73 ಯಾಜಕರು, ಲೇವಿಯರು, ದ್ವಾರಪಾಲಕರು, ಗಾಯಕರು, ಜನಸಾಮಾನ್ಯರು, ದೇವಸ್ಥಾನದ ಪರಿಚಾರಕರು ಅಂತೂ ಇಸ್ರಯೇಲರೆಲ್ಲರು ತಮ್ಮ ತಮ್ಮ ಪಟ್ಟಣಗಳಲ್ಲಿ ವಾಸಿಸುತ್ತಿದ್ದರು.

## ಎಜ್ರನಿಂದ ಧರ್ಮಶಾಸ್ತ್ರ ಪಾರಾಯಣ

**8** ತಮ್ಮ ತಮ್ಮ ಪಟ್ಟಣಗಳಲ್ಲಿ ವಾಸಿಸುತ್ತಿದ್ದ ಇಸ್ರಯೇಲ್ ಸರ್ವಸಮೂಹದವರು ಏಳನೆಯ ತಿಂಗಳಲ್ಲಿ ನೀರುಬಾಗಿಲಿನ ಮುಂದಿನ ಬಯಲಿನಲ್ಲಿ ಒಟ್ಟಿಗೆ ಸೇರಿದರು. ಸರ್ವೇಶ್ವರ ಸ್ವಾಮಿ ಮೋಶೆಯ ಮುಖಾಂತರ ಇಸ್ರಯೇಲರಿಗೆ ಕೊಟ್ಟ ಧರ್ಮಶಾಸ್ತ್ರದ ಗ್ರಂಥವನ್ನು ತೆಗೆದುಕೊಂಡು ಬರಬೇಕೆಂದು ಧರ್ಮೋಪದೇಶಕನಾದ ಎಜ್ರನನ್ನು ಕೇಳಿಕೊಂಡರು. 2ಯಾಜಕ ಎಜ್ರನು, ಗ್ರಹಿಸಿಕೊಳ್ಳಲು ಶಕ್ತರಾದ ಸ್ತ್ರೀ ಪುರುಷರು ನೆರೆದಿದ್ದ ಸಮೂಹದವರ ಮುಂದೆ, ಏಳನೆಯ ತಿಂಗಳಿನ ಪ್ರಥಮ ದಿನದಲ್ಲಿ, ಆ ಧರ್ಮಶಾಸ್ತ್ರವನ್ನು ತಂದು ಬೆಳಗಿನಿಂದ ಮಧ್ಯಾಹ್ನದವರೆಗೂ ಓದಿದನು. 3ಆ ನೀರು ಬಾಗಿಲಿನ ಮುಂದಣ ಬಯಲಿನಲ್ಲಿ ಕೂಡಿ ಬಂದಿದ್ದ ಸ್ತ್ರೀಪುರುಷರಲ್ಲಿ ಗ್ರಹಿಸಲು ಶಕ್ತರಾದವರೆಲ್ಲರೂ ಧರ್ಮಶಾಸ್ತ್ರ ಪಾರಾಯಣವನ್ನು ಆಲಿಸುತ್ತಿದ್ದರು.

4 ಧರ್ಮೋಪದೇಶಕ ಎಜ್ರನು ಪಾರಾಯಣಕ್ಕಾಗಿ ಮಾಡಲಾಗಿದ್ದ ಮರದ ಪೀಠದ ಮೇಲೆ ನಿಂತನು. ಅವನ ಬಲಗಡೆಯಲ್ಲಿ ಮತ್ತಿತ್ಯ, ಶೆಮ, ಅನಾಯ, ಊರೀಯ, ಹಿಲ್ಕೀಯ, ಮಾಸೇಯ ಎಂಬುವರು ಇದ್ದರು. ಎಡಗಡೆಯಲ್ಲಿ ಪೆದಾಯ, ಮೀಷಾಯೇಲ್, ಮಲ್ಕೀಯ, ಹಾಷುಮ್, ಹಷ್ಬದ್ದಾನ, ಜೆಕರ್ಯ, ಮೆಷುಲ್ಲಾಮ್ ಎಂಬುವರು ನಿಂತಿದ್ದರು. 5ಜನ ಸಮೂಹಕ್ಕಿಂತಲೂ ಎತ್ತರವಾದ ಸ್ಥಳದಲ್ಲಿ ನಿಂತಿದ್ದ ಎಜ್ರನು ಜನರ ಸಮಕ್ಷಮದಲ್ಲಿ ಗ್ರಂಥವನ್ನು ತೆರೆದ ಕೂಡಲೆ, ಎಲ್ಲರು ಎದ್ದುನಿಂತರು. 6ಎಜ್ರನು ಪರಾತ್ಪರ ದೇವರಾದ ಸರ್ವೇಶ್ವರನನ್ನು ಸ್ತುತಿಸಿದಾಗ ಸರ್ವಜನರೂ ತಮ್ಮ ಕೈಗಳನ್ನೆತ್ತಿ 'ಆಮೆನ್, ಆಮೆನ್' ಎಂದು ಹೇಳಿ ನೆಲದ ಮಟ್ಟಿಗೂ ತಲೆಬಾಗಿ ಸರ್ವೇಶ್ವರನನ್ನು ಆರಾಧಿಸಿದರು. 7ಆಮೇಲೆ ಯೇಷೂವ, ಬಾನೀ, ಶೇರೇಬ್ಯ, ಯಾಮೀನ್, ಅಕ್ಕೂಬ್, ಶಬ್ಬೆತೈ, ಹೋದೀಯ, ಮಾಸೇಯ, ಕೆಲೀಟ, ಅಜರ್ಯ, ಯೋಜಾಬಾದ್, ಹಾನಾನ್, ಪೆಲಾಯ ಎಂಬ ಲೇವಿಯರು ಧರ್ಮಶಾಸ್ತ್ರವನ್ನು ಜನರು ಗ್ರಹಿಸುವಂತೆ ಮಾಡಿದರು. 8ಜನರು ಎದ್ದುನಿಂತನಂತರ ಅವರು ದೇವರ ಧರ್ಮಶಾಸ್ತ್ರವನ್ನು ಸ್ಪಷ್ಟವಾಗಿ ಓದುತ್ತಾ ಅದರ ತಾತ್ಪರ್ಯವನ್ನು ವಿವರಿಸಿದರು. ಜನರು ಚೆನ್ನಾಗಿ ಗ್ರಹಿಸಿಕೊಂಡರು.

9 ಜನರೆಲ್ಲರು ಧರ್ಮೋಪದೇಶದ ವಾಕ್ಯಗಳನ್ನು ಕೇಳುತ್ತಾ ಕಣ್ಣೀರಿಡುತ್ತಿದ್ದರು. ರಾಜ್ಯಪಾಲ ನೆಹೆಮೀಯನು, ಧರ್ಮೋಪದೇಶ ಮಾಡುವ ಯಾಜಕ ಎಜ್ರನು ಹಾಗು ಜನರನ್ನು ಸಂಬೋಧಿಸುತ್ತಿದ್ದ ಲೇವಿಯರು ಜನರಿಗೆ, "ಈ ದಿನ ನಿಮ್ಮ ದೇವರಾದ ಸರ್ವೇಶ್ವರನಿಗೆ ಪರಿಶುದ್ಧ ದಿನ! ಆದುದರಿಂದ ನೀವು ದುಃಖಿಸುತ್ತಾ ಅಳುತ್ತಾ ಇರಬೇಡಿ," ಎಂದು ಹೇಳಿದರು. 10ಇದಲ್ಲದೆ, ಎಜ್ರನು ಅವರಿಗೆ, "ಹೋಗಿ ಮೃಷ್ಟಾನ್ನವನ್ನೂ ಮಧುರಪಾನವನ್ನೂ ತೆಗೆದುಕೊಳ್ಳಿ; ತಮಗಾಗಿ ಏನೂ ಸಿದ್ಧಮಾಡದವರಿಗೆ ಒಂದು ಪಾಲನ್ನು ಕಳುಹಿಸಿರಿ. ಈ ದಿನ ನಮ್ಮ ಸರ್ವೇಶ್ವರನಿಗೆ ಪ್ರತಿಷ್ಠಿತದಿನ! ವ್ಯಸನಪಡಬೇಡಿ; ಸರ್ವೇಶ್ವರನ ಆನಂದವೇ ನಿಮ್ಮ ಆಶ್ರಯವಾಗಿದೆ," ಎಂದನು. 11ಲೇವಿಯರು ಕೂಡ, "ಸುಮ್ಮನಿರಿ, ಇದು ದೇವರ ದಿವಸ; ದುಃಖಿಸಬೇಡಿ," ಎಂದು ಹೇಳಿ ಜನರನ್ನು ಸಂತೈಸಿದರು. 12ತಮಗೆ ತಿಳಿಯಪಡಿಸಿದ ಮಾತುಗಳನ್ನು ಜನರೆಲ್ಲರೂ ಗಮನಿಸಿ, ಹೋಗಿ ಅನ್ನಪಾನಗಳನ್ನು ತೆಗೆದುಕೊಂಡು ಏನೂ ಇಲ್ಲದವರಿಗೆ ಪಾಲುಗಳನ್ನು ಕಳುಹಿಸಿ, ಬಹಳವಾಗಿ ಸಂತೋಷಪಟ್ಟರು.

## ಪರ್ಣಕುಟೀರ ಹಬ್ಬ

13 ಮರುದಿನ ಎಲ್ಲ ಇಸ್ರಯೇಲ್ ಗೋತ್ರ ಪ್ರಧಾನರು, ಯಾಜಕರು ಹಾಗು ಲೇವಿಯರು ಧರ್ಮಶಾಸ್ತ್ರದ ಅಧ್ಯಯನಕ್ಕಾಗಿ ಧರ್ಮೋಪದೇಶಕನಾದ ಎಜ್ರನ ಬಳಿಗೆ ಕೂಡಿಬಂದರು. 14ಏಳನೆಯ

ತಿಂಗಳಿನ ಜಾತ್ರೆಯಲ್ಲಿ ಇಸ್ರಯೇಲರು ಪರ್ಣಕುಟೀರಗಳಲ್ಲಿ ವಾಸಿಸಬೇಕಾಗಿತ್ತು. 15ಈ ನಿಯಮದ ಪ್ರಕಾರ ಆ ಪರ್ಣಕುಟೀರ ನಿರ್ಮಾಣಕ್ಕಾಗಿ ಜನರು ಗುಡ್ಡಕ್ಕೆ ಹೋಗಿ, ಒಲೀವ, ಕಾಡು ಓಲೀವ್, ಸುಗಂಧ, ಖರ್ಜೂರ ಮುಂತಾದ ಮರಗಳ ದಟ್ಟವಾದ ಎಲೆಗಳುಳ್ಳ ಕೊಂಬೆಗಳನ್ನು ತರಬೇಕಾಗಿತ್ತು. 'ಇದಕ್ಕಾಗಿ ಅವರ ಎಲ್ಲ ಪಟ್ಟಣಗಳಲ್ಲಿಯು ಹಾಗು ಜೆರುಸಲೇಮಿನಲ್ಲಿಯು ಡಂಗುರದಿಂದ ಪ್ರಕಟಿಸಬೇಕು' ಎಂಬುದಾಗಿ ಬರೆದಿರುವ ಶಾಸನವೊಂದು ಮೋಶೆಗೆ ಸರ್ವೇಶ್ವರನಿಂದ ದೊರಕಿದ ಧರ್ಮಶಾಸ್ತ್ರದಲ್ಲಿ ಸಿಕ್ಕಿತು.

16 ಈ ಆಜ್ಞಾನುಸಾರ ಜನರು ಹೋಗಿ ಕೊಂಬೆಗಳನ್ನು ತೆಗೆದುಕೊಂಡು ಬಂದು, ತಮ್ಮ ತಮ್ಮ
ಅಂಗಳಮಾಳಿಗೆಗಳಲ್ಲಿಯೂ, ದೇವಾಲಯದ ಪ್ರಾಕಾರಗಳಲ್ಲಿಯೂ, ನೀರು ಬಾಗಿಲು, ಹಾಗು ಎಫ್ರಯಿಮ್
ಬಾಗಿಲು ಇವುಗಳ ಮುಂದಣ ಬಯಲುಗಳಲ್ಲಿಯೂ ಪರ್ಣಕುಟೀರಗಳನ್ನು ಮಾಡಿಕೊಂಡರು. 17ನೂನನ
ಮಗ ಯೆಹೋಶುವನ ಕಾಲದಿಂದ ಆವರೆಗೂ ಇಸ್ರಯೇಲರು ಹೀಗೆ ಮಾಡಿರಲಿಲ್ಲ. ಸೆರೆಯಿಂದ
ಹಿಂತಿರುಗಿಬಂದ ಸರ್ವಸಮಾಜದವರು ಪರ್ಣಕುಟೀರಗಳನ್ನು ಮಾಡಿಕೊಂಡು, ಅವುಗಳಲ್ಲಿ ವಾಸಿಸುತ್ತಾ,
ಬಹು ಸಂತೋಷಪಟ್ಟರು. 18ಎಜ್ರನು, ಮೊದಲನೆಯ ದಿನದಿಂದ ಕಡೆಯ ದಿನದವರೆಗೂ ಪ್ರತಿದಿನವೂ
ದೇವರ ಧರ್ಮಶಾಸ್ತ್ರವನ್ನು ಜನರಿಗೆ ಪಾರಾಯಣ ಮಾಡುತ್ತಿದ್ದನು. ಏಳುದಿನಗಳವರೆಗೂ ಜಾತ್ರೆ ನಡೆಯಿತು. ನೇಮದ ಪ್ರಕಾರ ಎಂಟನೆಯ ದಿನ ಮುಕ್ತಾಯ ಸಮಾರಂಭಕ್ಕಾಗಿ ಸಭೆಕೂಡಿದರು.

### ಪಾಪ ನಿವೇದನೆ

**9** ಅದೇ ತಿಂಗಳಿನ ಇಪ್ಪತ್ತನಾಲ್ಕನೆಯ ದಿನ, ಇಸ್ರಯೇಲರು ಉಪವಾಸವಾಗಿದ್ದು ಗೋಣೀ ತಟ್ಟನ್ನು
ಕಟ್ಟಿಕೊಂಡು, ತಲೆಯ ಮೇಲೆ ಮಣ್ಣುಸುರಿದುಕೊಂಡು, ನೆರೆದುಬಂದರು. 2ಇಸ್ರಯೇಲ್ ಸಂತಾನದವರು,
ಎಲ್ಲ ಅನ್ಯಕುಲದವರಿಂದ ತಮ್ಮನ್ನು ಬೇರ್ಪಡಿಸಿಕೊಂಡು ನಿಂತು, ತಮ್ಮ ಪಾಪಗಳನ್ನೂ ತಮ್ಮ ಪಿತೃಗಳ
ಪಾಪಗಳನ್ನೂ ಅರಿಕೆಮಾಡಿದರು. 3ಅವರು ಮೂರು ತಾಸುಗಳವರೆಗೂ ತಮ್ಮ ತಮ್ಮ ಸ್ಥಳದಲ್ಲೇ ನಿಂತು,
ತಮ್ಮ ದೇವರಾದ ಸರ್ವೇಶ್ವರನ ಧರ್ಮಶಾಸ್ತ್ರ ಗ್ರಂಥವನ್ನು ಪಾರಾಯಣ ಮಾಡಿಸಿದರು. ತರುವಾಯ ಇನ್ನೂ
ಮೂರು ತಾಸು ತಮ್ಮ ದೇವರಾದ ಸರ್ವೇಶ್ವರನಿಗೆ ಅಡ್ಡಬಿದ್ದು ಪಾಪಗಳನ್ನು ಅರಿಕೆಮಾಡಿದರು.
4ಯೇಷೂವ, ಬಾನೀ, ಕದ್ಮೀಯೇಲ್, ಶೆಬನ್ಯ, ಬುನ್ನೀ, ಶೇರೇಬ್ಯ, ಬಾನೀ, ಕೆನಾನೀ ಎಂಬವರು ಲೇವಿಯರ
ಮೆಟ್ಟಲುಗಳ ಮೇಲೆ ನಿಂತು, ಸ್ವರವೆತ್ತಿ ತಮ್ಮ ದೇವರಾದ ಸರ್ವೇಶ್ವರನಿಗೆ ಮೊರೆಯಿಟ್ಟರು.

5 ಆಮೇಲೆ ಲೇವಿಯರಾದ ಯೇಷೂವ, ಕದ್ಮೀಯೇಲ್, ಬಾನೀ, ಹಷಬ್ನೆಯ, ಶೇರೇಬ್ಯ,
ಹೋದೀಯ, ಶೆಬನ್ಯ, ಪೆತಹ್ಯ ಎಂಬವರು, "ಏಳಿ, ನಮ್ಮ ದೇವರಾದ ಸರ್ವೇಶ್ವರನಿಗೆ ಯುಗ ಯುಗಕ್ಕೂ
ಸ್ತುತಿಸ್ತೋತ್ರ ಎನ್ನಿ," ಎಂದು ಹೇಳಿ ಹೀಗೆ ಪ್ರಾರ್ಥಿಸಿದರು:

"ಸರ್ವೇಶ್ವರಾ, ಸ್ತುತಿಸ್ತೋತ್ರ ನಿಮ್ಮ ಮಹಿಮಾ
    ಮಯ ನಾಮಕೆ
ಮಿಗಿಲಾದುದು ಆ ಶ್ರೀ ನಾಮ ಸರ್ವಸ್ತುತಿ
    ಕೀರ್ತನೆಗೆ.
6 ಹೇ ಸರ್ವೇಶ್ವರಾ, ನೀವೊಬ್ಬರೇ ದೇವರು;
  ಉನ್ನತೋನ್ನತ ಆಕಾಶವನು,
    ಅದರ ಪರಿವಾರಗಳನು
  ಬುವಿಯನು, ಕಡಲನು,
    ಅದರ ಸರ್ವಜಲಚರಗಳನು
  ಸೃಷ್ಟಿಸಿದಾತ ನೀವು;
    ಸಮಸ್ತ ಪ್ರಾಣಿಗಳಿಗು
    ಜೀವಾಧಾರ ನೀವು;
  ಆರಾಧಿಸುತ್ತವೆ ನಿಮ್ಮನು ಆಕಾಶದ

ಪರಿವಾರಗಳು.
7 ಸರ್ವೇಶ್ವರಾ, ಅಬ್ರಾಮನನು ನೀವು
ಆರಿಸಿಕೊಂಡಿರಿ
ಬಾಬಿಲೋನಿನ 'ಊರ್'
ನಗರದಿಂದ ಆತನನು ಬರಮಾಡಿದಿರಿ
ದೇವರಾದ ನೀವೇ ಆತನಿಗೆ 'ಅಬ್ರಹಾಮ'
ಎಂದು ಹೆಸರಿಟ್ಟಿರಿ.
8 ಆತ ಪ್ರಾಮಾಣಿಕ ವ್ಯಕ್ತಿಯೆಂದು ಗುರುತಿಸಿದಿರಿ
ಕಾನಾನ್ಯರ, ಹಿತ್ತಿಯರ, ಅಮೋರಿಯರ,
ಪೆರಿಜ್ಜೀಯರ, ಯೆಬೂಸಿರ, ಗಿರ್ಗಾಷಿಯರ
ನಾಡನು ಆತನ ಸಂತಾನದವರಿಗೆ ವಾಗ್ದಾನ
ಮಾಡಿದಿರಿ.
ಅಂತೆಯೇ ಸತ್ವ ಸ್ವರೂಪರಾದ ನೀವು ಅದನು
ಈಡೇರಿಸಿದಿರಿ.
9 ನೋಡಿದಿರಿ ಈಜಿಪ್ಟಿನಲಿ ನಮ್ಮ ಪಿತೃಗಳು
ಪಟ್ಟ ಕಷ್ಟವನು
ಆಲಿಸಿದಿರಿ ಕೆಂಪುಸಮುದ್ರದ ಬಳಿ ಅವರಿಟ್ಟ
ಮೊರೆಯನು.
10 ಈಜಿಪ್ಟಿನವರು ಅವರನು ದರ್ಪದಿಂದ
ದಮನಮಾಡುವಲ್ಲಿ
ಎಸಗಿದಿರಿ ಅದ್ಭುತಕಾರ್ಯಗಳನು ಸೂಚಕ
ಕಾರ್ಯಗಳನು ಫರೋಹನಲಿ,
ಅವನ ಸೇವಕರಲಿ, ಆ ನಾಡಿನ ಜನರಲಿ.
ಉಳಿಸಿಕೊಂಡಿರಿ ಇಂದಿಗೂ
ಅಂದು ಸಾಧಿಸಿದ ಕೀರ್ತಿಯನು
11 ಕಡಲನು ಸೀಳಿ, ಆ ಪಿತೃಗಳ ನಡೆಸಿದಿರಿ
ಒಣನೆಲದಲೋ ಎಂಬಂತೆ
ಅವರ ಬೆನ್ನಟ್ಟಿ ಬಂದವರನು ಜಲರಾಶಿಯ
ತಳಮುಟ್ಟಿಸಿದಿರಿ ಕಲ್ಲಂತೆ.
12 ಹಗಲಲಿ ಅವರ ಮುಂದೆ ಸಾಗಿದಿರಿ
ಮೇಘಸ್ತಂಭದಂತೆ
ಇರುಳಲ್ಲಿ ದಾರಿತೋರಿದಿರಿ ಬೆಳಕನೀವ
ಅಗ್ನಿಸ್ತಂಭದಂತೆ.
13 ಸೀನಾಯಿ ಬೆಟ್ಟದ ಮೇಲೆ ಇಳಿದು ಬಂದು
ಆಕಾಶ ಕಡೆಯಿಂದ ಅವರೊಡನೆ
ಮಾತಾಡಬಂದು
ಅವರಿಗನುಗ್ರಹಿಸಿದಿರಿ ನೀತಿನಿಯಮಗಳನು
ಸತ್ಯಧರ್ಮೋಪದೇಶವನು,
ಶ್ರೇಷ್ಠ ಆಜ್ಞಾವಿಧಿಗಳನು.
14 ಕಲಿಸಿದಿರಿ ಅವರಿಗೆ ಆಜ್ಞಾವಿಧಿ ಧರ್ಮಗಳನು

ಪ್ರಕಟಿಸಿದಿರಿ ನಿಮಗೆ ಮೀಸಲಾದ
ವಿಶ್ರಾಂತಿದಿನವನು;
ನಿಮ್ಮ ದಾಸ ಮೋಶೆಯ ಮುಖಾಂತರ
ಸಾಧಿಸಿದಿರಿದನು.
15 ಹಸಿದಿದ್ದಾಗ ಅವರಿಗಿತ್ತಿರಿ ಊಣವನು
ಆಗಸದಿಂದ
ಬಾಯಾರಿದ್ದಾಗ ನೀರ ಬರಮಾಡಿದಿರಿ
ಬಂಡೆಯೊಳಗಿಂದ
ವಾಗ್ದತ್ತ ನಾಡಸೇರಿ ಸ್ವಾಧೀನಪಡಿಸಿಕೊಂಡರು
ನಿಮ್ಮಾಜ್ಞೆಯಿಂದ.
16 ಇಷ್ಟಾದರೂ ಗರ್ವಿಗಳಾದರು, ನಮ್ಮೀ
ಪಿತೃಗಳು ಹಟಹಿಡಿದು
ಅವಿಧೇಯರಾದರು ಉಲ್ಲಂಘಿಸಿ
ನಿಮ್ಮಾಜ್ಞಾವಿಧಿಗಳನು.
17 ಮರೆತುಬಿಟ್ಟರು ನೀವೆಸಗಿದ ಮಹಾತ್ಕಾರ್ಯಗಳನು
ಹಟಹಿಡಿದರು ತಮಗೊಬ್ಬ ನಾಯಕನ
ನೇಮಿಸಿಕೊಳ್ಳಲು;
ಈಜಿಪ್ಟಿಗೆ ತೆರಳಲಿದ್ದರು ಮರಳಿ
ಗುಲಾಮರಾಗಲು.
ನೀವಾದರೋ ಪಾಪಿಗಳನು ಕ್ಷಮಿಸುವವರು
ದಯಾಪೂರಿತರು, ದೀರ್ಘಶಾಂತರು, ಕೃಪಾಳು
ದೇವರು,
ಅವರನು ಕೈಬಿಡದೆ ಕಾಪಾಡಿ ನಡೆಸಿದವರು.
18 ಅವರಾದರೋ ಎರಕದ ಹೋರಿಕರುವನು
ಮಾಡಿಕೊಂಡರು
ತಮ್ಮನು ಈಜಿಪ್ಟಿನಿಂದ ಕ್ಕರೆತಂದುದು ಅದೇ
ಎಂದುಕೊಂಡರು.
ಈ ಪರಿಯ ವರ್ತನೆಯಿಂದ ನಿಮ್ಮನ್ನೇ
ಅಸಡ್ಡೆಮಾಡಿಬಿಟ್ಟರು.
19 ಹೀಗಿದ್ದರು ನೀವಾದಿರಿ ಅವರಿಗೆ ಕರುಣಾನಿಧಿ
ತೊರೆದುಬಿಡಲಿಲ್ಲ ನೀವವರನು
ಮರುಭೂಮಿಯಲಿ.
ಬಿಟ್ಟುಹೋಗಲಿಲ್ಲ ದಾರಿತೋರಿದಾ ಮೇಘ
ಸ್ತಂಭ ಹಗಲಲಿ
ಮುನ್ನಡೆಯಿತು ಬೆಳಕನೀಯುತಾ ಅಗ್ನಿಸ್ತಂಭ
ಇರುಳಲಿ.
20 ಅವರಿಗಿತ್ತಿರಿ ಉಪದೇಶಿಸಲು ಸತ್ಯಾತ್ಮವನು
ಅವರ ಬಾಯಿಂದ ಹಿಂದೆಗೆಯಲಿಲ್ಲ ಮನ್ನವನು
ಬಾಯಾರಿದ್ದಾಗ ಕುಡಿಯಲಿತ್ತಿರಿ ಅವರಿಗೆ
ನೀರನು.

21 ಈ ಪರಿ ಸಲಹಿದಿರಿ ಮರುಭೂಮಿಯಲಿ
ನಾಲ್ವತ್ತು ವರ್ಷ
ಅಲ್ಲವರಿಗಿರಲಿಲ್ಲ ಯಾವುದೊಂದು ಸಂಕಷ್ಟ.
ಊದಿಹೋಗಲಿಲ್ಲ ಕಾಲು, ಹರಿದುಹೋಗಲಿಲ್ಲ
ಅವರ ವಸ್ತ್ರ.
22 ರಾಜ್ಯಗಳನು, ಜನಾಂಗಗಳನು, ವಶಪಡಿಸಿದಿರಿ
ಅವರಿಗೆ
ಹಂಚಿಕೊಟ್ಟಿರಿ ಆ ರಾಷ್ಟಗಳ ಸೊತ್ತುಗಳನೆ
ಹೆಷ್ಬೋನಿನ ಅರಸ ಸೀಹೋನನಿಗೆ, ಬಾಷಾನಿನ
ಅರಸ ಓಗನಿಗೆ,
ಸೇರಿದ ಪ್ರಾಂತ್ಯಗಳಿಗೆ
ಸ್ವಾಧೀನಪಡಿಸಿಕೊಂಡರಲ್ಲವೆ?
23 ಹೆಚ್ಚಿಸಿದಿರಿ ಅವರ ಮಕ್ಕಳನು ಆಗಸದ
ನಕ್ಷತ್ರಗಳಷ್ಟೆ;
ಬರಮಾಡಿದಿರಿ ಆ ಮಕ್ಕಳನು ವಾಗ್ದತ್ತ ನಾಡಿಗೆ
'ಅದ ಸೇರಿ, ವಶಮಾಡಿಕೊಳ್ಳಿ' ಎಂದು
ಹೇಳಿದಿರಾ ಪಿತೃಗಳಿಗೆ.
24 ಅಂತೆಯೇ ಸೇರಿ ಸ್ವಾಧೀನಮಾಡಿಕೊಂಡರು ಆ
ನಾಡನು
ಅವರಿಗಧೀನಪಡಿಸಿದಿರಿ ಅದರ ರಾಜರನು,
ಪ್ರಜೆಗಳನು, ನಿವಾಸಿಗಳನು, ಆ ಕಾನಾನ್ಯರನು,
ತಮಗಿಷ್ಟಾನುಸಾರ ನಡೆಸಲು.
25 ವಶಮಾಡಿಕೊಂಡರು ಕೋಟೆಕೊತ್ತಲುಗಳುಳ್ಳ
ಪಟ್ಟಣಗಳನು
ಸಾರವತ್ತಾದ ಹೊಲಗಳನು, ಧಾನ್ಯ ತುಂಬಿದ
ಮನೆಗಳನು, ತೋಡಿದ ಬಾವಿಗಳನು
ದ್ರಾಕ್ಷೀತೋಟಗಳನು, ಎಣ್ಣೇಮರ
ತೋಪುಗಳನು, ನಾನಾಫಲವೃಕ್ಷಗಳನು.
ತಿಂದುತೃಪ್ತರಾದರು, ಕೊಬ್ಬಿದರು, ನೀವಿತ್ತ
ಸಮೃದ್ಧಿಯಲಿ ನಲಿದಾಡಿದರು.
26 ಬಳಿಕ ಅವಿಧೇಯರಾದರು, ನಿಮಗೆ ವಿರುದ್ಧ
ದಂಗೆ ಎದ್ದರು;
ನಿಮ್ಮ ಉಪದೇಶವನು ಉಲ್ಲಂಘಿಸಿದರು, ನಿಮ್ಮ
ಪ್ರವಾದಿಗಳನು ಕೊಂದರು;
ಹೌದು, ನಿಮಗೆ ಅಭಿಮುಖರಾಗಲು
ಎಚ್ಚರಿಸಿದವರನೆ ಕೊಂದರು.
ಕಡೆಗೆ ನಿಮ್ಮನ್ನೇ ಅಸಡ್ಡೆಮಾಡಿ, ಘೋರ
ಅಪರಾಧಿಗಳಾದರು.
27 ಎಂದೇ ನೀವಿತ್ತಿರಿ ಅವರನು ಕ್ರೂರ ಶತ್ರುಗಳ
ವಶಕೆ

ಆದರೆ ಸಂಕಟದಲಿ ಮೊರೆಯಿಡಲು, ಪರದಿಂದ
ಕಿವಿಗೊಟ್ಟಿರವರಿಗೆ !
ರಕ್ಷಕರನು ಕಳುಹಿಸಿದಿರಿ ಕರುಣಾತಿಶಯದಿಂದ
ಈ ಪರಿ ಬಿಡಿಸಿದಿರಿ ವಿರೋಧಿಗಳ ಕೈಯಿಂದ.
28 ಶಾಂತಿ ಸವಿದದ್ದೇ ದ್ರೋಹಿಗಳಾಗಿ ನಡೆದರು
ಮತ್ತೆ ನೀವಿತ್ತಿರವರನು ದೊರೆತನ ನಡೆಸುವ
ವೈರಿಗಳ ಕೈಗೆ.
ಪಶ್ಚಾತ್ತಾಪಪಟ್ಟು ಕೂಗಿಕೊಳ್ಳಲು, ಆಲಿಸಿದಿರಿ
ಪರದಿಂದ
ರಕ್ಷಿಸಿದಿರಿ ಪದೇ ಪದೇ ಅಪರಿಮಿತ
ಕರುಣೆಯಿಂದ
29 'ಧರ್ಮೋಪದೇಶಕೆ ಮರಳಿ ಮನವೊಲಿದು ಬನ್ನಿ'
ಎಂದು ನೀವೆಷ್ಟೋ ಸಾರಿ ಅವರನ್ನೆಚ್ಚರಿಸಿದಿರಿ
ಖಚಿತವಾಗಿ
ಆದರೂ ಆಲಿಸಲಿಲ್ಲಾ ಗರ್ವಿಗಳು,
ಅವಿಧೇಯರು, ಪಾಪಿಗಳು.
ಜೀವಾಧಾರವಾದ ನಿಮ್ಮಾ ವಿಧಿನಿಯಮಗಳನು
ಮೀರಿದರು
ಮೊಂಡುಬಿದ್ದು ನಿಮ್ಮ ನೊಗಕೆ ಕೊರಳೊಡ್ಡದೆ
ಹೋದರು.
30 ತಾಳಿಕೊಂಡಿರಿ ಅವರನು ನೀವೆಷ್ಟೋ
ವರ್ಷಗಳ ತನಕ
ಎಚ್ಚರಿಸಿದಿರಿ ನಿಮ್ಮಾತ್ಮ ಪ್ರೇರಣೆಯಿಂದ,
ಪ್ರವಾದಿಗಳ ಮೂಲಕ
ಕಿವಿಗೊಡದಾ ಜನರನು ಹೊರದೂಡಿದಿರಿ
ಅನ್ಯದೇಶದ ಪರಿಯಂತ.
31 ಆದರೆ, ನೀವು ದಯಾಪೂರಿತರು, ಕರುಣಾಮಯ
ದೇವರು !
ನಿಮ್ಮ ಮಹಾಕೃಪಾನುಸಾರ, ಕೈಬಿಡಲಿಲ್ಲ,
ನಾಶಮಾಡಲಿಲ್ಲ ಅವರನು.
32 ಓ ನಮ್ಮ ದೇವರೇ, ನೀವು ಮಹೋನ್ನತರು,
ಶಕ್ತಿಸಾಮರ್ಥ್ಯರು,
ಭಯಭಕ್ತಿಗೆ ಪಾತ್ರರು, ಕೃಪಾವಾಗ್ದಾನಗಳ
ನೆರವೇರಿಸುವವರು.
ಅಲ್ಪವೆಂದೆಣಿಸಬೇಡಿ – ನಮ್ಮ ರಾಜರು,
ರಾಜ್ಯಪಾಲರು.
ಯಾಜಕರು, ಪ್ರವಾದಿಗಳು, ಹಿರಿಯರು,
ಪ್ರಜೆಗಳು
ಸಹಿಸಬೇಕಾಗಿ ಬಂದಿರುವ
ಈ ಕಷ್ಟಕಾರ್ಪಣ್ಯಗಳನು.

33 ನಮ್ಮ ಮೇಲೆ ನೀವೆಷ್ಟೇ ಕೇಡನು
ಬರಮಾಡಿದರೂ
ನೀವು ನ್ಯಾಯವಂತರು, ಸತ್ಯಸ್ವರೂಪಿ,
ನಾವೋ ದುಷ್ಟರು!
34 ನಮ್ಮ ಅರಸರು, ರಾಜ್ಯಪಾಲರು, ಯಾಜಕರು,
ಹಿರಿಯರು
ಅನುಸರಿಸಲಿಲ್ಲ ನಿಮ್ಮಾಜ್ಞೆಯನು,
ಧರ್ಮೋಪದೇಶವನು.
ಲಕ್ಷಿಸಲಿಲ್ಲ ನೀವಿತ್ತ ಎಚ್ಚರಿಕೆಯ ಮಾತುಗಳನು.
35 ಅವರಿದ್ದರು ನೀವೇ ಅನುಗ್ರಹಿಸಿದ ಸ್ವರಾಜ್ಯದಲಿ
ನಲಿದಾಡಿದರು ನೀವು ಕರುಣಿಸಿದ ಸಮೃದ್ಧಿಯಲಿ
ವಾಸಿಸಿದರು ಸಾರವತ್ತಾದ ಸವಿಸ್ತಾರನಾಡಿನಲಿ.
ಆದರೂ ಮಾಡಲಿಲ್ಲ ನಿಮ್ಮ ಸೇವೆ,
ಬಿಡಲಿಲ್ಲ ತಮ್ಮ ದುರ್ನಡತೆ
ನಮಗೊದಗಿರುವ ಗುಲಾಮಗಿರಿ,
ಇದರ ಪರಿಣಾಮವಲ್ಲವೆ?
36 ನಮ್ಮ ಪಿತೃಗಳಿಗೆ ನೀವೆಂದಿರಿ 'ಸವಿಯಿರಿ ನಾಡಿನ
ಫಲವನು, ಸಮೃದ್ಧಿಯನು'.
ಆದರಿದೋ ಅನುಭವಿಸುತ್ತಿರುವೆವು ಈ ನಾಡಿನಲಿ
ಗುಲಾಮಗಿರಿಯನು!
37 ನಮ್ಮ ಪಾಪದ ನಿಮಿತ್ತ ಅಧೀನರಾಗಿಸಿದಿರಿ
ಅನ್ಯರಾಜರಿಗೆ
ಈ ನಾಡಿನ ಸಿರಿಸಂಪತ್ತು ಹರಿದುಹೋಗುತ್ತಿದೆ
ಆ ಅರಸರಿಗೆ
ನಮ್ಮೊಡಲು, ದನಕರುಗಳು, ಈಡಾಗಿವೆ
ಅವರ ದಬ್ಬಾಳಿಕೆಗೆ
ಅಕಟಕಟ, ನಾವು ಸಿಕ್ಕಿಕೊಂಡಿದ್ದೇವೆ,
ಮಹಾಸಂಕಟಕೆ!"

### ಮತಾಸಕ್ತರ ಪ್ರತಿಜ್ಞೆ

38 ಈ ಎಲ್ಲ ಕಾರಣಗಳಿಂದ ನಾವು ಲೇಖನ ರೂಪವಾದ ಪ್ರತಿಜ್ಞೆಯನ್ನು ಮಾಡಿದೆವು. ಅದಕ್ಕೆ ನಮ್ಮ ಮುಖಂಡರು, ಲೇವಿಯರು ಹಾಗು ಯಾಜಕರು ಸಹಿಮಾಡಿ, ಮುದ್ರೆ ಹಾಕಿದರು.

**10** ಸಹಿಮಾಡಿದವರು ಇವರು: ಹಕಲ್ಯನ ಮಗ ನೆಹೆಮೀಯನೆಂಬ ದೇಶಾಧಿಪತಿ;

### ಯಾಜಕರು

2 ಚಿದ್ಕೀಯ, ಸೆರಾಯ, ಅಜರ್ಯ, ಯೆರೆಮೀಯ, 3ಪಷ್ಹೂರ್, ಅಮರ್ಯ, ಮಲ್ಕೀಯ, 4–5ಹಟ್ಟೂಷ್, ಶೆಬನ್ಯ, ಮಲ್ಲೂಕ್, ಹಾರಿಮ್, ಮೆರೇಮೋತ್, 6ಓಬದ್ಯ, ದಾನೀಯೇಲ್, ಗಿನ್ನೆತೋನ್, 7ಬಾರೂಕ್, ಮೆಷುಲ್ಲಾಮ್, ಅಬೀಯ, ಮಿಯ್ಯಾಮೀನ್, 8ಮಾಜ್ಯ, ಬಿಲ್ಗೈ, ಶೆಮಾಯ ಎಂಬ ಯಾಜಕರು;

## ಲೇವಿಯರು

9 ಲೇವಿಯರಲ್ಲಿ ಅಜನ್ಯನ ಮಗ ಯೇಷೂವ, ಹೇನಾದಾದ್ ವಂಶದವನಾದ ಬೆನ್ನೂಯ್, ಕದ್ಮೀಯೇಲ್ ಎಂಬವರು; 10ಇವರ ಬಂಧುಗಳಾದ ಶೆಬನ್ಯ, 11ಹೋದೀಯ, ಕೆಲೀಟ, ಪೆಲಾಯ, ಹಾನಾನ್, ಮೀಕ, 12ರೆಹೋಬ್, ಹಷಬ್ಯ ಜಕ್ಕೂರ್, ಶೇರೇಬ್ಯ, ಶೆಬನ್ಯ, 13ಹೋದೀಯ, ಬಾನೀ, ಬೇನೀನೂ ಎಂಬವರು.

## ಜನಪ್ರಧಾನರು

14 ಜನಪ್ರಧಾನರಲ್ಲಿ ಪರೋಷ್, ಪಹತ್ ಮೋವಾಬ್, 15ಏಲಾಮ್, ಜತ್ತೂ, ಬಾನೀ, ಬುನ್ನೀ, ಅಜ್ಗಾದ್, 16–17ಬೇಬೈ, ಅದೋನೀಯ, ಬಿಗ್ವೈ, ಆದೀನ್, ಆಟೇರ್, 18ಹಿಜ್ಕೀಯ, ಅಜ್ಜೂರ್, ಹೋದೀಯ, ಹಾಷುಮ್, 19–20ಬೇಚೈ, ಹಾರೀಫ್, ಅನಾತೋತ್, ನೇಬೈ, ಮಗ್ಪೀಯಾಷ್, 21ಮೆಷುಲ್ಲಾಮ್, ಹೇಜೀರ್, ಮೆಷೇಜಬೇಲ್, 22ಚಾದೋಕ್, ಯದ್ದೂವ, ಪೆಲಟ್ಯ, ಹಾನಾನ್, ಆನಾಯ, ಹೋಷೇಯ, 23ಹನನ್ಯ, ಹಷ್ಷೂಬ್, 24–25ಹಲೋಹೇಷ್, ಪಿಲ್ಹ, ಶೋಬೇಕ್, ರೆಹೂಮ್, 26ಹಷಬ್ನ, ಮಾಸೇಯ, ಅಹೀಯ, 27ಹಾನಾನ್, ಆನಾನ್, ಮಲ್ಲೂಕ್, ಹಾರೀಮ್, ಬಾನ ಎಂಬವರು.

## ಒಪ್ಪಂದ

28 ಯಾಜಕರು, ಲೇವಿಯರು, ದ್ವಾರಪಾಲಕರು, ಗಾಯಕರು, ದೇವಸ್ಥಾನ ಪರಿಚಾರಕರು, ಉಳಿದ ಜನರು, ಇವರಲ್ಲಿ ದೇವರ ಧರ್ಮೋಪದೇಶದ ನಿಮಿತ್ತ ಅನ್ಯದೇಶದವರ ಗೊಡವೆಯನ್ನು ತೊರೆದುಬಿಟ್ಟವರು, ತಮ್ಮ ತಮ್ಮ ಹೆಂಡತಿಯರು, ಗ್ರಹಿಸಲು ಶಕ್ತರಾದ ಗಂಡು ಹೆಣ್ಣು ಮಕ್ಕಳು ಇವರೊಡನೆ ಬಂದು, 29ಮುಖಂಡರಾದ ತಮ್ಮ ಸಹೋದರರನ್ನು ಸೇರಿಕೊಂಡು, ದೇವರ ದಾಸ ಮೋಶೆಯ ಮುಖಾಂತರ ಕೊಡಲಾದ ದೇವರ ಧರ್ಮೋಪದೇಶವನ್ನು ತಾವು ಅನುಸರಿಸಿ, ತಮ್ಮ ಸರ್ವೇಶ್ವರನಾದ ದೇವರ ಎಲ್ಲ ಆಜ್ಞಾನಿಯಮ ವಿಧಿಗಳನ್ನು ಕೈಗೊಂಡು ನಡೆಯುವುದಾಗಿ, ಆಣೆ ಇಟ್ಟು ಹೀಗೆ ಪ್ರಮಾಣ ಮಾಡಿದರು:

30 'ದೇಶನಿವಾಸಿಗಳಿಗೆ ನಮ್ಮ ಹೆಣ್ಣುಗಳನ್ನು ಕೊಡುವುದಿಲ್ಲ; ನಮ್ಮ ಮಕ್ಕಳಿಗೆ ಅವರಿಂದ ಹೆಣ್ಣು ತೆಗೆದುಕೊಳ್ಳುವುದಿಲ್ಲ;

31 ದೇಶನಿವಾಸಿಗಳು ಮಾರುವುದಕ್ಕೆ ತರುವ ಯಾವ ಸರಕುಗಳನ್ನೂ ಧಾನ್ಯವನ್ನೂ ಸಬ್ಬತ್ ಮೊದಲಾದ ಪರಿಶುದ್ಧ ದಿನಗಳಲ್ಲಿ ಕೊಂಡುಕೊಳ್ಳುವುದಿಲ್ಲ;

ಪ್ರತಿಯೊಂದು ಏಳನೆಯ ವರ್ಷ ಭೂಮಿಯ ಸಾಗುವಳಿಯನ್ನೂ, ಇತರರು ಕೊಡಬೇಕಾದ ಸಾಲವನ್ನೂ ಬಿಟ್ಟುಬಿಡುತ್ತೇವೆ;

32 ವರ್ಷಕ್ಕೆ ಐದು ಗ್ರಾಂ ಬೆಳ್ಳಿಯನ್ನು ದೇವಾಲಯ ಸೇವೆಗಾಗಿ ಕೊಡಬೇಕೆಂಬ ಕರ್ತವ್ಯವನ್ನು ವಹಿಸಿಕೊಳ್ಳುತ್ತೇವೆ; 33ಈ ನಾಣ್ಯ, ದೇವರ ಸನ್ನಿಧಿಯಲ್ಲಿಡತಕ್ಕ ರೊಟ್ಟಿ, ನಿತ್ಯ ಧಾನ್ಯ, ನೈವೇದ್ಯ ಇವುಗಳಿಗಾಗಿ; ಹಾಗು ನಿತ್ಯ ದಹನಬಲಿ ಮತ್ತು ಸಬ್ಬತ್‌ದಿನ, ಅಮಾವಾಸ್ಯೆ, ಜಾತ್ರೆ ಇವುಗಳಲ್ಲಿ ಮಾಡತಕ್ಕ ದಹನಬಲಿ, ಶಾಂತಿ ಸಮಾಧಾನಬಲಿ, ಇಸ್ರಯೇಲರ ದೋಷಪರಿ ಹಾರಾರ್ಥವಾದ ಬಲಿ, ಇವುಗಳಿಗಾಗಿ ಹಾಗು ನಮ್ಮ ದೇವಾಲಯ ಸಂಬಂಧವಾದ ಬೇರೆ ಎಲ್ಲ ಕೆಲಸ ಕಾರ್ಯಗಳಿಗಾಗಿ ವೆಚ್ಚವಾಗಬೇಕು;

34 ಧರ್ಮಶಾಸ್ತ್ರವಿಧಿಗನುಸಾರ, ನಮ್ಮ ದೇವರಾದ ಸರ್ವೇಶ್ವರನ ಬಲಿಪೀಠದ ಮೇಲೆ ಬೆಂಕಿಯುರಿಸುವುದಕ್ಕಾಗಿ ವರ್ಷವರ್ಷವೂ ನೇಮಿತವಾದ ಕಾಲಗಳಲ್ಲಿ, ನಮ್ಮ ದೇವಾಲಯಕ್ಕೆ ಸೌದೆ ದೊರಕುವ ಹಾಗೆ ಆಯಾ ಗೋತ್ರಾನುಸಾರ ಕಟ್ಟಿಗೆ ದಾನಮಾಡತಕ್ಕವರು ಇಂತಿಂಥವರು ಎಂಬುದನ್ನು ಯಾಜಕರೂ ಲೇವಿಯರೂ ಜನಸಾಮಾನ್ಯರೂ ಸೇರಿ, ನಮ್ಮಲ್ಲೇ ಚೀಟುಹಾಕಿ ಗೊತ್ತು ಮಾಡುತ್ತೇವೆ;

35 ನಮ್ಮ ಭೂಮಿಯ ಮತ್ತು ಎಲ್ಲ ಹಣ್ಣಿನ ಮರಗಳ ಪ್ರಥಮ ಫಲಗಳನ್ನು ಪ್ರತೀ ವರ್ಷವೂ ಸರ್ವೇಶ್ವರನ ಆಲಯಕ್ಕೆ ತಂದುಕೊಡುತ್ತೇವೆ;

36 ನಮ್ಮ ಚೊಚ್ಚಲಮಕ್ಕಳ ವಿಷಯದಲ್ಲೂ ನಮ್ಮ ಪ್ರಾಣಿಪಶುಗಳ ಚೊಚ್ಚಲಮರಿಗಳ ವಿಷಯದಲ್ಲೂ ಧರ್ಮಶಾಸ್ತ್ರ ವಿಧಿಗನುಸಾರವಾಗಿ ನಡೆಯುತ್ತೇವೆ; ನಮ್ಮ ಚೊಚ್ಚಲ ಕರುಗಳನ್ನೂ ಚೊಚ್ಚಲ ಆಡುಕುರಿಮರಿಗಳನ್ನೂ ನಮ್ಮ ದೇವಾಲಯಕ್ಕೆ ತಂದು ಅಲ್ಲಿ ಸೇವೆಯಲ್ಲಿ ಇರುವ ಯಾಜಕರಿಗೆ ಕೊಡುತ್ತೇವೆ;

37 ನಾವು ದೇವರಿಗಾಗಿ ಪ್ರತ್ಯೇಕಿಸಿಡತಕ್ಕ ಪ್ರಥಮ ಫಲದ ಹಿಟ್ಟು, ಹಣ್ಣುಹಂಪಲು, ದ್ರಾಕ್ಷಾರಸ, ಎಣ್ಣೆ, ಮೊದಲಾದವುಗಳನ್ನು ಯಾಜಕರಿಗಾಗಿ ನಮ್ಮ ದೇವಾಲಯದ ಕೊಠಡಿಗಳಲ್ಲಿ ತಂದಿಡುತ್ತೇವೆ;

ನಮ್ಮ ಭೂಮಿಯ ಆದಾಯದ ದಶಮಾಂಶವು ಲೇವಿಯರದಾಗಬೇಕು; ಲೇವಿಯರು ತಾವೇ ಬಂದು ನಮ್ಮ ಸಾಗುವಳಿಯ ಊರುಗಳಲ್ಲಿ ಅದನ್ನು ಕೂಡಿಸಬೇಕು; 38ಅವರು ದಶಮಾಂಶವನ್ನು ಕೂಡಿಸುವಾಗ ಆರೋನನ ವಂಶದವನಾದ ಯಾಜಕನೊಬ್ಬನು ಅವರ ಸಂಗಡ ಇರಬೇಕು. ಲೇವಿಯರು ತಮಗೆ ದೊರಕಿದ ಭಾಗದ ದಶಮಾಂಶವನ್ನು ದೇವಾಲಯದ ಬಂಡಾರದ ಕೊಠಡಿಗಳಲ್ಲಿಡಬೇಕು; 39ಇಸ್ರಯೇಲರೂ ಲೇವಿಯರೂ ಧಾನ್ಯ, ದ್ರಾಕ್ಷಾರಸ, ಎಣ್ಣೆ ಇವುಗಳಲ್ಲಿ ದೇವರಿಗಾಗಿ ಪ್ರತ್ಯೇಕಿಸತಕ್ಕ ಭಾಗಗಳನ್ನು ತಂದು, ಸೇವೆ ನಡೆಸುತ್ತಿರುವ ಯಾಜಕರು, ದ್ವಾರಪಾಲಕರು, ಗಾಯಕರು ಇವರೂ, ಪವಿತ್ರಾಲಯದ ಪಾತ್ರೆಗಳೂ, ಇರುವ ಕೊಠಡಿಗಳಲ್ಲಿ ಇಡಬೇಕು;

ನಮ್ಮ ದೇವರ ಆಲಯವನ್ನು ಎಂದೂ ಅಲಕ್ಷ್ಯ ಮಾಡುವುದಿಲ್ಲ,' ಎಂದು ಬರೆದುಕೊಟ್ಟರು.

### ಜೆರೂಸಲೇಮಿನಲ್ಲಿ ವಾಸಿಸುತ್ತಿದ್ದವರ ಪಟ್ಟಿ

**11** ಇಸ್ರಯೇಲರ ಪ್ರಮುಖರು ಮಾತ್ರ ಜೆರುಸಲೇಮಿನಲ್ಲಿ ವಾಸಿಸುತ್ತಿದ್ದರು. ಉಳಿದ ಜನರೊಳಗೆ ಹತ್ತುಹತ್ತು ಮಂದಿಯಲ್ಲಿ ಒಂಬತ್ತು ಮಂದಿ ತಮ್ಮ ತಮ್ಮ ಊರುಗಳಲ್ಲಿ ಇದ್ದುಕೊಂಡು, ಒಬ್ಬನು ಪವಿತ್ರ ನಗರವಾದ ಜೆರುಸಲೇಮಿನಲ್ಲಿ ವಾಸಿಸುವುದಕ್ಕಾಗಿ ಅಲ್ಲಿಗೆ ಬರುವಂತೆ ಚೀಟುಹಾಕಿ ಗೊತ್ತುಮಾಡಿದರು. 2ಮತ್ತು ಸ್ವಂತ ಇಚ್ಛೆಯಿಂದ ಜೆರುಸಲೇಮಿನಲ್ಲಿ ವಾಸಿಸುವುದಕ್ಕೆ ಮನಸ್ಸು ಮಾಡಿದಂಥವರನ್ನು ಜನರು ಆಶೀರ್ವದಿಸಿದರು.

3–4 ಯೆಹೂದ ಕುಲದವರಲ್ಲಿ – ಒಬ್ಬನು ಅತಾಯ; ಇವನು ಉಜ್ಜೀಯನ ಮಗ; ಇವನು ಜೆಕರ್ಯನ ಮಗ; ಇವನು ಅಮರ್ಯನ ಮಗ; ಇವನು ಶೆಫಟ್ಯನ ಮಗ; ಇವನು ಮಹಲಲೇಲನ ಮಗ; ಇವನು ಪೆರೆಚ್ ಸಂತಾನದವನು. 5ಇನ್ನೊಬ್ಬನು ಮಾಸೇಯ; ಇವನು ಬಾರೂಕನ ಮಗ; ಇವನು ಕೊಲ್ಹೋಜೆಯ ಮಗ; ಇವನು ಹಜಾಯನ ಮಗ; ಇವನು ಆದಾಯನ ಮಗ; ಇವನು ಯೋಯಾರೀಬನ ಮಗ; ಇವನು ಜೆಕರ್ಯನ ಮಗ; ಇವನು ಶೇಲಹನ ಸಂತಾನದವನು. 6ಜೆರುಸಲೇಮಿನಲ್ಲಿ ವಾಸಿಸುತ್ತಿದ್ದ ಪೆರೆಚ್ ಸಂತಾನದ ರಣವೀರರು ನಾನೂರ ಅರವತ್ತೆಂಟು ಮಂದಿ.

7 ಬೆನ್ಯಾಮೀನ್ ಕುಲದವರಲ್ಲಿ – ಸಲ್ಲು; ಇವನು ಮೆಷುಲ್ಲಾಮನ ಮಗ; ಇವನು ಯೋವೇದನ ಮಗ; ಇವನು ಪೆದಾಯನ ಮಗ; ಇವನು ಕೋಲಾಯನ ಮಗ; ಇವನು ಮಾಸೇಯನ ಮಗ; ಇವನು ಈತೀಯೇಲನ ಮಗ; ಇವನು ಯೆಶಾಯನ ಮಗ. 8ರಣವೀರರಾದ ಇವನ ಬಂಧುಜನರು ಒಂಬೈನೂರಿಪ್ಪತ್ತೆಂಟು ಮಂದಿ. 9ಜೆಕ್ರಿಯ ಮಗನಾದ ಯೋವೇಲನು ಇವರ ನಾಯಕ; ಹಸ್ಸೆನೂವನ ಮಗನಾದ ಯೆಹೂದನು ಎರಡನೆಯ ಪುರಾಧಿಕಾರಿ.

10 ಯಾಜಕರಲ್ಲಿ – ಯೆದಾಯ, ಯೋಯಾರೀಬ್, ಯಾಕೀನ್, ಅಹೀಟೂಬನ 11ಸಂತಾನದವನಾದ ಮೆರಾಯೋತನಿಂದ ಹುಟ್ಟಿದ ಚಾದೋಕನ ಮರಿಮಗನೂ ಮೆಷುಲ್ಲಾಮನ ಮೊಮ್ಮಗನೂ ಹಿಲ್ಕೀಯನ ಮಗನೂ ದೇವಾಲಯದ ಅಧಿಪತಿಯೂ ಆದ ಸೆರಾಯ, ಇವರು. 12ಇವರೂ ದೇವಾಲಯದ ಸೇವೆ ನಡೆಸುತ್ತಿದ್ದ ಇವರ ಬಂಧುಗಳೂ ಎಂಟು ನೂರಿಪ್ಪತ್ತ ಎರಡು ಮಂದಿ. ಇವರಲ್ಲದೆ ಅದಾಯನೆಂಬವನು ಇನ್ನೊಬ್ಬನು. ಇವನು ಯೆರೋಹಾಮನ ಮಗ; ಇವನು ಪೆಲಲ್ಯನ ಮಗ; ಇವನು ಅಮ್ಲೀಯ ಮಗ; ಇವನು ಜೆಕರ್ಯನ ಮಗ; ಇವನು ಪಷ್ಹೂರನ ಮಗ; ಇವನು ಮಲ್ಕೀಯನ ಮಗ. 13ಗೋತ್ರಪ್ರಧಾನರಾದ ಈ ಅದಾಯನ ಬಂಧುಗಳು ಇನ್ನೂರನಾಲ್ವತ್ತೆರಡು ಮಂದಿ. ಅಮಷ್ಶೈ ಎಂಬುವನು ಮತ್ತೊಬ್ಬನು. ಇವನು ಅಜರೇಲನ ಮಗ; ಇವನು ಅಹಜೈಯ ಮಗ; ಇವನು ಮೆಷಿಲ್ಲೇಮೋತನ ಮಗ;

ಇವನು ಇಮ್ಮೇರನ ಮಗ; 14ರಣವೀರರಾಗಿದ್ದ ಈ ಅಮಷ್ಷೈಯ ಬಂಧುಗಳು ನೂರಿಪ್ಪತ್ತೆಂಟು ಮಂದಿ. ಹಗ್ಗೆದೋಲೀಮನ ಮಗನಾದ ಜಬ್ದೀಯೇಲನು ಇವರ ನಾಯಕ.

15 ಲೇವಿಯರಲ್ಲಿ – ಹಷ್ಷೂಬನ ಮಗನೂ ಅಜ್ರೀಕಾಮನ ಮೊಮ್ಮಗನೂ ಹಷಬ್ಯನ ಮರಿಮಗನೂ ಬುನ್ನೀ ವಂಶದವನೂ ಆದ ಶೆಮಾಯನು; 16ಲೇವಿಗೋತ್ರಪ್ರಧಾನರಲ್ಲಿ ದೇವಾಲಯದ ಲೌಕಿಕ ಕಾರ್ಯಗಳ ಮೇಲ್ವಿಚಾರಕರಾದ ಶಬ್ಬೆತೈ, ಯೋಜಾಬಾದ್ ಎಂಬವರು; 17ಮೀಕನ ಮಗ ಜಬ್ದೀಯ ಮೊಮ್ಮಗ, ಆಸಾಫನ ಮರಿಮಗ ಪ್ರಾರ್ಥನಾ ಸಮಯದಲ್ಲಿ ಕೃತಜ್ಞತಾ ಸ್ತುತಿಮಾಡಿರಿ ಎಂದು ಹೇಳಿ ಭಜಕರನ್ನು ನಡೆಸುತ್ತಿದ್ದ ಮತ್ತನ್ಯ, ತನ್ನ ಬಂಧುಗಳಲ್ಲಿ ದ್ವಿತೀಯ ಸ್ಥಾನದವನಾದ ಬಕ್ಬುಕ್ಯ, ಶಮ್ಮೂವನ ಮಗನು; ಗಾಲಾಲನ ಮೊಮ್ಮಗನು, ಯೆದೂತೂನನ ಮರಿಮಗನು ಆದ ಅಬ್ದ ಎಂಬವರು. 18ಪರಿಶುದ್ಧ ನಗರದಲ್ಲಿದ್ದ ಎಲ್ಲ ಲೇವಿಯರು ಇನ್ನೂರ ಎಂಬತ್ತನಾಲ್ಕು ಮಂದಿ.

19 ದ್ವಾರಪಾಲಕರಲ್ಲಿ – ಅಕ್ಕೂಬ್ ಟಲ್ಮೋನರೂ ಬಾಗಿಲುಗಳನ್ನು ಕಾಯುತ್ತಿದ್ದ ಇವರ ಬಂಧುಗಳೂ; ಒಟ್ಟು ನೂರೆಪ್ಪತ್ತೆರಡು ಮಂದಿ.

20 ಉಳಿದ ಇಸ್ರಯೇಲರು, ಯಾಜಕರು ಹಾಗು ಲೇವಿಯರು ತಮ್ಮ ತಮ್ಮ ಸೊತ್ತುಗಳಿದ್ದ ಜುದೇಯದ ಎಲ್ಲ ಪಟ್ಟಣಗಳಲ್ಲಿ ವಾಸಿಸುತ್ತಿದ್ದರು. 21ದೇವಸ್ಥಾನದ ದಾಸರು ಓಫೇಲ್ ಗುಡ್ಡದಲ್ಲಿ ವಾಸಿಸುತ್ತಿದ್ದರು. ಚೀಹ, ಗಿಷ್ಪ ಎಂಬವರು ಇವರ ನಾಯಕರು. 22ದೇವಾಲಯ ಸೇವಾಸಂಬಂಧದಲ್ಲಿ ಗಾಯಕರಾದ ಆಸಾಫ್ಯರಿಗೆ ಸೇರಿದ ಬಾನೀಯ ಮಗನೂ ಹಷಬ್ಯನ ಮೊಮ್ಮಗನೂ ಮತ್ತನ್ಯನ ಮರಿಮಗನೂ ಮೀಕನ ವಂಶದವನೂ ಆದ ಉಜ್ಜೀಯು ಜೆರುಸಲೇಮಿನಲ್ಲಿದ್ದ ಲೇವಿಯರ ನಾಯಕನು. 23ಇವರ ಮತ್ತು ಗಾಯಕರ ಅನುದಿನದ ಕರ್ತವ್ಯಾಂಶಗಳ ವಿಷಯವಾಗಿ ರಾಜನಿಯಮವಿತ್ತು. 24ಮೆಷೇಜಬೇಲನ ಮಗನೂ ಜೆರಹನ ಸಂತಾನದವನೂ ಯೆಹೂದ ಕುಲದವನೂ ಆದ ಪೆತಹ್ಯನು ಪ್ರಜೆಗಳ ಎಲ್ಲ ಕಾರ್ಯಗಳ ಸಂಬಂಧದಲ್ಲಿ ರಾಜನ ಕಾರಭಾರಿಯಾಗಿದ್ದನು.

25 ಹೊಲಗದ್ದೆಗಳಿದ್ದವರು ವಾಸಿಸುತ್ತಿದ್ದ ಊರುಗಳು –

ಕಿರ್ಯತರ್ಬ, ದೀಬೋನ್, ಯೆಕಬ್ಜೆಯೇಲ್, ಇವುಗಳೂ ಇವುಗಳ ಗ್ರಾಮಗಳೂ; 26ಯೇಷೂವ, ಮೋಲಾದ, 27ಬೇತ್ಪೆಲೆಟ್, ಹಚರ್ಷೂವಲ್ ಇವುಗಳೂ ಬೇರ್ಷೆಬವೂ ಅದರ ಗ್ರಾಮಗಳೂ; 28ಚಿಕ್ಲಗ್ಊರೂ ಮೆಕೋನವೂ ಅದರ ಗ್ರಾಮಗಳೂ; 29ಏನ್ರಿಮ್ಮೋನ್, ಚೊರ್ರ, 30ಯರ್ಮೂತ್ ಇವುಗಳೂ ಇವುಗಳ ಗ್ರಾಮಗಳೂ, ಲಾಕೀಷ್ ಊರೂ ಇದರ ಪ್ರಾಂತ್ಯಗಳೂ, ಅಜೇಕವೂ ಅದರ ಗ್ರಾಮಗಳು; ಇವು ಯೆಹೂದ ಕುಲದವರ ನಿವಾಸಸ್ಥಾನಗಳು. ಅವರು ಬೇರ್ಷೆಬದಿಂದ ಹಿನ್ನೋಮ್ ಕಣಿವೆಯವರೆಗೂ ವಾಸಿಸುತ್ತಿದ್ದರು.

31 ಗೆಬ, ಮಿಕ್ಮಾಷ್, ಅಯ್ಯಾ, ಗ್ರಾಮ ಸಹಿತವಾದ ಬೇತೇಲ್ ಎಂಬ ಊರುಗಳು; 32ಅನಾತೋತ್, ನೋಬ್, 33ಅನನ್ಯ, ಹಾಚೋರ್, ರಾಮಾ, ಗಿತ್ತಯೆಮ್, 34ಹಾದೀದ್, ಚೆಬೋಯೀಮ್, ನೆಬಲ್ಲಾಟ್, ಲೋದ್, 35ಓನೋ, ಗೇಹರಾಷೀಮ್ ಎಂಬ ಊರುಗಳು, ಇವು ಬೆನ್ಯಾಮೀನ್ ಕುಲದವರ ನಿವಾಸಸ್ಥಾನಗಳು.

36 ಲೇವಿಯರಲ್ಲಿ ಕೆಲವು ವರ್ಗಗಳವರು ಯೆಹೂದ್ಯರಲ್ಲಿ, ಕೆಲವರು ಬೆನ್ಯಾಮೀನ್ಯರಲ್ಲಿ, ವಾಸಿಸುತ್ತಿದ್ದರು.

## ಯಾಜಕರ ಮತ್ತು ಲೇವಿಯರ ಪಟ್ಟಿ

**12** ಶೆಯಲ್ತಿಯೇಲನ ಮಗ ಜೆರುಬ್ಬಾಬೆಲ್ ಹಾಗು ಯೇಷೂವ ಇವರೊಡನೆ ಜುದೇಯನಾಡಿಗೆ ಹಿಂದಿರುಗಿ ಬಂದ ಯಾಜಕರು ಮತ್ತು ಲೇವಿಯರ ಪಟ್ಟಿ:

ಯಾಜಕರು –

2 ಸೆರಾಯ, ಯೆರೆಮೀಯ, ಎಜ್ರ, ಅಮರ್ಯ, 3ಮಲ್ಲೂಕ್, ಹಟ್ಟೂಷ್, ಶೆಕನ್ಯ ರೆಹುಮ್, ಮೆರೇಮೋತ್, ಇದ್ದೋ, 4ಗಿನ್ನೆತೋನ್, ಅಬೀಯ, 5–6ಮಿಯ್ಯಾಮೀನ್, ಮಾದ್ಯ, ಬಿಲ್ಗ, ಶೆಮಾಯ,

7ಯೋಯಾರೀಬ್, ಯೆದಾಯ, ಸಲ್ಲೂ, ಆಮೋಕ್, ಹಿಲ್ಕೀಯ, ಯೆದಾಯ. ಇವರು ಯೇಷೂವನ
ಕಾಲದಲ್ಲಿ ಯಾಜಕರ ಮತ್ತು ಅವರ ಬಂಧುಗಳ ಮುಖಂಡರಾಗಿದ್ದರು.
8 ಲೇವಿಯರು – ಯೇಷೂವ, ಬೆನ್ನೂಯ್, ಕದ್ಮೀಯೇಲ್, ಶೇರೇಬ್ಯ, ಯೆಹೂದ್ಯ, ಮತ್ತನ್ಯ
ಇವರು. ಮತ್ತನ್ಯನೂ ಅವನ ಸಹೋದರರೂ ಕೃತಜ್ಞತಾಭಜನ ನಾಯಕರು. 9ಇವರ ಸಹೋದರರಾದ
ಬಕ್ಬುಕ್ಯ, ಉನ್ನೀ ಎಂಬವರು ಭಜನ ಸೇವೆಯಲ್ಲಿ ಇವರೆದುರಿಗೆ ನಿಂತು ಹಾಡುವವರು.

**ಪ್ರಧಾನ ಯಾಜಕ ಯೇಷೂವನ ಸಂತಾನ**

10 ಯೇಷೂವನಿಗೆ ಯೋಯಾಕೀಮನು, ಯೋಯಾಕೀಮನಿಗೆ ಎಲ್ಯಾಷೀಬನು, ಎಲ್ಯಾಷೀಬನಿಗೆ
ಯೋಯಾದನು, 11ಯೋಯಾದನಿಗೆ ಯೋನಾತಾನನು, ಯೋನಾತಾನನಿಗೆ ಯದ್ದೂವನು ಹುಟ್ಟಿದರು.

ಯಾಜಕರಾಗಿದ್ದ ಗೋತ್ರಪ್ರಧಾನರು

12 ಯೋಯಾಕೀಮನ ಕಾಲದಲ್ಲಿ ಯಾಜಕರಾಗಿದ್ದ ಗೋತ್ರಪ್ರಧಾನರು –

| | ಯಾಜಕ | ಗೋತ್ರ |
|---|---|---|
| 12–21 | | |
| | ಮೆರಾಯ | ಸೆರಾಯ |
| | ಹನನ್ಯ | ಯೆರೆಮೀಯ |
| | ಮೆಷುಲ್ಲಾಮ್ | ಎಜ್ರ |
| | ಯೆಹೋಹಾನಾನ್ | ಅಮರ್ಯ |
| | ಯೋನಾತಾನ್ | ಮಲ್ಲೂಕಿ |
| | ಜೋಸೇಫ್ | ಶೆಬನ್ಯ |
| | ಅದ್ನ | ಹಾರಿಮ |
| | ಹೆಲ್ಕೈ | ಮೆರಾಯೋತ |
| | ಜಕರ್ಯ | ಇದ್ದೋ |
| | ಮೆಷುಲ್ಲಾಮ್ | ಗಿನ್ನೆತೋನ |
| | ಜಿಕ್ರೀ | ಅಬೀಯ |
| | ಪಿಲ್ಟೈ | ಮಿನ್ಯಾಮೀನ ಮತ್ತು ಮೋವದ್ಯ |
| | ಶಮ್ಮೂವ | ಬಿಲ್ಗ |
| | ಯೆಹೋನಾತಾನ್ | ಶೆಮಾಯ |
| | ಮತ್ತೆನೈ | ಯೋಯಾರೀಬ |
| | ಉಜ್ಜೀ | ಯೆದಾಯ |
| | ಕಲ್ಲೈ | ಸಲ್ಲೈ |
| | ಏಬೆರ್ | ಆಮೋಕ |
| | ಹಷಬ್ಯ | ಹಿಲ್ಕೀಯ |
| | ನೆತನೇಲ್ | ಯೆದಾಯ |

22 ಎಲ್ಯಾಷೀಬ್, ಯೋಯಾದ, ಯೋಹಾನಾನ್, ಯದ್ದೂವ ಇವರ ಕಾಲಗಳಲ್ಲಿದ್ದ ಲೇವಿಯ
ಗೋತ್ರಪ್ರಧಾನರ ಪಟ್ಟಿ ಹಾಗು ಪರ್ಷಿಯಾದ ದಾರ್ಯಾವೆಷ ರಾಜನ ಆಳ್ವಿಕೆಯವರೆಗಿದ್ದ ಯಾಜಕರ
ಪಟ್ಟಿಯೂ ಇದೆ. 23ಎಲ್ಯಾಷೀಬನ ಮೊಮ್ಮಗನಾದ ಯೋಹಾನಾನನ ಕಾಲದ ಲೇವಿಯ ಗೋತ್ರಪ್ರಧಾನರ
ಪಟ್ಟಿಯು ಪೂರ್ವಕಾಲದ ಇತಿಹಾಸ ಎಂಬ ಗ್ರಂಥದಲ್ಲಿ ಬರೆದಿರುತ್ತದೆ.
24 ಈ ಲೇವಿ ಗೋತ್ರಪ್ರಧಾನರಲ್ಲಿ ಯೇಷೂವನ ಮಗನೂ ಯೋಚಾದಾಕನ ಮೊಮ್ಮಗನೂ ಆದ
ಯೋಯಾಕೀಮ್, ರಾಜ್ಯಪಾಲನಾದ ನೆಹೆಮೀಯ, ಯಾಜಕನೂ ಧರ್ಮೋಪದೇಶಕನೂ ಆದ ಎಜ್ರ
25ಇವರ ಕಾಲದಲ್ಲಿದ್ದವರು–ಹಷಬ್ಯ, ಶೇರೇಬ್ಯ, ಯೇಷೂವ, ಬಿನ್ನೂಯ್, ಕದ್ಮೀಯೇಲ್ ಇವರು.

ದೈವಪುರುಷ ದಾವೀದನ ಅಪ್ಪಣೆಯ ಮೇರೆಗೆ ಇವರೂ ಇವರ ಸಹೋದರರೂ ಸರದಿಗೆ ಎರಡೆರಡು ವರ್ಗಗಳಾಗಿ ಪರಸ್ಪರ ಹಾಡುತ್ತಾ ಕೀರ್ತನೆಯನ್ನೂ ಕೃತಜ್ಞತಾ ಸ್ತುತಿಯನ್ನೂ ಮಾಡುತ್ತಿದ್ದರು. 26ಇವರಲ್ಲದೆ ಬಾಗಿಲುಗಳ ಬಳಿಯಲ್ಲಿದ್ದ ಉಗ್ರಾಣಗಳನ್ನು ಕಾಯತಕ್ಕ ದ್ವಾರಪಾಲಕರಾದ ಮತ್ತನ್ಯ, ಬಕ್ಬುಕ್ಯ, ಓಬದ್ಯ, ಮೆಷುಲ್ಲಾಮ್, ಟಲ್ಮೋನ್, ಅಕ್ಕೂಬ್ ಎಂಬವರು.

**ಪೌಳಿಗೋಡೆಯ ಪ್ರತಿಷ್ಠೆ**

27 ಜೆರುಸಲೇಮಿನ ಗೋಡೆಯನ್ನು ಪ್ರತಿಷ್ಠಿಸುವ ಸಮಯ ಬಂದಾಗ, ಆಯಾ ಸ್ಥಳಗಳಲ್ಲಿದ್ದ ಲೇವಿಯರನ್ನು ಕೀರ್ತನಗಾಯನಗಳಿಂದಲೂ ತಾಳ, ಸ್ವರಮಂಡಲ, ಕಿನ್ನರಿ ಇವುಗಳಿಂದಲೂ ಪ್ರತಿಷ್ಠೆಯ ಉತ್ಸವವನ್ನು ಆಚರಿಸುವುದಕ್ಕಾಗಿ ಜೆರುಸಲೇಮಿಗೆ ಕರೆಯಿಸಲಾಯಿತು. 28ಆಗ ಜೆರುಸಲೇಮಿನ ಸುತ್ತಣ ಪ್ರಾಂತ್ಯಗಳಲ್ಲಿ ತಮಗಾಗಿ ಹಳ್ಳಿಗಳನ್ನು ಕಟ್ಟಿಕೊಂಡಿದ್ದ ಗಾಯಕಮಂಡಲಿಯವರು ಜೋರ್ಡನ್ ನದಿಯ ತಗ್ಗು, ಜೆರುಸಲೇಮಿನ ಸುತ್ತಣ ಪ್ರದೇಶ, ನೆಟೋಫಾತ್ಯರ ಗ್ರಾಮ 29ಬೇತ್ಗಿಲ್ಗಾಲ್, ಗೆಬ ಮತ್ತು ಅಜ್ಮಾವೇತ್ ಊರುಗಳಿಗೆ ಸೇರಿರುವ ಹಳ್ಳಿಗಳು, ಇವುಗಳಿಂದ ಕೂಡಿಬಂದರು. 30ಯಾಜಕರೂ ಲೇವಿಯರೂ ತಮ್ಮನ್ನು ಶುದ್ಧಿಪಡಿಸಿಕೊಂಡ ಮೇಲೆ ಜನರನ್ನೂ ಊರು ಬಾಗಿಲುಗಳನ್ನೂ ಗೋಡೆಯನ್ನೂ ಶುದ್ಧಪಡಿಸಿದರು.

31 ಆಮೇಲೆ ನಾನು ಯೆಹೂದ ಪ್ರಮುಖರನ್ನು ಗೋಡೆಯ ಮೇಲೆ ಕರೆದುಕೊಂಡು ಬಂದೆ; ಭಜನೆ ಮಂಡಲಿಯವರಿಗೆ, "ಎರಡು ದೊಡ್ಡ ಗುಂಪುಗಳಾಗಿ ಇಲ್ಲಿ ನಿಲ್ಲಿ," ಎಂದು ಅಪ್ಪಣೆ ಮಾಡಿದೆ.

ಒಂದು ಗುಂಪಿನವರು ಮೆರವಣಿಗೆಯಿಂದ ಗೋಡೆಯ ಮೇಲೆ ತಿಪ್ಪೆಬಾಗಿಲಿನಿಂದ ಬಲಗಡೆಗೆ ಹೋದರು. 32ಅವರ ಹಿಂದೆ ಯೆಹೂದ ಪ್ರಮುಖರು ಅರ್ಧ ಜನರೊಡನೆ ಹೋದರು; ಹೋಷಾಯನು 33ತುತೂರಿ ಹಿಡಿದಿರುವ ಯಾಜಕರೊಡನೆ 34ಅಜರ್ಯ, ಎಜ್ರ, ಮೆಷುಲ್ಲಾಮ್, ಯೆಹೂದ್ಯ, ಬೆನ್ಯಾಮೀನ್, ಶೆಮಾಯ, ಯೆರೆಮೀಯ ಎಂಬವರು ಹೋದರು. 35ಅವರೊಂದಿಗೆ ಆಸಾಫ್ ಸಂತಾನದ ಜಕ್ಕೂರನಿಗೆ ಹುಟ್ಟಿದ ಮೀಕಾಯನ ವಂಶದವನೂ ಮತ್ತನ್ಯನ ಮರಿಮಗನೂ ಶೆಮಾಯನ ಮೊಮ್ಮಗನೂ ಯೋನಾತಾನನ ಮಗನೂ ಆದ 36ಜೆಕರ್ಯನೂ ದೈವಪುರುಷ ದಾವೀದನ ವಾದ್ಯಗಳನ್ನು ಹಿಡಿದಿದ್ದ. ಇವನ ಬಂಧುಗಳಾದ ಶೆಮಾಯ, ಅಜರೇಲ್, ಮಿಲಲೈ, ಗಿಲಾಲೈ, ಮಾಯೈ, ನೆತನೇಲ್, ಯೆಹೂದ, ಹನಾನೀ ಎಂಬವರೂ ಹೋದರು. ಧರ್ಮೋಪದೇಶಕನಾದ ಎಜ್ರನು ಇವರ ಮುಂದಾಳಾಗಿ ಇದ್ದನು. 37ಇವರು ಬುಗ್ಗೆಬಾಗಿಲನ್ನು ಹಾದು ನೆಟ್ಟಗೆ ದಾವೀದನಗರದ ಸೋಪಾನಗಳ ಮಾರ್ಗವಾಗಿ ಗೋಡೆಯನ್ನನುಸರಿಸಿ, ಅರಮನೆಯ ಮೇಲಣ ದಿನ್ನೆಯನ್ನು ಹತ್ತಿ, ಪೂರ್ವದಿಕ್ಕಿನಲ್ಲಿರುವ ನೀರು ಬಾಗಿಲಿನವರೆಗೆ ಹೋದರು.

38 ಅವರನ್ನು ಎದುರುಗೊಳ್ಳುವ ಹಾಗೆ ಭಜನೆ ಮಂಡಲಿಯ ಎರಡನೆಯ ಗುಂಪಿನವರೂ ನಾನೂ ಉಳಿದ ಅರ್ಧಜನರೂ ಗೋಡೆಯ ಮೇಲೆ ಒಲೆಬುರುಜಿನಿಂದ ಅಗಲ ಗೋಡೆಯವರೆಗೂ 39ಅಲ್ಲಿಂದ ಎಫ್ರಯಿಮ್ ಬಾಗಿಲು, ಯೆಷಾನಾ ಬಾಗಿಲು, ಮೀನು ಬಾಗಿಲು, ಹನನೇಲ್ ಬುರುಜು, ಹಮ್ಮೇಯಾ ಬುರುಜು ಇವುಗಳ ಮಾರ್ಗವಾಗಿ ಕುರಿಬಾಗಿಲಿನವರೆಗೂ ಹೋಗಿ ಸೆರೆಮನೆಯ ಬಾಗಿಲಿನ ಬಳಿಯಲ್ಲಿ ನಿಂತೆವು.

40 ಎರಡು ಭಜನೆಮಂಡಲಿಯ ಗುಂಪಿನವರೂ ನಾನು ನನ್ನ ಜೊತೆಯಲ್ಲಿದ್ದ ಅರ್ಧಮಂದಿ ಅಧಿಕಾರಿಗಳೂ 41ತುತೂರಿ ಹಿಡಿದಿರುವ ಯಾಜಕರಾದ ಎಲ್ಯಾಕೀಮ್, ಮಾಸೇಯ, ಮಿನ್ಯಾಮೀನ್, ಮೀಕಾಯ, ಎಲ್ಯೋವೇನೈ, 42ಜೆಕರ್ಯ, ಹನನ್ಯ ಇವರೂ, ಮಾಸೇಯ, ಶೆಮಾಯ, ಎಲ್ಲಾಜಾರ್, ಉಜ್ಜೀ, ಯೆಹೋ ಹಾನಾನ್, ಮಲ್ಕೀಯ, ಏಲಾಮ್, ಎಜೆರ್ ಎಂಬವರೂ ದೇವಾಲಯದ ಬಳಿಯಲ್ಲಿ ನಿಂತರು, ಗಾಯಕರು ಹಾಡತೊಡಗಿದರು. ಇಜ್ರಹ್ಯನು ಇವರ ನಾಯಕನಾಗಿದ್ದನು. 43ದೇವರು ತಮಗೆ ವಿಶೇಷಾನಂದವನ್ನುಂಟು ಮಾಡಿದ್ದರಿಂದ ಜನರು ಆ ದಿನ ಅನೇಕ ಬಲಿದಾನಗಳನ್ನು ಸಮರ್ಪಿಸಿ ತಮ್ಮ ಮಡದಿ ಮಕ್ಕಳೊಡನೆ ಮಹೋತ್ಸವ ಮಾಡಿದರು. ಜೆರುಸಲೇಮಿನ ಉತ್ಸವದ ಹರ್ಷಧ್ವನಿ ಬಹುದೂರದವರೆಗೂ ಕೇಳಿಸಿತು.

## ದೇವಾಲಯ ಸೇವಕರ ಜೀವನಾಂಶಕ್ಕೆ ವ್ಯವಸ್ಥೆ

44 ಸೇವೆಮಾಡುತ್ತಿದ್ದ ಯಾಜಕರ ಮತ್ತು ಲೇವಿಯರ ವಿಷಯದಲ್ಲಿ ಯೆಹೂದ್ಯರಿಗೆ ಬಹು ಸಂತೋಷವುಂಟಾಯಿತು. ಆ ದಿನದಲ್ಲಿ ಅವರು ಧರ್ಮವಿಧಿಯ ಪ್ರಕಾರ ಆಯಾ ಊರುಗಳ ಭೂಮಿಯಿಂದ ಯಾಜಕರಿಗೂ ಲೇವಿಯರಿಗೂ ಸಿಕ್ಕತಕ್ಕ ಭಾಗಗಳನ್ನು ಅಂದರೆ, ದೇವರಿಗಾಗಿ ಪ್ರತ್ಯೇಕಿಸತಕ್ಕ ವಸ್ತು, ಪ್ರಥಮಫಲ, ದಶಮಾಂಶ ಇವುಗಳನ್ನು ಸಂಗ್ರಹಮಾಡತಕ್ಕ ಕೋಠಡಿಗಳ ಮೇಲೆ ಪಾರುಪತ್ಯಗಾರರನ್ನು ನೇಮಿಸಿದರು. 45ಆ ಯಾಜಕರೂ ಲೇವಿಯರೂ ತಮ್ಮ ದೇವರ ಸೇವಾಸಂಬಂಧದಲ್ಲಿ ಹಾಗು ಶುದ್ಧೀಕರಣ ಸಂಬಂಧದಲ್ಲಿ ತಮ್ಮ ಕರ್ತವ್ಯವನ್ನು ಜಾಗರೂಕತೆಯಿಂದ ನೆರವೇರಿಸುತ್ತಿದ್ದರು. ಅವರಂತೆ ಗಾಯಕರೂ ದ್ವಾರಪಾಲಕರೂ ಸಹ ದಾವೀದನಿಂದಲೂ ಅವನ ಮಗ ಸೊಲೊಮೋನನಿಂದಲೂ ಸ್ಥಾಪಿತವಾದ ಕ್ರಮಾನುಸಾರ ನಡೆಯುತ್ತಿದ್ದರು. 46ಗಾಯನ ಮಂಡಲಿಗಳು ಕೃತಜ್ಞತಾ ಸ್ತುತಿಕೀರ್ತನೆಗಳ ದೇವಸೇವೆಯೂ ಪೂರ್ವಕಾಲದಲ್ಲಿ ಅಂದರೆ, ದಾವೀದನ ಮತ್ತು ಆಸಾಫನ ಕಾಲದಲ್ಲೇ ಇದ್ದವು. 47ಜೆರುಬ್ಬಾಬೆಲ್, ನೆಹೆಮೀಯ ಇವರ ಕಾಲಗಳಲ್ಲಿ ಎಲ್ಲಾ ಇಸ್ರಯೇಲರು ಗಾಯಕರಿಗೂ ದ್ವಾರಪಾಲಕರಿಗೂ ದಿನದಿನಕ್ಕೆ ಸಿಕ್ಕತಕ್ಕ ಪಾಲುಗಳನ್ನು ಕೊಡುತ್ತ ಇದ್ದರು. ಇವರು ಅವುಗಳಲ್ಲಿ ದಶಮಾಂಶವನ್ನು ಲೇವಿಯರಿಗೂ ಲೇವಿಯರು ತಮ್ಮದರಲ್ಲಿ ದಶಮಾಂಶವನ್ನು ಆರೋನನ ಮಕ್ಕಳಿಗೂ ಕೊಡುತ್ತಿದ್ದರು.

## ನೆಹೆಮೀಯನು ಸಾಧಿಸಿದ ಇತರ ಧಾರ್ಮಿಕ ಸುಧಾರಣೆಗಳು

**13** ಆ ಕಾಲದಲ್ಲಿ ಜನರ ಮುಂದೆ ಮೋಶೆಯ ಧರ್ಮಶಾಸ್ತ್ರ ಪಾರಾಯಣವು ನಡೆಯುತ್ತಿತ್ತು. ಅದರಲ್ಲಿ – ಅಮ್ಮೋನಿಯರಾಗಲಿ ಮೋವಾಬ್ಯರಾಗಲಿ ದೇವರ ಸಭೆಯಲ್ಲಿ ಎಂದಿಗೂ ಸೇರಬಾರದಿತ್ತು. 2ಏಕೆಂದರೆ ಅವರು ಇಸ್ರಯೇಲರನ್ನು ಅನ್ನಪಾನಗಳೊಡನೆ ಎದುರುಗೊಳ್ಳಲಿಲ್ಲ; ಅವರನ್ನು ಶಪಿಸುವುದಕ್ಕಾಗಿ ಬಿಳಾಮನಿಗೆ ಹಣಕೊಟ್ಟು ಅವನನ್ನು ಕರೆಸಿದ್ದರು. ನಮ್ಮ ದೇವರಾದರೋ ಅವನಿಂದ ಶಾಪವನ್ನಲ್ಲ, ಆಶೀರ್ವಾದವನ್ನೇ ಹೇಳಿಸಿದರು ಎಂಬ ಮಾತು ಬರೆದಿರುವುದಾಗಿ ಗೊತ್ತಾಯಿತು. 3ಇಸ್ರಯೇಲರು ಈ ಧರ್ಮವಿಧಿಯನ್ನು ಕೇಳಿದೊಡನೆ ಎಲ್ಲ ಮಿಶ್ರಜಾತಿ ಅವರನ್ನು ತಮ್ಮ ಮಧ್ಯೆಯಿಂದ ಬೇರ್ಪಡಿಸಿದರು.

4 ಇದಕ್ಕಿಂತ ಮೊದಲು ಯಾಜಕ ಎಲ್ಯಾಷೀಬನು ನಮ್ಮ ದೇವಾಲಯದ ಕೊಠಡಿಗಳ ಮೇಲ್ವಿಚಾರಕನಾಗಿ ನೇಮಕಗೊಂಡಿದ್ದನು. ಇವನು ಟೋಬೀಯನ ಬೀಗನಾಗಿದ್ದುದರಿಂದ 5ನೈವೇದ್ಯದ್ರವ್ಯ, ಧೂಪಪಾತ್ರೆ ಇವುಗಳನ್ನೂ ಧಾನ್ಯ, ದ್ರಾಕ್ಷಾರಸ, ಎಣ್ಣೆ ಇವುಗಳ ದಶಮಾಂಶವನ್ನೂ ಲೇವಿಯರಿಗೆ, ಗಾಯಕರಿಗೆ ಹಾಗು ದ್ವಾರಪಾಲಕರಿಗೆ ಸಲ್ಲತಕ್ಕ ಪದಾರ್ಥಗಳನ್ನೂ ಯಾಜಕರಿಗಾಗಿ ಪ್ರತ್ಯೇಕಿಸತಕ್ಕ ಪದಾರ್ಥಗಳನ್ನೂ ಇಡುವುದಕ್ಕಾಗಿ ಉಪಯೋಗವಾಗುತ್ತಿದ್ದ ಕೊಠಡಿಯನ್ನು ಅವನಿಗಾಗಿ ಸಿದ್ಧಮಾಡಿಸಿಕೊಟ್ಟಿದ್ದನು. 6ನಾನು ಬಾಬಿಲೋನಿನ ಅರಸ ಅರ್ತಷಸ್ತನ ಮೂವತ್ತೆರಡನೆಯ ವರ್ಷದಲ್ಲಿ ಅರಸನ ಬಳಿಗೆ ಹೋಗಿದ್ದೆ. ಆದುದರಿಂದ ಇದೆಲ್ಲಾ ನಡೆಯುವಾಗ ನಾನು ಜೆರುಸಲೇಮಿ ನಲ್ಲಿರಲಿಲ್ಲ. ಕ್ರಮೇಣ ನಾನು ಅರಸನಿಂದ ಅಪ್ಪಣೆ ಪಡೆದುಕೊಂಡು 7ಮತ್ತೆ ಜೆರುಸಲೇಮಿಗೆ ಬಂದೆ. ಆಗ ಎಲ್ಯಾಷೀಬನು ಟೋಬೀಯನಿಗಾಗಿ ದೇವಾಲಯ ಪ್ರಾಕಾರದೊಳಗೆ ಕೊಠಡಿಯನ್ನು ಸಿದ್ಧಮಾಡಿಕೊಟ್ಟಿದ್ದನ್ನು ನೋಡಿದೆ. 8ಈ ದುಷ್ಕೃತ್ಯದ ನಿಮಿತ್ತ ಬಹಳವಾಗಿ ವ್ಯಸನಗೊಂಡು ಟೋಬೀಯನ ಮನೆಯ ಸಾಮಾನುಗಳನ್ನು 9ಆ ಕೊಠಡಿಯಿಂದ ಹೊರಗೆ ಹಾಕಿಸಿ, ಕೊಠಡಿಯನ್ನು ಶುದ್ಧಮಾಡುವುದಕ್ಕೆ ಅಪ್ಪಣೆ ಕೊಟ್ಟೆ. ಅದು ಶುದ್ಧವಾದ ಮೇಲೆ ದೇವಾಲಯದ ಪಾತ್ರೆ, ನೈವೇದ್ಯದ್ರವ್ಯ, ಧೂಪ ಇವುಗಳನ್ನು ಪುನಃ ಅಲ್ಲಿಡಿಸಿದೆ.

10 ಇದಲ್ಲದೆ, ಲೇವಿಯರಿಗೆ ಸಲ್ಲತಕ್ಕ ಪಾಲುಗಳು ಅವರಿಗೆ ಸಿಕ್ಕಲಿಲ್ಲವೆಂದೂ ಆರಾಧನೆ ನಡೆಸತಕ್ಕ ಲೇವಿಯರೂ ಗಾಯಕರೂ ತಮ್ಮ ತಮ್ಮ ಆಸ್ತಿಯಿದ್ದಲ್ಲಿಗೆ ಹೋಗಿಬಿಟ್ಟರೆಂದೂ ನನಗೆ ಗೊತ್ತಾಯಿತು. 11ಈ ಕಾರಣ ನಾನು ಅಧಿಕಾರಿಗಳನ್ನು, "ದೇವಾಲಯವನ್ನು ಅಲಕ್ಷ್ಯ ಮಾಡಿದ್ದೇಕೆ?" ಎಂಬುದಾಗಿ ಪ್ರಶ್ನಿಸಿದೆ; ಬಿಟ್ಟು ಹೋದವರನ್ನು ತಿರುಗಿ ಕರೆಸಿ, ಅವರನ್ನು ಅವರವರ ಉದ್ಯೋಗಗಳಲ್ಲಿರಿಸಿದೆ. 12ಆಗ ಎಲ್ಲಾ ಯೆಹೂದ್ಯರು ತಮ್ಮ ತಮ್ಮ ಧಾನ್ಯ, ದ್ರಾಕ್ಷಾರಸ, ಎಣ್ಣೆ, ಇವುಗಳಲ್ಲಿ ದಶಮಾಂಶವನ್ನು ತಂದು ಭಂಡಾರಗಳಲ್ಲಿ ಹಾಕಿದರು. 13ಆಮೇಲೆ ಉಗ್ರಾಣಗಳನ್ನು ನೋಡಿಕೊಳ್ಳುವುದಕ್ಕೆ ಯಾಜಕನಾದ ಶೆಲೆಮ್ಯ, ಲೇಖಕನಾದ

ಚಾದೋಕ್, ಲೇವಿಕುಲದವನಾದ ಪೆದಾಯ ಇವರನ್ನೂ ಇವರ ಸಹಾಯಕ್ಕಾಗಿ ಜಕ್ಕೂರನ ಮಗನೂ ಮತ್ತನ್ಯನ ಮೊಮ್ಮಗನೂ ಆದ ಹಾನಾನನನ್ನೂ ನೇಮಿಸಿದೆ. ಇವರೆಲ್ಲರೂ ನಂಬಿಕಸ್ತರೆಂದು ಹೆಸರುಗೊಂಡವರು. ತಮ್ಮ ಸಹೋದರರಿಗೆ ತಕ್ಕದ್ದನ್ನು ಹಂಚಿಕೊಡುವುದು ಇವರ ಕರ್ತವ್ಯವಾಗಿತ್ತು.
14ನನ್ನ ದೇವರೇ, ಇದನ್ನು ನನ್ನ ಹಿತಕ್ಕಾಗಿ ಸ್ಮರಿಸಿಕೊಳ್ಳಿ. ನಾನು ನನ್ನ ದೇವರ ಆಲಯದ ಮತ್ತು ಅದರ ಸೇವೆಯ ಸಂಬಂಧವಾಗಿ ಮಾಡಿದ ಭಕ್ತಿಕಾರ್ಯಗಳನ್ನು ನಿಮ್ಮ ನೆನಪಿನಿಂದ ಅಳಿಸಿಬಿಡಬೇಡಿ.

15 ಆ ಕಾಲದಲ್ಲಿ, ಜನರು ಸಬ್ಬತ್‌ದಿನ ಜುದೇಯನಾಡಿನಲ್ಲಿ ತೊಟ್ಟಿಯೊಳಗೆ ದ್ರಾಕ್ಷಿ ತುಳಿಯುವುದನ್ನು ಕಂಡೆ; ಅಂತೆಯೇ ಕಣದ ಕಾಳನ್ನು ಕೂಡಿಸಿ ಆ ಕಾಳು, ದ್ರಾಕ್ಷಾರಸ, ದ್ರಾಕ್ಷಿ, ಅಂಜೂರದ ಹಣ್ಣು, ಈ ಮುಂತಾದವುಗಳನ್ನು ಕತ್ತೆಗಳ ಮೇಲೆ ಹೇರಿಕೊಂಡು ಆ ದಿನದಲ್ಲೇ ಜೆರುಸಲೇಮಿಗೆ ತರುವುದನ್ನು ಗಮನಿಸಿದೆ. ಅವರು ಆ ಆಹಾರ ಪದಾರ್ಥಗಳನ್ನು ಮಾರುವುದಕ್ಕೆ ಬಂದಾಗ ಅವರನ್ನು ಗದರಿಸಿದೆ.
16ಇದಲ್ಲದೆ, ಈ ನಾಡಿನಲ್ಲಿ ವಾಸಿಸುತ್ತಿದ್ದ ಟೈರಿನವರು ಮೀನು ಮುಂತಾದ ಸರಕುಗಳನ್ನು ತಂದು ಯೆಹೂದ್ಯರಿಗೆ ಸಬ್ಬತ್ ದಿನದಲ್ಲಿ ಜೆರುಸಲೇಮಿನಲ್ಲೇ ಮಾರುತ್ತಿದ್ದರು.
17ಆಗ ನಾನು ಯೆಹೂದ ಶ್ರೀಮಂತರಿಗೆ, “ನೀವು ಮಾಡುವುದು ಎಂಥ ದುಷ್ಕೃತ್ಯ! ನೀವು ಸಬ್ಬತ್ ದಿನವನ್ನು ಅಶುದ್ಧ ಮಾಡುತ್ತಿದ್ದೀರಿ.
18ನಿಮ್ಮ ಪೂರ್ವಿಕರು ಹೀಗೆ ಮಾಡಿದ್ದರಿಂದಲೆ ನಮ್ಮ ದೇವರು ಈ ಎಲ್ಲಾ ಕೇಡನ್ನ ನಮ್ಮ ಮೇಲೂ ನಮ್ಮ ಪಟ್ಟಣದ ಮೇಲೂ ಬರಮಾಡಿದ್ದಾರೆ. ಹೀಗಿರಲಾಗಿ, ನೀವೂ ಸಬ್ಬತ್ ದಿನವನ್ನು ಅಶುದ್ಧಮಾಡಿ ಇಸ್ರಯೇಲರ ಮೇಲಿದ್ದ ದೇವಕೋಪವನ್ನು ಹೆಚ್ಚಿಸಬೇಡಿ,” ಎಂದು ಹೇಳಿ ಅವರನ್ನು ಗದರಿಸಿದೆ.
19ಇದಲ್ಲದೆ “ಸಬ್ಬತ್‌ದಿನ ಪ್ರಾರಂಭವಾಗುವುದಕ್ಕಿಂತ ಮೊದಲು ಜೆರುಸಲೇಮಿನ ಬಾಗಿಲುಗಳಲ್ಲಿ ಕತ್ತಲಾಗುವಾಗಲೇ ಕದಗಳನ್ನು ಮುಚ್ಚಿಸಬೇಕು; ಸಬ್ಬತ್‌ದಿನ ಗತಿಸುವುದಕ್ಕಿಂತ ಮುಂಚೆ ಅವುಗಳನ್ನು ತೆರೆಯಬಾರದು,” ಎಂದು ಆಜ್ಞಾಪಿಸಿದೆ. ಯಾವ ಹೊರೆಯೂ ಒಳಗೆ ಬಾರದಂತೆ ನನ್ನ ಸೇವಕರಲ್ಲಿ ಕೆಲವರನ್ನು ಬಾಗಿಲುಗಳ ಬಳಿಯಲ್ಲಿ ಕಾವಲಿರಿಸಿದೆ.
20ಆದುದರಿಂದ ವರ್ತಕರು ಹಾಗು ಎಲ್ಲ ತರದ ದಿನಸುಗಳನ್ನು ಮಾರುವುದಕ್ಕೆ ಬಂದವರು ಒಂದೆರಡು ಸಾರಿ ಜೆರುಸಲೇಮಿನ ಹೊರಗಡೆಯೇ ಇಳಿದುಕೊಂಡರು.
21ಕಡೆಗೆ ನಾನು ಅವರನ್ನು, “ನೀವು ಗೋಡೆಯ ಹೊರಗೇಕೆ ಇಳಿದುಕೊಂಡಿದ್ದೀರಿ? ನೀವು ಮತ್ತೆ ಹೀಗೆ ಮಾಡಿದರೆ ನಿಮ್ಮನ್ನು ಸೆರೆಹಿಡಿಸುವೆನು,” ಎಂದು ಗದರಿಸಿದೆ.
22ಅವರು ಅಂದಿನಿಂದ ಸಬ್ಬತ್ ದಿನದಂದು ಪುನಃ ಬರಲಿಲ್ಲ. ಆಮೇಲೆ ನಾನು ಲೇವಿಯರಿಗೆ, “ಸಬ್ಬತ್‌ದಿನವನ್ನು ಪರಿಶುದ್ಧ ದಿನವೆಂದು ಆಚರಿಸುವ ಹಾಗೆ ನೀವು ನಿಮ್ಮನ್ನು ಶುದ್ಧಿಪಡಿಸಿಕೊಂಡು ಬಂದು ಬಾಗಿಲುಗಳನ್ನು ಕಾಯಬೇಕು,” ಎಂದು ಆಜ್ಞಾಪಿಸಿದೆ. “ನನ್ನ ದೇವರೇ, ಇದನ್ನೂ ನನ್ನ ಹಿತಕ್ಕಾಗಿ ನೆನಪುಮಾಡಿಕೊಂಡು ನಿಮ್ಮ ಮಹಾಕೃಪೆಗನುಸಾರ ನನ್ನನ್ನು ಕನಿಕರಿಸಿರಿ.”

23 ಅದೇ ಕಾಲದಲ್ಲಿ ಅಷ್ಡೋದ್, ಅಮ್ಮೋನಿಯ ಹಾಗು ಮೋವಾಬ್ ಮಹಿಳೆಯರನ್ನು ಮದುವೆಮಾಡಿಕೊಂಡ ಯೆಹೂದ್ಯರನ್ನು ಕುರಿತು ನಾನು ವಿಚಾರಮಾಡಿದೆ.
24ಅವರ ಮಕ್ಕಳಲ್ಲಿ ಅರ್ಧಮಂದಿ ಜುದೇಯದ ಭಾಷೆಯಲ್ಲಿ ಮಾತಾಡಲರಿಯದೆ ಅಷ್ಡೋದ್ಯ ಮುಂತಾದ ಜನರ ಭಾಷೆಯನ್ನಾಡುತ್ತಾರೆ ಎಂದು ತಿಳಿಯಿತು.
25ಕೋಪಗೊಂಡು ಅವರನ್ನು ಶಪಿಸಿದೆ; ಅವರಲ್ಲಿ ಕೆಲವರನ್ನು ಹೊಡೆದು ಅವರ ಕೂದಲುಗಳನ್ನು ಕೀಳಿಸಿದೆ.
26“ಅಂಥ ಮಹಿಳೆಯರ ದೆಸೆಯಿಂದಲೇ ಇಸ್ರಯೇಲ್ ಅರಸ ಸೊಲೊಮೋನನು ದೋಷಿಯಾದ; ಅನೇಕಾನೇಕ ಜನಾಂಗಗಳಲ್ಲಿ ಅವನಿಗೆ ಸಮಾನನಾದ ಅರಸನಿರಲಿಲ್ಲ; ಅವನು ತನ್ನ ದೇವರಿಗೆ ವಿಶೇಷ ಪ್ರಿಯನು; ಆದುದರಿಂದಲೇ ದೇವರು ಅವನನ್ನು ಎಲ್ಲ ಇಸ್ರಯೇಲರ ಮೇಲೆ ಅರಸನನ್ನಾಗಿ ನೇಮಿಸಿದರು. ಆದರೂ ಅನ್ಯದೇಶದ ಮಹಿಳೆಯರು ಅವನನ್ನು ಪಾಪದಲ್ಲಿ ಬೀಳಿಸಿದರು.
27ಹೀಗಿರಲಾಗಿ, ನೀವೂ ಅನ್ಯಮಹಿಳೆಯರನ್ನು ಮದುವೆ ಮಾಡಿಕೊಂಡು, ಅದೇ ಘೋರವಾದ ದುಷ್ಟತ್ವವನ್ನು ನಡೆಸಿ, ದೇವರಿಗೆ ದ್ರೋಹಿಗಳಾಗುವುದನ್ನು ನಾವು ಒಪ್ಪಿಕೊಳ್ಳುವುದಿಲ್ಲ,” ಎಂದು ಅವರನ್ನು ಗದರಿಸಿದೆ. “ಅನ್ಯರ ಮಕ್ಕಳಿಗೆ ಹೆಣ್ಣುಕೊಡಬಾರದು; ನಮಗಾಗಲಿ ನಮ್ಮ ಮಕ್ಕಳಿಗಾಗಲಿ ಅವರಿಂದ ಹೆಣ್ಣುತರಲೂ ಬಾರದು” ಎಂಬ ಧರ್ಮವಿಧಿಯನ್ನು ಕೈಗೊಳ್ಳುವುದಾಗಿ ದೇವರ ಹೆಸರಿನಲ್ಲಿ ಅವರಿಂದ ಪ್ರಮಾಣ ಮಾಡಿಸಿದೆ.

28 ಮಹಾಯಾಜಕ ಎಲ್ಯಾಷೀಬನ ಮಗ ಯೋಯಾದನ ಮಕ್ಕಳಲ್ಲೊಬ್ಬನು ಹೊರೋನ್ಯನಾದ ಸನ್ಬಲ್ಲಟನಿಗೆ ಅಳಿಯನಾದುದರಿಂದ ಅವನನ್ನು ನನ್ನ ಸನ್ನಿಧಿಯಿಂದ ಓಡಿಸಿಬಿಟ್ಟೆ.
29 “ನನ್ನ ದೇವರೇ,

ಅವರು ಯಾಜಕತ್ವವನ್ನೂ ಯಾಜಕರ ಮತ್ತು ಲೇವಿಯರ ಪ್ರತಿಜ್ಞೆಯನ್ನೂ ಹೊಲೆ ಮಾಡಿದ್ದಾರೆ; ಇದನ್ನು ನೆನಪುಮಾಡಿಕೊಳ್ಳಿ." 30ನಾನು ಈ ಪ್ರಕಾರ ಅನ್ಯವಾದ್ದನ್ನೆಲ್ಲಾ ತೆಗೆಸಿ, ಅವರನ್ನು ಶುದ್ಧಪಡಿಸಿದೆ; ಯಾಜಕರಲ್ಲೂ ಲೇವಿಯರಲ್ಲೂ ಪ್ರತಿಯೊಬ್ಬನಿಗಿದ್ದ ಕೆಲಸದ ವಿಷಯವಾಗಿ ಹಾಗು 31ನೇಮಿತ ಕಾಲಗಳಲ್ಲಿ ಸಲ್ಲತಕ್ಕ ಕಾಷ್ಠದಾನದ ಮತ್ತು ಪ್ರಥಮ ಫಲದ ವಿಷಯವಾಗಿ ಕ್ರಮಗಳನ್ನು ಏರ್ಪಡಿಸಿದೆ; ನನ್ನ ದೇವರೇ, ನನ್ನ ಹಿತಕ್ಕಾಗಿ ಇದನ್ನು ನೆನಪು ಮಾಡಿಕೊಳ್ಳಿ.